ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 06 | PAGE- ಪುಟ 8 | ಶುಕ್ರವಾರ 07.02.2025 | RS.ಬೆಲೆ 2/-

## ಖರ್ಗೆ ಶ್ಲಾಘಿಸಿ, ಗಾಂಧಿ ಪರಿವಾರಕ್ಕೆ ತಿವಿದ ಪ್ರಧಾನಿ

ನವದೆಹಲಿ:ಫೆ.6: ಸಂಸತ್ ಅಧಿವೇಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೆ ಕಾಂಗ್ರೆಸ್ ಪಕ್ಷವನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದ್ದು, ಈ ಬಾರಿ ಎಐಸಿಸಿ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರನ್ನು ಹೊಗಳುತ್ತಲೇ ಕಾಂಗ್ರೆಸ್ ಪಕ್ಷಕ್ಕೆ ನೇರವಾಗಿ ತಿವಿದಿದ್ದಾರೆ.

ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆಯ ಸಂದರ್ಭದಲ್ಲಿ ರಾಜ್ಯಸಭೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ತನ್ನ ಮಾತಿನ ನಡುವೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಶ್ಲಾಘಿಸಿದರು. ನರೇಂದ್ರ ಮೋದಿ ಅವರು ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರನ್ನು ತಮ್ಮ ಶಾಯರಿ ಮೂಲಕ ಗುಣಗಾನ ಮಾಡಿದರು.



ಸುಮಾರು ಒಂದೂವರೆ ಗಂಟೆಗಳ ಕಾಲ ಮಾತನಾಡಿದ ಪ್ರಧಾನಿ ಮೋದಿ, ಹೆಚ್ಚು ಕಾಲದ ಭಾಷಣದಲ್ಲಿ ಗಾಂಧಿ ಕುಟುಂಬವನ್ನು ನೇರವಾಗಿ ಗುರಿಯಾಗಿಸಿಕೊಂಡು ಟೀಕಿಸಿದರು. ನೆಹರು ಸರ್ಕಾರ ಮತ್ತು ತುರ್ತು ಪರಿಸ್ಥಿತಿಯ ಸಂದರ್ಭಗಳನ್ನು ನೆನಪಿಸಿಕೊಂಡ ಅವರು, ಕಾಂಗ್ರೆಸ್ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುತ್ತಿದೆ ಎಂದು ಆರೋಪಿಸಿದರು.

ಅತ್ತ ಕಾಂಗ್ರೆಸ್ ಪಕ್ಷಕ್ಕೆ ತಿವಿಯುತ್ತಲೇ ಮೋದಿ, ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರ ಸಾರ್ವಜನಿಕ

(2ನೇ ಪುಟ ನೋಡಿ)

## ಅಕ್ರಮ ಮರಳು ಗಣಿಗಾರಿಕೆಗೆ ಬಳಸುತ್ತಿದ್ದ ದೋಣಿ ಬೆಂಕಿ ಹಚ್ಚಿ ನಾಶ

ಮಲ್ಲಮ್ಮನುಡಿ ವಾರ್ತೆ ಬೀದರ. ಫೆ.06:–ಮಾಂಜ್ರಾ ನದಿಯಲ್ಲಿ ಅಕ್ರಮ ಮರಳು ಗಣಿಗಾರಿಕೆಗೆ ಬಳಸುತ್ತಿದ್ದ ಯಂತ್ರಚಾಲಿತ ದೋಣಿಯನ್ನು ಜಪ್ತಿ ಮಾಡಿ, ಅದಕ್ಕೆ ಬೆಂಕಿ ಹಚ್ಚಿ ಅಧಿಕಾರಿಗಳು ನಾಶಪಡಿಸಿದ್ದಾರೆ.

'ಮರಳು ಅಕ್ರಮ ಗಣಿಗಾರಿಕೆ; ಬೀಳದ ಕಡಿವಾಣ' ಶೀರ್ಷಿಕೆ ಅಡಿ ಫೆ. 5ರಂದು ವರದಿ ಪ್ರಕಟಿಸಿತ್ತು.



ವರದಿ ಬೆನ್ನಲ್ಲೇ ಸಿಪಿಐ ಗುರುನಾಥ ಬಿರಾದಾರ, ಉಪ ತಹಶೀಲ್ದಾರ್ ಸುನೀಲಕುಮಾರ ಸಜ್ಜನ, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಕಿರಿಯ ವಿಜ್ಞಾನಿ ಧನರಾಜ ಅವರ ನೇತೃತ್ವದ ತಂಡ ಗುರುವಾರ ಮಾಂಜ್ರಾ ನದಿಗೆ ಭೇಟಿ ಕೊಟ್ಟು, ಯಂತ್ರಚಾಲಿತ ದೋಣಿ ಜಪ್ತಿ ಮಾಡಿ, ಅದಕ್ಕೆ ಬೆಂಕಿ ಹಚ್ಚಿ ನಾಶಗೊಳಿಸಿದ್ದಾರೆ.

ಸಿಪಿಐ ಗುರುನಾಥ ಬಿರಾದಾರ ಮಾತನಾಡಿ, ವರದಿ ಹಾಗೂ ಗ್ರಾಮಸ್ಥರ ದೂರಿನ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಯಾರಾದರೂ ಅಕ್ರಮ ಮರಳು ಗಣಿಗಾರಿಕೆಯಲ್ಲಿ ತೊಡಗಿಸಿಕೊಂಡರೆ ಅಂತಹವರ ಬಗ್ಗೆ ಮಾಹಿತಿ ನೀಡಿ, ಪೊಲೀಸರಿಗೆ ಸಹಕಾರ ಕೊಡಬೇಕೆಂದು ಕೋರಿದ್ದಾರೆ.

ಭೂ ವಿಜ್ಞಾನಿ ಧನರಾಜ್ ಬಲ್ಲೂರಕರ, ಪಿಎಸ್ಐ ಶಿವಕುಮಾರ ಬಳತೆ, ಎಎಸ್ಐ ಚಂದ್ರಶೇಖರ್, ಸಿಬ್ಬಂದಿ ಮಹಾಂತೇಶ್, ಶ್ರೀಶೈಲ ಗಿರಿ ಹಾಜರಿದ್ದರು.

## ಬಿಜೆಪಿ ಎಂದರೆ ಬುರುಡೆ ಜನರ ಪಕ್ಷ ಸಾಮಾನ್ಯ ಗಣಿತ ಬಾರದ ಅಜ್ಞಾನಿಗಳು; ರಾಮಲಿಂಗಾ ರೆಡ್ಡಿ

ಬೆಂಗಳೂರು:ಫೆ.6: ಬಿಜೆಪಿ ಕರ್ನಾಟಕ ಎಂದರೆ ಬುರುಡೆ ಜನರ ಪಕ್ಷ, ಅವರಿಗೆ ಬುರುಡೆಯಲ್ಲಿ ಮೆದುಳು ಇದೆಯೋ ಇಲ್ಲವೋ ಗೊತ್ತಿಲ್ಲ. ಬುರುಡೆ ಜನರೆಲ್ಲ ಕೂಡಿ–ಕೊಂಡು ಪುಂಖಾನುಪುಂಖವಾಗಿ ಸುಳ್ಳನ್ನೇ ಸತ್ಯವೆಂದು ಬಿಂಬಿಸುವ ಬುರುಡೆ ಪಕ್ಷದವರು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಕಿಡಿ ಕಾರಿದ್ದಾರೆ.



ಬಿಜೆಪಿ ಪೋಸ್ಟ್ ಉಲ್ಲೇಖಿಸಿ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಸಾರಿಗೆ ಸಂಸ್ಥೆಗಳು ಲೋನ್ ತೆಗೆದುಕೊಳ್ಳಬೇಕು ಯಾಕೆಂದರೆ, ತಮ್ಮ ಪಕ್ಷದ ದುರಾಡಳಿತದ ಅವಧಿಯಲ್ಲಿನ ?5900 ಕೋಟಿ ಸಾಲ ತೀರಿಸಬೇಕಾದ ಅನಿವಾರ್ಯತೆ ಇದೆಯಲ್ಲ ಅದಕ್ಕಾಗಿ, ಸಾರಿಗೆ ಸಂಸ್ಥೆಗಳ ಆದಾಯ ವೃದ್ದಿಯಾಗಿದೆ ಎಂದೇ ನಾವು ಪದೇ ಪದೇ ಹೇಳುತ್ತಿರುವುದು. ಲಾಭ ಆಗಿದೆ ಎಂದು ನಾವು ಎಲ್ಲೂ ಹೇಳಿಲ್ಲ ಎಂದು ರಾಮಲಿಂಗಾರೆಡ್ಡಿ ಹೇಳಿದ್ದಾರೆ.

(2ನೇ ಪುಟ ನೋಡಿ)

## ವಡಗೇರಾ ಭಾಗದ ನೀರಾವರಿ ಯೋಜನೆ:

ಮಲ್ಲಮ್ಮನುಡಿ ವಾರ್ತೆ 230 ಕೋಟಿ ರೂ. ಬಿಡುಗಡೆಗೆ ಉಪಮುಖ್ಯಮಂತ್ರಿ ಡಿಕೆಶಿ ಭರವಸೆ: ಶಾಸಕ ತುನ್ನೂರು

ಯಾದಗಿರಿ:ಫೆ.6: ಜಿಲ್ಲೆಯ ವಡಗೇರಾ ಭಾಗದ ನೀರಾವರಿ ಯೋಜನೆಗಳ ಅಭಿವೃದ್ಧಿಗಾಗಿ 230 ಕೋಟಿ ರೂ. ಮಂಜೂರು ಮಾಡುವುದಾಗಿ ಉಪಮುಖ್ಯಮಂತ್ರಿಗಳೂ ಆದ ನೀರಾವರಿ ಸಚಿವ ಡಿ.ಕೆ.ಶಿವಕುಮಾರ ಭರವಸೆ



(2ನೇ ಪುಟ ನೋಡಿ)

## ಗ್ಯಾರಂಟಿ ಯೋಜನೆಗಳಿಂದ ಸಮಾಜದಲ್ಲಿ ಧನಾತ್ಮಕ ಬದಲಾವಣೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಫೆ.06:ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳಿಂದ ಸಮಾಜದಲ್ಲಿ ಧನಾತ್ಮಕ ಬದಲಾವಣೆಗಳು ಆಗುತ್ತಿದ್ದು, ಸಮಾಜಮುಖಿ ಕಾರ್ಯಗಳು ಸಹ ಆಗುತ್ತಿವೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷ ಎಸ್.ಆರ್.ಮೆಹರೋಜ್ ಖಾನ್ ಅವರು ಹೇಳಿದರು.



ರಾಜ್ಯ ಸರ್ಕಾರದ ಪ್ರತಿಷ್ಠಿತ ಪಂಚಗ್ಯಾರಂಟಿ ಯೋಜನೆಗಳ ಕುರಿತು ಸಂಡೂರು ತಾಲ್ಲೂಕಿನ ನಂದಿಹಳ್ಳಿ ಬಳಿಯ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರದಲ್ಲಿ ಪ್ರಾಧ್ಯಾಪಕರು, ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳೊಂದಿಗೆ ಗುರುವಾರ ಏರ್ಪಡಿಸಿದ್ದ ಮುಕ್ತ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಪ್ರಮುಖ ಐದು ಗ್ಯಾರಂಟಿ ಯೋಜನೆಗಳ ಸೌಲಭ್ಯವನ್ನು ರಾಜ್ಯದ ನಾಲ್ಕುವರೆ ಕೋಟಿ ಜನರು ಪಡೆದುಕೊಳ್ಳುತ್ತಿದ್ದು, ಶೇ.98 ರಷ್ಟು ಗುರಿ ಪ್ರಗತಿ ಸಾಧಿಸಲಾಗಿದೆ, ಉಳಿದಂತೆ

(2ನೇ ಪುಟ ನೋಡಿ)

## ಮಾರಕಾಸ್ತ್ರ ಹಿಡಿದು ರೀಲ್ಸ್ ಮಾಡುತ್ತಿದ್ದ ಐವರ ಬಂಧನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಫೆ.6:ಮಾರಕಾಸ್ತ್ರಗಳನ್ನು ಹಿಡಿದು ರೀಲ್ಸ್ ಮಾಡಿ ಜನರಲ್ಲಿ ಭೀತಿ ಹುಟ್ಟಿಸುತ್ತಿದ್ದ ಐವರು ಯುವಕರನ್ನು ನಗರದ ವಿಶ್ವವಿದ್ಯಾಲಯ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಆಜಾದಪುರ ಉಮರ್ ಕಾಲೊನಿಯ ಗುಲಾಮ್ ನಬಿ ಅಲಿಯಾಸ್ ಬಿಲಾಲ್ ತಂದೆ ಎಂ.ಡಿ.ಅಲಾವುದ್ದೀನ್ (21), ಮಹ್ಮದ್ ಪರ್ವೆಜ್ ತಂದೆ ಮೊಹ್ಮದ್ ಗುಂಡು (27), ಸೈಯದ್ ಖದೀರ್ ತಂದೆ

(2ನೇ ಪುಟ ನೋಡಿ)

## ಆನೆಕಾಲು ರೋಗ ನಿವಾರಣೆಗೆ ಫೆ. 10 ರಿಂದ 28 ರವರೆಗೆ ಸಾಮೂಹಿಕ ಔಷಧಿ ನುಂಗಿಸುವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಫೆ 06:ಆನೆಕಾಲು ರೋಗವನ್ನು 2027ಕ್ಕೆ ನಿವಾರಣೆ ಮಾಡುವ ಗುರಿಯನ್ನು ಹೊಂದಲಾಗಿದ್ದು, ಗುರಿ ಸಾಧನೆಗೆ ಸಾಮೂಹಿಕ ಔಷಧಿ ನುಂಗಿಸುವ ಕಾರ್ಯಕ್ರಮವನ್ನು ಫೆಬ್ರವರಿ 10 ರಿಂದ 28 ರವರೆಗೆ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ, ಆನೆಕಾಲು ಪೀಡಿತ ಪ್ರದೇಶದಲ್ಲಿ ವಾಸಿಸುವ ಎರಡು ವರ್ಷ ಮತ್ತು ಮೇಲ್ಪಟ್ಟ ಎಲ್ಲಾ ಅರ್ಹ ಜನರಿಗೆ ವರ್ಷಕ್ಕೊಂದು ಬಾರಿ ವಯಸ್ಸಿಗನುಗುಣವಾಗಿ ಆನೆಕಾಲು ರೋಗದ ವಿರುದ್ಧದ ಮಾತ್ರೆಗಳನ್ನು ಮನೆ–ಮನೆಗೆ ತೆರಳಿ ನುಂಗಿಸಲಾಗುತ್ತದೆ.



ಆನೆಕಾಲು ರೋಗವು ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಬಾಗಲಕೋಟೆ, ರಾಯಚೂರು, ಬೀದರ್, ಕಲಬುರಗಿ, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಮಸ್ಯಾತ್ಮಕವಾಗಿದ್ದು, ಎಂಡಿಎ ಕಾರ್ಯಕ್ರಮವನ್ನು ಯಶಸ್ವಿಯಾಗಿ ಕೈಗೊಂಡ ಪರಿಣಾಮವಾಗಿ ಮೊದಲ ಐದು ಜಿಲ್ಲೆಗಳು ರೋಗನಿವಾರಣಾ ಹಂತವನ್ನು ತಲುಪಿ ಎಂಡಿಎ ಕಾರ್ಯಕ್ರಮವನ್ನು ಸ್ಥಗಿತಗೊಳಿಸಿರುತ್ತವೆ. ಉಳಿದ ನಾಲ್ಕು ಜಿಲ್ಲೆಗಳ ಕೆಲವು ಸಮಸ್ಯಾತ್ಮಕ ತಾಲೂಕುಗಳಲ್ಲಿ ಎಂಡಿಎ ಕಾರ್ಯಕ್ರಮ ಪ್ರಸ್ತುತ ಜಾರಿಯಲ್ಲಿರುತ್ತದೆ. ಸಾಮೂಹಿಕ ಔಷಧಿ ನುಂಗಿಸುವ ಕಾರ್ಯಕ್ರಮದಲ್ಲಿ ವರ್ಷಕ್ಕೆ ಒಂದು ಬಾರಿ ಮಾತ್ರವೇ ಅರ್ಹ ವ್ಯಕ್ತಿಯ ವಯಸ್ಸಿಗೆ ಅನುಗುಣವಾಗಿ ಮಾತ್ರೆಗಳನ್ನು ನುಂಗಿಸಲಾಗುತ್ತದೆ. ಹಾಗೂ ಮಾತ್ರೆ ಸೇವಿಸಿದ ಪ್ರತಿ ವ್ಯಕ್ತಿಯ ಎಡಗೈ ಕಿರುಬೆರಳಿಗೆ ಅಳಿಸಲಾಗದ ಶಾಯಿಯಲ್ಲಿ ಗುರುತು ಹಾಕಲಾಗುತ್ತದೆ.

ಈ ಮಾತ್ರೆಗಳು ಸಂಪೂರ್ಣ ಸುರಕ್ಷಿತವಾಗಿದ್ದು ಕೆಲವರಲ್ಲಿ ಮಾತ್ರ ವಾಕರಿಕೆ. ತಲೆನೋವಿನಂತಹ ಸಣ್ಣಪುಟ್ಟ ತೊಂದರೆಗಳಾಗಬಹುದು. ಇದನ್ನು ನಿವಾರಿಸಲು ಇಲಾಖೆಯು ತಂಡಗಳೊಂದಿಗೆ ಸಜ್ಜಾಗಿರುತ್ತದೆ.

ಫೆಬ್ರವರಿ 10 ರಿಂದ 28 ರ ವರೆಗೆ ಬೀದ???ನ ಔರಾದ್, ಕಲಬುರಗಿಯ ಅಫ್ಜಲಪುರ, ಜೇವರ್ಗಿ ಎ, ಸೇಡಂ, ಆಳಂದ ಬಿ, ಚೊಂಚೋಳಿ ಎ ಮತ್ತು ಕಲಬುರಗಿ ಗ್ರಾ. ಬಿ, ವಿಜಯಪುರ ಜಿಲ್ಲೆಯ ಸಿಂದಗಿ ಎ, ಮುದ್ದೇಬಿಹಾಳ ಬಿ, ಯಾದಗಿರಿಯ ವಡಗೇರ ಬ್ಲಾಕುಗಳಲ್ಲಿ 'ಸಾಮೂಹಿಕ ಔಷಧಿ ನುಂಗಿಸುವ' ಕಾರ್ಯಕ್ರಮವನ್ನು ನಿಗದಿಗೊಳಿಸಲಾಗಿದ್ದು, ಎಲ್ಲಾ ಅರ್ಹ ಜನರು ಮಾತ್ರೆಗಳನ್ನು ಸೇವಿಸುವ ಮೂಲಕ ಆನೆಕಾಲು ರೋಗ ನಿವಾರಣೆಗೆ ಸಹಕರಿಸಬೇಕಾಗಿ ಕೋರಲಾಗಿದೆ.

ಈ ಬ್ಲಾಕುಗಳು

(2ನೇ ಪುಟ ನೋಡಿ)

## ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣ ಕಾಲಮಿತಿಯೊಳಗೆ ಇತ್ಯರ್ಥಗೊಳಿಸಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಫೆ.06: ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥಗೊಳಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚಿಸಿದರು.



ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಮತ್ತು ಕೇಂದ್ರ ಪುರಸ್ಕರ ಯೋಜನೆಗಳು ಮಕ್ಕಳಾ ರಕ್ಷಣಾ ಸೇವೆಗಳನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಕೌಟುಂಬಿಕ ದೌರ್ಜನ್ಯ, ಅತ್ಯಾಚಾರ, ಬೇಟಿ ಬಚಾವು, ಬೇಟಿ ಪಡಾವು, ಪೋಕ್ಸೋ, ಬಾಲ್ಯವಿವಾಹ ನಾಪತ್ತೆ ಇತರೆ ಪ್ರಕರಣಗಳ ಬಗ್ಗೆ ಹೆಚ್ಚಿನ ಗಮಹರಿಸಿ ಕಾರ್ಯನಿರ್ವಹಿಸಬೇಕೆಂದರು.

ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿಗಳು ಪ್ರಧಾನಮಂತ್ರಿ ಮಾತೃವರ್ದನಾ ಯೋಜನೆಯಡಿ ಕಡ್ಡಾಯವಾಗಿ ಮನೆ ಮನೆ ತೆರಳಿ ಮೊದಲ ಪ್ರಸವ ಗರ್ಭಿಣಿ, ಬಾಣಂತಿ ಫಲಾನುಭವಿಗಳ ನೋಂದಣಿ ಮಾಡಿಕೊಂಡು ಅವರಿಗೆ ತಾಯಿ ಕಾರ್ಡ ವಿತರಿಸಿ ಅವರಿಗೆ ಸಿಗಬೇಕಾದ ಸೌಲಭ್ಯಗಳು ಸಿಗುವಂತೆ ನೋಡಿಕೊಳ್ಳಬೇಕು. ಸ್ವಚ್ಛತಾ, ಗೃಹ ಯೋಜನೆಯಡಿ ಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗೆ ಸರ್ಕಾ–ರೇತರ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಮಹಿಳೆಯರಿಗೆ ಆಶ್ರಯ, ಆಹಾರ, ಬಟ್ಟೆ, ತರಬೇತಿ ಸೇರಿದಂತೆ ಶಿಕ್ಷಣ ನೀಡುವುದರ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರಾಗುವಂತೆ ನೋಡಿಕೊಳ್ಳಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ತುಕ, ಎತ್ತರ ಹಾಗೂ ಎಡಗೈ ತೋಳ ಅಳತೆಯ ಮಾಪನ ಮಾಡಿ ಅಪೌಷ್ಠಿಕ ಮಕ್ಕಳ ಪಟ್ಟಿಯನ್ನು ಸಿದ್ಧಪಡಿಸಿ ಈ ಮಕ್ಕಳ ಮೇಲೆ ಹೆಚ್ಚಿನ ನೀಗಾ ವಹಿಸಬೇಕು. ಪೋಷಣ ಅಭಿಯಾನ ಯೋಜನೆಯ 0 ರಿಂದ 6 ವರ್ಷದವರೆಗಿನ ಮಕ್ಕಳು, ಕಿಶೋರಿಯರು, ಗರ್ಭಿಣಿ ಮತ್ತು ಬಾಣಂತಿಯರ ಪೌಷ್ಠಿಕತಾ ಮಟ್ಟವನ್ನು ಸುಧಾರಿಸಬೇಕು ಎಂದರು.

ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ಮಟ್ಟದ ರಕ್ಷಣಾ ಘಟಕ ವತಿಯಿಂದ ನಡೆಯುವ ವಿವಿಧ ಯೋಜನೆಗಳಾದ ಮಿಷನ್ ಶಕ್ತಿ ಯೋಜನೆ, ಒನ್ ಸ್ಟಾಪ ನಂಬರ ಯೋಜನೆ, ಶಕ್ತಿ ಸದನೆ ಮಹಿಳೆಯರ ಮತ್ತು ಮಕ್ಕಳ ಅನ್ಯೆತಿಕ ಸಾಗಟ, ಬಾಲ್ಯ ವಿವಾಹ ಇನ್ನಿತರ ಯೋಜನೆಗಳ ಕುರಿತು ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಸಮಾಜದಲ್ಲಿ ಧನಾತ್ಮಕ ಬದಲಾವಣೆ

ಶೇಕಡ ನೂರಕ್ಕೆ ನೂರರಷ್ಟು ಪ್ರಗತಿ ಸಾಧಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಅವರು ತಿಳಿಸಿದರು. ಗೃಹಲಕ್ಷ್ಮಿ ಯೋಜನೆಯಿಂದ ಮಹಿಳೆಯರಲ್ಲಿ ಆರ್ಥಿಕ ಸ್ವಾವಲಂಬನೆ ಹೆಚ್ಚಾಗುತ್ತಿದೆ. ಸ್ವಯಂ ಉದ್ಯೋಗ ಸೃಷ್ಟಿಯಾಗಿ ನಿರುದ್ಯೋಗ ಕಡಿಮೆಯಾಗುತ್ತಿದೆ. ಪಂಚ ಗ್ಯಾರಂಟಿ ಯೋಜನೆಗಳು ಎಲ್ಲ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕೆಲಸ ಪ್ರತಿ ತಾಲ್ಲೂಕಿನಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರವು ಮಾಡುತ್ತಿದೆ ಎಂದು ಅವರು ತಿಳಿಸಿದರು.

ಸಂಡೂರು ಶಾಸಕರಾದ ಈ.ಅನ್ನಪೂರ್ಣ ಅವರು ಮಾತನಾಡಿ, ರಾಜ್ಯದ ಮಹತ್ವಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ತುಂಬಾ ಆಸಕ್ತಿಯಿಂದ ಜಾರಿ ಮಾಡಿದೆ. ಎಲ್ಲಾ ಅಧಿಕಾರಿಗಳು ಮತ್ತು ಪ್ರಾಧಿಕಾರವೂ ಸೇರಿ ಪಂಚ ಗ್ಯಾರಂಟಿಗಳ ಸಮರ್ಪಕ ಅನುಷ್ಠಾನಕ್ಕೆ ಶ್ರಮಿಸಬೇಕೆಂದು ಕರೆ ನೀಡಿದರು.

ವಿದ್ಯಾಕೇಂದ್ರದ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರದ ಗಮನ ಸೆಳೆಯಲಾಗುವುದು. ವಿದ್ಯಾರ್ಥಿಗಳು ಶೈಕ್ಷಣಿಕ, ರಾಜಕೀಯ ಮತ್ತು ಆಡಳಿತಾತ್ಮಕ ಕ್ಷೇತ್ರದಲ್ಲಿ ಸಾಧನೆ ಮಾಡಿ ನಂದಿಹಳ್ಳಿ ಸ್ನಾತಕೋತ್ತರ ಪದವಿ ಕೇಂದ್ರದ ಕೀರ್ತಿ ಹೆಚ್ಚಿಸಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಗೃಹಲಕ್ಷ್ಮಿ ಯೋಜನೆ ಕೇವಲ ತಾಯಂದಿರು ಮಾತ್ರವಲ್ಲ, ಹಲವು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೂ ನೆರವಾಗುತ್ತಿದೆ. ವಿದ್ಯಾರ್ಥಿಗಳ ಭವಿಷ್ಯಕ್ಕೆ ಪಂಚ ಗ್ಯಾರಂಟಿ ಯೋಜನೆಗಳು ಸದ್ಬಳಕೆಯಾಗುತ್ತಿವೆ. ಶಕ್ತಿ ಯೋಜನೆಯಿಂದ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ಮಹಿಳೆಯರಿಗೆ ಆರ್ಥಿಕ ಉಳಿತಾಯವಾಗುತ್ತಿದೆ ಎಂದು ಅವರು ಹೇಳಿದರು.

ಯುವನಿಧಿ ಶಕ್ತಿ ಯೋಜನೆಯಿಂದ ವಿದ್ಯಾರ್ಥಿಗಳಿಗೆ ಆಗುತ್ತಿರುವ ಅನುಕೂಲಗಳ ಕುರಿತು ಮಾಹಿತಿ ನೀಡಿ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಮುಕ್ತ ಸಂವಾದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಗ್ಯಾರಂಟಿ ಯೋಜನೆಗಳ ಬಗ್ಗೆ ತಮ್ಮ ಅನಿಸಿಕೆ–ಅಭಿಪ್ರಾಯಗಳನ್ನು ಮುಕ್ತವಾಗಿ ಹಂಚಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷರಾದ ಆಶಾಲತಾ ಸೋಮಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಉಪನಿರ್ದೇಶಕ ವಿಜಯಕುಮಾರ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ಸಕೀನಾ, ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಹಟ್ಟಪ್ಪ, ಡಿಟಿಓ ಚಾಮರಸ ಸೇರಿದಂತೆ, ಜೆಸ್ಕಾಂ ಅಧಿಕಾರಿಗಳು, ವಿವಿ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರು, ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರೀಲ್ಸ್ ಮಾಡುತ್ತಿದ್ದ ಐವರ ಬಂಧನ

ಮೊಹ್ಮದ್ ಹುಸೇನ್ (24), ಶೇಖ್ ಶೋಯೆಬ್ ತಂದೆ ಶೇಖ್ ಮೊಹ್ಮದ್ (22) ಹಾಗೂ ಗರೀಬ್ ನವಾಜ್ ಕಾಲೊನಿಯ ಅಸ್ಲಮ್ ಪಟೇಲ್ ತಂದೆ ಪಾಶಾ ಪಟೇಲ್ (24) ಬಂಧಿತ ಯುವಕರು ಎಂದು ಪೊಲೀಸರು ತಿಳಿಸಿದ್ದಾರೆ.

ಪಿಸ್ತೂಲು ಹಾಗೂ ತಲವಾರು ಹಿಡಿದು ಈ ಯುವಕರು ರೀಲ್ಸ್ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಯಬಿಟ್ಟು,ತಮ್ಮ ಬಗ್ಗೆ ಸುತ್ತಲಿನ ಎಲ್ಲರೂ ಭೀತಿಗೊಳ್ಳುವಂತೆ ಮಾಡುತ್ತಿದ್ದರು. ಈ ಕುರಿತು ಮಾಹಿತಿ ಸಂಗ್ರಹಿಸಿದ ಪೊಲೀಸರು ತಕ್ಷಣ ಎಲ್ಲ ಐವರನ್ನು ವಶಕ್ಕೆ ಪಡೆದು ಅವರಲ್ಲಿದ್ದ ಪಿಸ್ತೂಲು, ತಲವಾರು ಮತ್ತು ಚಾಕು ಸೇರಿದಂತೆ ಇನ್ನಿತರ ಮಾರಕಾಸ್ತ್ರಗಳನ್ನು ಜಪ್ತು ಮಾಡಿಕೊಂಡಿದ್ದಾರೆ.ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಾಮಾನ್ಯ ಗಣಿತ ಬಾರದ ಅಜ್ಞಾನಿಗಳು; ರಾಮಲಿಂಗಾ ರೆಡ್ಡಿ

ಆದಾಯ ಮತ್ತು ಲಾಭಕ್ಕೆ ವ್ಯತ್ಯಾಸ ತಿಳಿಯದ, ಸಾಮಾನ್ಯ ಗಣಿತವು ಬಾರದ ಅಜ್ಞಾನಿಗಳು ಬಿ.ಜೆ.ಪಿ ಅವರು. ಬಿ.ಎಸ್ ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರ ಆಡಳಿತದಲ್ಲಿ ರಾಜ್ಯ ಸರ್ಕಾರ ಹೊಸದಾಗಿ ಮಾಡಿದ ಸಾಲ 2 ಲಕ್ಷ 30 ಸಾವಿರ ಕೋಟಿ ರು. ಅದರ ಬಗ್ಗೆ ಸ್ವಲ್ಪ ಗಮನಹರಿಸಿ ವಿಷಯ ಸಂಗ್ರಹಿಸಿ ಮಾತನಾಡಿ, 1947 ರಿಂದ 2014 ರವರೆಗೆ ದೇಶದ 67 ವರ್ಷಗಳ ಇತಿಹಾಸದಲ್ಲಿ ಎಲ್ಲಾ ಪ್ರಧಾನಮಂತ್ರಿಗಳು ಮಾಡಿದ ಸಾಲ ಸುಮಾರು 53 ಲಕ್ಷ ಕೋಟಿಗಳು ಎಂದು ತಿರುಗೇಟು ನೀಡಿದ್ದಾರೆ.

ಇಂದಿನ ಕೇಂದ್ರ ಸರ್ಕಾರದ ಮಾಡಿರುವ ಸಾಲ 2014–2025 ರ ಅವಧಿಗೆ 149 ಲಕ್ಷ ಕೋಟಿಗಳು. ಇಲ್ಲಿಯವರೆಗೆ ಒಟ್ಟು ಸಾಲ ಇರುವುದು 202 ಲಕ್ಷ ಕೋಟಿ. ಅಂದರೆ ಅತ್ಯಂತ ಕಡಿಮೆ ಅವಧಿಯಲ್ಲಿ ಅತೀ ಹೆಚ್ಚು ಸಾಲ ಮಾಡಿದ ಕೀರ್ತಿ ಬಿಜೆಪಿಗೆ ಸಲ್ಲಬೇಕು. ದೇಶದ ಜನರಿಗೆ ಸುಳ್ಳು ಅಂಕಿ ಅಂಶಗಳನ್ನು ನೀಡಿ, ದಾರಿ ತಪ್ಪಿಸುತ್ತಾ, ಜನರ ಆರ್ಥಿಕ ಸಂಕಷ್ಟಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಯಾವುದೇ ಪ್ರಶ್ನೆಗೆ ಉತ್ತರ ನೀಡದಿರುವುದು ದುರಂತವೇ ಸರಿ ಎಂದು ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

# ಗಾಂಧಿ ಪರಿವಾರಕ್ಕೆ ತಿವಿದ ಪ್ರಧಾನಿ

ಸೇವೆಯನ್ನೂ ಶ್ಲಾಘಿಸಿದರು. "ಖರ್ಗೆ ಅವರು ಹಿರಿಯ ನಾಯಕರು ಮತ್ತು ನಾನು ಅವರನ್ನು ಯಾವಾಗಲೂ ಗೌರವಿಸುತ್ತೇನೆ. ಸಾರ್ವಜನಿಕ ವ್ಯಕ್ತಿಯಾಗಿ ಇಷ್ಟು ವರ್ಷಗಳನ್ನು ಕಳೆಯುವುದು ಸಣ್ಣ ವಿಷಯವೇನಲ್ಲ ಎಂದರು.

ಇದೇ ಸಂದರ್ಭದಲ್ಲಿ ಎದ್ದು ನಿಂತ ಮಲ್ಲಿಕಾರ್ಜುನ ಖರ್ಗೆ ಮೋದಿ ಅವರ ಮಾತಿಗೆ ಅಡ್ಡಿ ಪಡಿಸಿದರು. ಈ ವೇಳೆ ಪ್ರಧಾನಿ ಮೋದಿ ತಮ್ಮದೇ ಶೈಲಿಯಲ್ಲಿ, ನನ್ನನ್ನು ತಡೆಯಬೇಡಿ ಖರ್ಗೆ ಅವರೇ, ನಿಮಗೆ ಇಂತಹ ಮಾತುಗಳು ನಿಮ್ಮ ಮನೆಯಲ್ಲೂ ಕೇಳಿರಲು ಸಾಧ್ಯವಿಲ್ಲ. ನಿಮ್ಮ ಮನೆಯವರೇ ನಿಮ್ಮನ್ನು ಹೊಗಳುವುದಿಲ್ಲ.. ಆ ಮಾತುಗಳನ್ನು ನಾನು ಹೇಳಿ ಬಿಡುತ್ತೇನೆ ತಡೆಯಿರಿ ಎಂದು ಹೇಳಿದರು.

ಪ್ರಧಾನಿ ಮೋದಿ ಅವರ ಈ ಮಾತಿಗೆ ಇಡೀ ಸದನವೇ ನಗುವಿನಲ್ಲಿ ಮುಳುಗಿತು. ಬಳಿಕ ಮಾತು ಮುಂದುವರೆಸಿದ ಮೋದಿ, 'ಖರ್ಗೆ ಅವರು ಕವಿತೆ ಓದುವುದನ್ನು ನಾನು ನೋಡುತ್ತಿದ್ದೆ, ಮತ್ತು ಸ್ಪೀಕರ್ ಅವರನ್ನು ಅದು ಯಾವಾಗ ಎಂದು ಕೇಳಿದಾಗ, ಕಾಂಗ್ರೆಸ್‌ನ ನೋವು ಒಳಗೆ ಅಡಗಿದೆ ಎಂದು ಅವರು ಭಾವಿಸಿದರು, ಆದ್ದರಿಂದ ಅವರು ನೀರಜ್ ಅವರ ಕಾವ್ಯದ ಮೂಲಕ ಅದನ್ನು ವ್ಯಕ್ತಪಡಿಸಲು ನಿರ್ಧರಿಸಿದರು" ಎಂದು ಪ್ರಧಾನಿ ಮೋದಿ ಹೇಳಿದರು.

"ಖರ್ಗೆ ಅವರಿಗಾಗಿ ದಿವಂಗತ ಕವಿ ನೀರಜ್ ಜಿ ಅವರ ಕಾವ್ಯದ ಕೆಲವು ಸಾಲುಗಳನ್ನು ನಾನು ಹೇಳಲು ಬಯಸುತ್ತೇನೆ. ಈ ಕವಿತೆಗಳನ್ನು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಬರೆಯಲಾಗಿದೆ. ನೀರಜ್ ಜಿ ಹೇಳುತ್ತಾರೆ.. 'ಹೈ ಬಹುತ್ ಅಂಧೇರಾ, ಅಬ್ ಸೂರಜ್ ನಿಕಲ್ನಾ ಚಾಹಿಯೇ, ಜಿಸ್ ತರಹ್ ಸೆ ಭಿ ಯೇ ಮೌಸಂ ಬದಲ್ನಾ ಚಾಹಿಯೇ' (ಈಗ ತುಂಬಾ ಕತ್ತಲಿದೆ.. ಈಗ ಸೂರ್ಯ ಬರಲೇ ಬೇಕು... ಈರೀತಿಯಿಂದಾದರೂ ವಾತಾವರಣ ಬದಲಾಗಬೇಕು) ಎಂದು ಹೇಳಿದರು. ಈ ವೇಳೆ ಮಧ್ಯ ಪ್ರವೇಶ ಮಾಡಿದ ಉಪ ರಾಷ್ಟ್ರಪತಿ ಜಗದೀಪ್ ಧಂಕರ್ ಆ ಕವಿತೆ ಬರೆದಿದ್ದು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಎಂದು ಹೇಳಿ ಹಾಸ್ಯ ಚಟಾಕಿ ಹಾರಿಸಿದರು.

# ಸಾಮೂಹಿಕ ಔಷಧಿ ನುಂಗಿಸುವ ಕಾರ್ಯಕ್ರಮ

ಅತ್ಯಂತ ಸಮಸ್ಯಾತ್ಮಕವಾಗಿದ್ದು, ರೋಗನಿವಾರಣೆಯ ಕೊನೆಯ ಹಂತವನ್ನು ಸಾಧಿಸುವುದು ಕ್ಲಿಷ್ಟಕರವಾಗಿರುತ್ತದೆ. ಸುಮಾರು 90–95% ಜನಸಂಖ್ಯೆಗೆ ಮಾತ್ರೆಗಳನ್ನು ನುಂಗಿಸಬೇಕಾಗಿರುವುದರಿಂದ, ಇದಕ್ಕೆ ಅಪಾರ ಪ್ರಮಾಣದ ಮಾನವ

ಸಂಪನ್ಮೂಲದ ಅವಶ್ಯಕತೆಯಿರುತ್ತದೆ.ಜನಗಣತಿ 2011ರ ವರದಿಯ ಪ್ರಕಾರ ಸುಮಾರು 50% ಜನಸಂಖ್ಯೆಯು 1–20 ವರ್ಷದ ಗುಂಪಿಗೆ ಸೇರಿದ್ದು, ಇದರಲ್ಲಿ ಅಂದಾಜು 75–90% ಜನಸಂಖ್ಯೆಯು ಶಾಲಾ–ಕಾಲೇಜು ಮತ್ತು ಅಂಗನವಾಡಿಗಳಲ್ಲಿ ಲಭ್ಯವಾಗುವ ಸಂಭವವಿರುತ್ತದೆ. ಹಾಗಾಗಿ ಎಂಡಿಎ ಕಾರ್ಯಕ್ರಮವನ್ನು ಶಾಲಾ–ಕಾಲೇಜು ಮಟ್ಟದಲ್ಲಿ ಯಶಸ್ವಿಯಾಗಿ ನಡೆಸಿದಲ್ಲಿ ಒಟ್ಟು ಅರ್ಹ ಜನಸಂಖ್ಯೆಯ ಶೇ.40 ಪ್ರಮಾಣದ ಪ್ರಗತಿಯನ್ನು ಈ ಮಟ್ಟದಲ್ಲೇ ಸಾಧಿಸಬಹುದಾಗಿರುತ್ತದೆ. ಕಾರ್ಯಕ್ರಮದಲ್ಲಿ ಶೇ. 100% ಪ್ರಗತಿ ಸಾಧಿಸಲು ಗ್ರಾಮ ಮತ್ತು ನಗರ ಪ್ರದೇಶಗಳಲ್ಲಿ ನಿರಂತರ ಜನಜಾಗೃತಿ ಮತ್ತು ಸ್ಥಳೀಯ ಮುಖಂಡರ ಸಹಕಾರದ ಅಗತ್ಯವಿರುತ್ತದೆ. ಆದುದರಿಂದ, ಸ್ಥಳೀಯ ಪಂಚಾಯತಿ ಮತ್ತು ನಗರಾಡಳಿತ ಸಂಸ್ಥೆಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕಾಗಿದೆ. ಇದರ ಯಶಸ್ಸಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಯುವ ಸಬಲೀಕರಣ ಮತ್ತು ಕ್ರೀಡಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಇನ್ನಿತರ ಇಲಾಖೆಗಳು ಸಮನ್ವಯ ಸಾಧಿಸಬೇಕೆಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇತ್ಯರ್ಥಗೊಳಿಸಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ

ಮಾಹಿತಿ ನೀಡಿದರು. ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಯೋಜನಾ ಅಧಿಕಾರಿಗಳಾದ ಕಿಶೋರ ದುಬೆ, ಯೋಜನಾ ನಿರ್ದೇಶಕರಾದ ಜಗನ್ನಾಥ ಮೂರ್ತಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ರಜಿಯಾ ಬಳಬಟ್ಟಿ, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಎಂ.ಎಸ್.ಶ್ರೀಧರ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿಗಳಾದ ಗುರುರಾಜ, ತಾಲ್ಲೂಕ ಮಟ್ಟದ ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿಗಳು, ಸಂಘ–ಸಂಸ್ಥೆ ಪದಾಧಿಕಾರಿಗಳು, ಜಿಲ್ಲಾ ಹಾಗೂ ತಾಲ್ಲೂಕ ಮಟ್ಟದ ಅಧಿಕಾರಿಗಳು ಸೇರಿದಂತೆ ಇತರೆ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ವಡಗೇರಾ ಭಾಗದ ನೀರಾವರಿ ಯೋಜನೆ:

ನೀಡಿದ್ದಾರೆ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಹೇಳಿದ್ದಾರೆ.ಗುರುವಾರ ಬೆಂಗಳೂರಿನಲ್ಲಿ ಸಚಿವ ಶಿವಕುಮಾರ ಅವರನ್ನು ಭೇಟಿ ಮಾಡಿ ಈ ಬಗ್ಗೆ ಚರ್ಚಿಸಿ,ರೈತರ ಅನುಕೂಲಕ್ಕಾಗಿ ನೀರಾವರಿ ಯೋಜನೆಗಳಿಗೆ ಹಣ ಬಿಡುಗಡೆ ಮಾಡುವಂತೆಯೇ ತಾವು ಮನವಿ ಸಲ್ಲಿಸಿದಾಗ ಮಂಜೂರು ಮಾಡುವುದಾಗಿ ಭರವಸೆ ನೀಡಿದ್ದಾರೆಂದು ತಿಳಿಸಿದ್ದಾರೆ.ಕಳೆದ 14 ವರ್ಷಗಳಿಂದ ವಡಗೇರಾ ಭಾಗದ ರೈತರ ಬೇಡಿಕೆಯಾಗಿತ್ತು.12.411 ಹೆಕ್ಟೇರ್ ಕೃಷಿ ಪ್ರದೇಶದಲ್ಲಿ ಕಾಲುವೆ ನಿರ್ಮಿಸಿ ರೈತರ ಹೊಲಗಳಿಗೆ ನೀರು ಹರಿಸುವ ಉದ್ದೇಶದಿಂದ ತಾವು ಕಳೆದ ಎರಡು ವರ್ಷಗಳಿಂದ ಹಣ ಬಿಡುಗಡೆಗೆ ಪ್ರಯತ್ನ ಮಾಡಲಾಗುತ್ತಿತ್ತು.

ಇದಕ್ಕೆ ಸಕರಾತ್ಮಕವಾಗಿ ಸ್ಪಂದಿಸಿ ಹಣ ಬಿಡುಗಡೆ ಮಾಡುವ ಭರವಸೆ ನೀಡಿದ್ದಾರೆಂದು ಶಾಸಕರು ತಿಳಿಸಿದ್ದಾರೆ. ಇದಕ್ಕಾಗಿ ಸಿಎಂ ಸಿದ್ದರಾಮಯ್ಯ ಅವರನ್ನು ಸಹ ಭೇಟಿ ಮಾಡಿ ಮನವಿ ಮಾಡುವುದಾಗಿ ಅವರು ಹೇಳಿದ್ದಾರೆ.

# ನೂತನ ವಸತಿ ನಿಲಯಕ್ಕೆ ಚರಂತಿಮಠ ಭೂಮಿಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೊಟೆ,ಫೆ.6–ನಗರದ ಬಸವೇಶ್ವರ ಎಂಜಿನಿಯರಿಂಗ್ ಕಾಲೇಜಿನ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಗಳಿಗೆ ನೂತನವಾಗಿ ನಿರ್ಮಿಸಲಾಗುವ ವಸತಿ ನಿಲಯದ ನಿರ್ಮಾಣಕ್ಕೆ ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ. ವೀರಣ್ಣ ಚರಂತಿಮಠ ಗುರುವಾರ ಭೂಮಿಪೂಜೆ ನೆರವೇರಿಸಿದರು.

ಯೋಜಿತ ವಸತಿ ನಿಲಯವು 1 ಲಕ್ಷ 65 ಸಾವಿರ ಚದರಡಿ ವಿಸ್ತೀರ್ಣದಲ್ಲಿ ನಿರ್ಮಾಣಗೊಳ್ಳಲಿದೆ. ಈ ವಸತಿ ನಿಲಯದಲ್ಲಿ ಸುಮಾರು 1200 ವಿದ್ಯಾರ್ಥಿಗಳಿಗೆ 383 ಸುಸಜ್ಜಿತ ಸೌಲಭ್ಯಗಳುಳ್ಳ ಕೊಠಡಿಗಳನ್ನು ಅಂದಾಜು 35 ಕೋಟಿ ರೂ. ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವಸತಿ ನಿಲಯಗಳ ಕಾರ್ಯಾಧ್ಯಕ್ಷ ಕುಮಾರಸ್ವಾಮಿ .ಎಂ ಹಿರೇಮಠ (ಚಿತ್ತರಗಿ), ಕಟ್ಟಡ ವಿಭಾಗಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹೇಶ ಕಕರಡ್ಡಿ, ಮೆಡಿಕಲ್ ಕಾಲೇಜಿನ ಆಡಳಿತ ಮಂಡಳಿ ಕಾರ್ಯಧ್ಯಕ್ಷ ಅಶೋಕ್ ಸಜ್ಜನ, ಕಾಲೇಜು ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಶಾಲಾ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹಾಂತೇಶ್ ಶೆಟ್ಟರ, ಬಿವಿವಿ ಸಂಘಗಳ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ.ಆರ್.ಎನ್.ಹೆರಕಲ್ ಇಂಜಿನಿಯರಿಂಗ್ ಕಾಲೇಜಿನ ಅಭಿವೃದ್ಧಿ ಅಧಿಕಾರಿ ಪ್ರೊ .ಬಿ.ಎಸ್.ಹರವಿ ಪ್ರಾಚಾರ್ಯ ಡಾ. ಬಿ.ಆರ್.ಹಿರೇಮಠ, ಸಂಘದ ಸದಸ್ಯರುಗಳು ಉಪಸ್ಥಿತರಿದ್ದರು.

# ನೌಕರರ ಹಿತರಕ್ಷಣೆ ಸಂಘದ ಧ್ಯೇಯ: ಡಾ.ವೀರಣ್ಣ ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.6–ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ ಸದಾಕಾಲ ನೌಕರರ ಹಿತರಕ್ಷಣೆ ಜೊತೆಗೆ ಅವರ ಕ್ಷೇಮಾಭಿವೃದ್ಧಿಗಾಗಿ ಶ್ರಮಿಸುತ್ತಿದೆ ಎಂದು ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಆಡಳಿತ ಕಛೇರಿಯಲ್ಲಿ ಗುರುವಾರ ಭಾರತಿ ಮಠ ಅವರಿಗೆ ಪಿಂಚಣಿ ಹಣದ ಚೆಕ್ ವಿತರಿಸಿ ಮಾತನಾಡಿದ ಅವರು, ಸಂಘದಲ್ಲಿ ಸೇವೆ ಸಲ್ಲಿಸಿದ ಹಾಗೂ ಸಲ್ಲಿಸುತ್ತಿರುವ ನೌಕರರಿಗೆ ಸದಾಕಾಲ ಬೆನ್ನೆಲುಬಾಗಿ ನಿಲ್ಲುವುದರ ಜೊತೆಗೆ ಅವರ ಹಿತರಕ್ಷಣೆ ಹಾಗೂ ಅವರ ಕ್ಷೇಮಾಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದರು.

ಈಚೆಗೆ ನಿಧನರಾದ ಬಿ.ವಿ.ವಿ.ಸಂಘದ ಮುಕ್ತಿವಾಹನ ಚಾಲಕ ಶ್ರೀಶೈಲ ಮಠ ಅವರ ಪತ್ನಿ ಭಾರತಿ ಮಠ, ಮಕ್ಕಳಾದ ಶ್ರೆಯಾ ಮತ್ತು ಸೌಜನ್ಯ ಇವರಿಗೆ ಭಾರತ ಸರಕಾರ ಕಾರ್ಮಿಕ ಹಾಗೂ ಉದ್ಯೋಗ ಇಲಾಖೆಯ ನೌಕರರ ಭವಿಷ್ಯನಿಧಿಯಿಂದ ಪಿಂಚಣಿ ಮಂಜೂರಾಗಿದ್ದು, ಭಾರತಿ ಮಠ ಅವರಿಗೆ ಮಾಸಿಕ 2500 ರೂ. ಮಕ್ಕಳಿಗೆ ತಲಾ 600 ರೂ. ಮೊದಲ ಪಿಂಚಣಿ ಸೇರಿದಂತೆ ಹಿಂಬಾಕಿ 2ಲಕ್ಷ 75 ಸಾವಿರ ರೂಗಳ ಚೆಕ್ಕನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಆಡಳಿತಾಧಿಕಾರಿ ವಿ.ಆರ್.ಶಿರೋಳ, ನೌಕರರ ಕ್ಷೇಮಾಭಿವೃದ್ಧಿ ಅಧಿಕಾರಿ ಎಚ್.ಎನ್.ಯಾದವಾಡ ಉಪಸ್ಥಿತರಿದ್ದರು.

# ಪ್ರಕೃತಿ ನಿಯಮದಂತೆ ನಡೆಯಬೇಕು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಎಂತದೇ ಸಂದರ್ಭ ಬಂದರೂ ಪ್ರಕೃತಿಗೆ ವಿರುದ್ಧವಾಗಿ ಎಂದೆಂದಿಗೂ ನಡೆದುಕೊಳ್ಳಬಾರದು. ಪ್ರಕೃತಿ ನಿಯಮದಂತೆ ನಾವೆಲ್ಲರೂ ನಡೆದುಕೊಳ್ಳಬೇಕು. ಅಂದಾಗಲೇ ನಾವೆಲ್ಲರೂ ಈ ಭೂಮಿ ಮೇಲೆ ಸ್ವಚ್ಛಂದವಾಗಿ ಬದುಕಲು ಸಾಧ್ಯ ಎಂದು ಸಾಹಿತಿ, ಪರಿಸರ ಸಂರಕ್ಷಕ ಸಂಗಮೇಶ ಎನ್ ಜವಾದಿ ನುಡಿದರು. ತಾಲೂಕಿನ ನಿಂಬೂರ್ ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಪರಿಸರ ಸಂಗಮ ವೇದಿಕೆ ವತಿಯಿಂದ ಹಮ್ಮಿಕೊಂಡ ಎಸ್ ಎಸ್ ಎಲ್ ಸಿ ಮಕ್ಕಳ ಶೈಕ್ಷಣಿಕ ಕಾರ್ಯಾಗಾರ ಹಾಗೂ ಪರಿಸರ ಸಂರಕ್ಷಣೆ ಜಾಗೃತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಸಂಗಮೇಶ ಎನ್ ಜವಾದಿ ರವರು

ಮಕ್ಕಳು ಕೇವಲ ಅಂಕಗಳಿಗೋಸ್ಕರ ಓದಬಾರದು. ಮಕ್ಕಳು ಅವರ ಭವಿಷ್ಯದ ಸಮಗ್ರ ವಿಕಾಸಕ್ಕಾಗಿ ಓದಬೇಕು. ಪಾಲಕರ, ಶಿಕ್ಷಕರ ಋಣ ತೀರಿಸಲು ಕಷ್ಟಪಟ್ಟು ಓದಬೇಕು. ದೇಶದ ಸರ್ವತೋಮುಖ ಅಭಿವೃದ್ಧಿಗಾಗಿ ದುಡಿಯುವಂತ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕೆಂದರು.

ಹವಾಮಾನ ಬದಲಾವಣೆಯು ಭೂಮಿಯ ಮೇಲಿನ ಸಂಪನ್ಮೂಲಗಳನ್ನು ತೀವ್ರವಾಗಿ ಕ್ಷೀಣಿಸಿರುವುದರಿಂದ ನಮಗೆ ಪರಿಸರ ಸಂರಕ್ಷಣೆಯ ಅವಶ್ಯಕತೆ ಇದೆ. ವಿಶೇಷವಾಗಿ ಪ್ಲಾಸ್ಟಿಕ್ ಮುಕ್ತ ಆಗಬೇಕು. ಪಟಾಕಿಗಳು ನಿಷೇಧಿಸಬೇಕು.

ಸಾವಯವ ವಸ್ತುಗಳನ್ನು ಖರೀದಿಸಬೇಕು. ಸೌಂಡ್ ಮಾಲಿನ್ಯ ತಡೆಯಬೇಕು. ಸ್ವಚ್ಛತೆಗೆ ಆದ್ಯತೆ ನೀಡಬೇಕು. ಶಾಲಾ – ಕಾಲೇಜು – ಮನೆ – ಸಾರ್ವಜನಿಕ ಪ್ರದೇಶದ ಸ್ಥಳಗಳಲ್ಲಿ ಸಸಿಗಳನ್ನು ನೆಟ್ಟು ಬೆಳೆಸುವಂಥ ಕಾರ್ಯ ಸರ್ವರೂ ಮಾಡಬೇಕೆಂದರು.

ಪರಿಸರ ಸಂಗಮ ವೇದಿಕೆ ಜಿಲ್ಲಾಧ್ಯಕ್ಷ ಕಾಶಿನಾಥ್ ಪಾಟೀಲ ಅವರು ಮಾತನಾಡಿ ನೈಸರ್ಗಿಕ ಸಂಪನ್ಮೂಲಗಳನ್ನು ಸಂರಕ್ಷಿಸಲು ಮತ್ತು ರಕ್ಷಿಸಲು ನಾವು ತ್ವರಿತಗತಿಯಲ್ಲಿ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ಪರಿಸರ ಸಂಗಮ ವೇದಿಕೆ ಬೀದರ ಜಿಲ್ಲಾದ್ಯಂತ ಪರಿಸರ ಸಂರಕ್ಷಣೆಗಾಗಿ ನಿರಂತರವಾಗಿ ಕೆಲಸ ಮಾಡುತ್ತಿದೆ. ಮಕ್ಕಳು , ಶಿಕ್ಷಕರು, ಪಾಲಕರು ನಮ್ಮ ಜೊತೆ ಕೈ ಜೋಡಿಸುವ ಕೆಲಸ ಮಾಡಬೇಕು. ಹುಟ್ಟು ಹಬ್ಬ ಸೇರಿದಂತೆ ಇನ್ನಿತರ ಸಮಾರಂಭಗಳಲ್ಲಿ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸಬೇಕು. ಹೆಚ್ಚು ಹೆಚ್ಚು ಸಸಿಗಳನ್ನು ನೆಟ್ಟು ಅರಣ್ಯ ಸಂಪತ್ತು ಬೆಳೆಸಬೇಕು. ಮರಗಳನ್ನು ಕಡಿಯದಂತೆ ಸರ್ವರು ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ತಂಗಾ, ಸುನೀತಾ ಪಾಟೀಲ, ರೇಣುಕಾ ಎನ್ ವಿ ರವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯಿನಿ ಕವಿತಾ ಮಂಜುನಾಥರವರು ವಹಿಸಿ, ಮಾತನಾಡಿದರು.

ಕಾರ್ಯಕ್ರಮದಲ್ಲಿ ಅಮೃತಾಂಜಲಿ, ಭಾಗ್ಯಶ್ರೀ ,ಶಾಂತವೀರ್ , ಪೂರ್ಣಿಮಾ ರವರು ಉಪಸ್ಥಿತರಿದ್ದರು

ಚಾಮರಾಜ ಶಿರಮುಂಡಿ ನಿರೂಪಿಸಿ, ವಂದಿಸಿದರು.

ಈ ಸಂದರ್ಭದಲ್ಲಿ ಗಣ್ಯರು, ಮಾತೆಯರು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪ್ರಾದೇಶಿಕ ಕೇಂದ್ರದ ನಿರ್ದೇಶಕರಾಗಿ ಗಂಗಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 06 : ವಿಜಯಪುರದ ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ನಗರದ ಪ್ರಾದೇಶಿಕ ಕೇಂದ್ರದ ನಿರ್ದೇಶಕರಾಗಿ ಡಾ. ಆರ್.ವಿ. ಗಂಗಶೆಟ್ಟಿ ಗುರುವಾರ ಅಧಿಕಾರ ವಹಿಸಿಕೊಂಡರು.

ಗಂಗಶೆಟ್ಟಿ ಅವರು ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾಗಿದ್ದಾರೆ.

ಪ್ರಾದೇಶಿಕ ಕೇಂದ್ರದಲ್ಲಿ ಕೇಂದ್ರದ ಸಿಬ್ಬಂದಿ ಅವರನ್ನು ಸನ್ಮಾನಿಸಿದರು.

ಡಾ. ಪಂಡಿತ, ಡಾ. ಅನ್ನಪೂರ್ಣ,ಡಾ.ಸಂಗಪ್ಪತೌಡಿ, ಡಾ. ನಾಗೇಂದ್ರಪ್ಪ ಮೈಲಾರಿ, ನಾಗಪ್ಪ ಜಾನಕನೋರ, ಈಶ್ವರ ರೆಡ್ಡಿ, ಶ್ರೀಲತಾ, ಅರ್ಚನಾ, ರೇಣುಕಾ, ಪ್ರೇಮಲತಾ, ಪ್ರಿಯಾಂಕ್, ರವಿ, ಶಂಕರ ಮತ್ತಿತರರು ಇದ್ದರು.

# ಫೆ ೯ರಿಂದ ನಗರದಲ್ಲಿ ದಮ್ಮ ಪ್ರವಚನ ಕಾರ್ಯಕ್ರಮ: ರಾಜಕುಮಾರ ಗುನ್ನಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 06 : ಈ ತಿಂಗಳ ಹದಿನಾರನೇ ತಾರೀಖಿನ ವರೆಗೆ ನಗರದ ಸಿದ್ಧಾರ್ಥ್ ಮಹಾವಿದ್ಯಾಲಯದಲ್ಲಿ ಧಮ್ಮ ಪ್ರವಚನ ಕಾರ್ಯಕ್ರಮ ಜರುಗಲಿದೆ ಎಂದು ಭಾರತೀಯ ಬೌದ್ಧ ಮಹಾಸಭಾದ ಜಿಲ್ಲಾ ಅಧ್ಯಕ್ಷರಾದ ರಾಜಕುಮಾರ ಗುನ್ನಳ್ಳಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 9 ರಿಂದ 16ನೇ ತಾರೀಖಿನ ವರೆಗೆ ಪ್ರತಿ ದಿನ ಸಾಯಂಕಾಲ 6.30 ಗಂಟೆಗೆ ಸರಿಯಾಗಿ ಬುದ್ಧ ಧಮ್ಮ ಪ್ರವಚನ ಕಾರ್ಯಕ್ರಮ ಜರುಗಲಿದೆ.

ಫೆಬ್ರವರಿ 9ರಂದು 6.30 ಗಂಟೆಗೆ ಪ್ರವಚನ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಜರುಗಲಿದ್ದು ಅಣದೂರು ವೈಶಾಲಿ ನಗರದ ಪೂಜ್ಯ ಭಂತೆ ಮಹಾ ಥೇರೋ ಸಾನಿಧ್ಯ ವಹಿಸಲಿದ್ದು, ಸಮಾರಂಭದಲ್ಲಿ ಬಸವಕಲ್ಯಾಣ ತಾಲೂಕಿನ ಹಕ್ಯಾಳ ಬುದ್ಧ ವಿಹಾರದ ಪೂಜ್ಯ ಭಂತೆ ಧಮ್ಮನಾಗ, ಅಣದೂರು ವೈಶಾಲಿ ನಗರದ ಪೂಜ್ಯ ಭಂತೆ ಜ್ಞಾನಸಾಗರ ಥೇರೊ, ರೇಕುಳಿಗಿ ಬುದ್ಧ ವಿಹಾರದ ಪೂಜ್ಯ ಭಂತೆ ರೇವತ್, ಹಾಲಹಳ್ಳಿ ಬುದ್ಧ ವಿಹಾರದ ಪೂಜ್ಯ ಭಂತೆ ಧಮ್ಮದೀಪ ದೇವನಾಂಪ್ರಿಯ, ಹಿಪ್ಪಳಗಾಂವ ಬುದ್ಧ ವಿಹಾರದ ಪೂಜ್ಯ ಭಂತೆ ಬೋಧೀರತ್ನ, ಅಮಲಾಪುರದ ಪೂಜ್ಯ ಭಂತೆ ಧಮ್ಮ ಕೀರ್ತಿ ಹಾಗೂ ಇತರರು ಉಪಸ್ಥಿತರಿರುವರು. ಮಹಾರಾಷ್ಟ್ರ ಅಹ್ಮದ್ ನಗರದ ಪೂಜ್ಯ ಭಂತೆ ಮಹಾವೀರ ಧಮ್ಮ ಪ್ರಭೋದನ ಮಾಡುವರು. ತಾನು ಸರ್ವಾಧ್ಯಕ್ಷತೆ ವಹಿಸಲಿದ್ದು, ಭಾರತೀಯ ಬೌದ್ಧ ಮಹಾಸಭಾ ತಾಲೂಕ ಅಧ್ಯಕ್ಷ ಶಿವಕುಮಾರ ಸದಾಪುಲೇ ಅಧ್ಯಕ್ಷತೆ ವಹಿಸುವರು.




ಮುಖ್ಯ ಅತಿಥಿಗಳಾಗಿ ಬಿಎಸ್‌ಐ ಕರ್ನಾಟಕ ಉತ್ತರ ಪ್ರಾಂತದ ಅಧ್ಯಕ್ಷರಾದ ಆಧಾರಣೆಯ ಮನೋಹರ್ ಮೋರೆ, ಅತಿಥಿಗಳಾಗಿ ಮುಂಬೈನ ಬಿಎಸ್‌ಐ ರಾಷ್ಟ್ರೀಯ ಸಂಘಟಕಿ ವೈಶಾಲಿ ಮೋರೆ, ಜಿಲ್ಲಾ ಪಂಚಾಯತ್ ನ ಮುಖ್ಯ ಲೆಕ್ಕಾಧಿಕಾರಿ ಜಗನ್ನಾಥ ಮೂರ್ತಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಚಂದ್ರಕಾಂತ ಶಹಬಾದಕರ್, ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಪ್ರೇಮಸಾಗರ ದಾಂಡೇಕರ್, ಕ್ಷೇತ್ರ ಶಿಕ್ಷಣಾಧಿಕಾರಿ ಟಿ.ಆರ್ ದೊಡ್ಡೆ, ಔರಾದ್ ತಹಶೀಲ್ದಾರ ಮಲಶೆಟ್ಟಿ ಚಿದ್ರೆ, ಹುಲಸುರ ತಹಸಿಲ್ದಾರ ಶಿವಾನಂದ ಮೆತ್ರೆ, ನಿವೃತ್ತ ಪ್ರಾಂಶುಪಾಲ ಶಿವಶರಣಪ್ಪ ಹುಗ್ಗೆ ಪಾಟೀಲ, ಇ.ಎಸ್.ಐ ಉಪಾಧ್ಯಕ್ಷ ಜಗನ್ನಾಥ ಕಾಂಬಳೆ, ಬಿಎಸ್‌ಐ ರಾಜ್ಯ ಸಂಘಟಕ ಬಾಬುರಾವ ಅಣದುರೆ ಹಾಗೂ ಇತರರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಫೆ.10ರಂದು ಸಂಜೆ 6.30 ಗಂಟೆಗೆ "ಭಗವಾನ್ ಬುದ್ಧನ 32 ಲಕ್ಷಣಗಳು ಎಂಬ ವಿಷಯ ಕುರಿತು ಪ್ರವಚನ ಜರುಗುವುದು. ವೈಶಾಲಿನಗರ ಅಣದೂರಿನ ಪೂಜ್ಯ ಭಂತೆ ಜ್ಞಾನಸಾಗರ ಅವರು ಸಾನಿಧ್ಯ ವಹಿಸುವರು. ಪೂಜ್ಯ ಭಂತೆ ವರಜ್ಯೋತಿ ಗೌರವ ಉಪಸ್ಥಿತರಿರುವರು. ಅಹ್ಮದ್ ನಗರದ ಪೂಜ್ಯ ಭಂತೆ ಮಹಾವೀರ ಧಮ್ಮ ಪ್ರಬೋಧನೆ ಮಾಡುವರು.

11ರಂದು "ಕರ್ಮ ಸಿದ್ಧಾಂತ" ಕುರಿತು ಪ್ರವಚನ ಜರುಗುವುದು. ಹಾಲಳ್ಳಿಯ ಬುದ್ಧ ವಿಹಾರದ ಪೂಜ್ಯ ಭಂತೆ ದೇವನಾಂಪ್ರಿಯ ದಿವ್ಯ ಸಾನಿಧ್ಯ ವಹಿಸುವರು. ಅಣದುರ ವೈಶಾಲಿನಗರದ ಪೂಜ್ಯ ಭಂತೆ ವರಜ್ಯೋತಿ ಗೌರವ ಉಪಸ್ಥಿತರಿರುವರು. ಮಹಾರಾಷ್ಟ್ರ ನಾಂದೇಡದ ಪೂಜ್ಯ ರೇವತ್ ಬೋಧಿ ತಮ್ಮ ಪ್ರಬೋಧನೆ ನಡೆಸುವರು.

12ರಂದು ಸಂಜೆ 6.30 ಗಂಟೆಗೆ 'ಮಕ್ಕಳನ್ನು ಧಮ್ಮ ಮಾರ್ಗಕ್ಕೆ ಕೊಂಡೊಯ್ಯುವಲ್ಲಿ ಪಾಲಕರ ಪಾತ್ರ' ಎಂಬ ವಿಷಯ ಕುರಿತು ಪ್ರವಚನ ಮಾಲಿಕೆ ಜರುಗಲಿದೆ. ವೈಶಾಲಿ ನಗರ ಹಣದೂರಿನ ಪೂಜ್ಯ ಭಂತೆ ಜ್ಞಾನ ಸಾಗರ ದಿವ್ಯ ಸಾನಿಧ್ಯ ವಹಿಸಲಿದ್ದು

ಅಮಲಾಪುರದ ಪೂಜ್ಯ ಭಂತೆ ಧಮ್ಮ ಕೀರ್ತಿ ಗೌರವ ಉಪಸ್ಥಿತರಿರುವರು. ವೈಶಾಲಿನಗರ ಅಣದೂರಿನ ಪೂಜ್ಯ ಬಂತೆ ಸಂಗರಖ್ಖಿತ ಧಮ್ಮ ಪ್ರಬೋಧನೆ ಮಾಡುವರು.

13ರಂದು 'ಭಗವಾನ್ ಬುದ್ಧರು ಬೋಧಿಸಿದ ನಾಲ್ಕು ಬ್ರಹ್ಮ ವಿಚಾರಗಳು' ಎಂಬ ಪ್ರವಚನ ಮಾಲಿಕೆ ಜರುಗಲಿದ್ದು, ವೈಶಾಲಿ ನಗರ ಅಣದುರಿನ ಪೂಜ್ಯ ಭಂತೆ ವರಜೋತಿ ದಿವ್ಯ ಸಾನಿಧ್ಯ ವಹಿಸುವರು. ಅಮಲಾಪುರದ ಪೂಜ್ಯ ಭಂತೆ ಧಮ್ಮ ಕೀರ್ತಿ ಗೌರವ ಉಪಸ್ಥಿತರಿರುವರು. ಹಾಲಳ್ಳಿಯ ಪೂಜ್ಯ ಭಂತೆ ಧಮ್ಮದೀಪ ದೇವನಾಂಪ್ರಿಯ ಧಮ್ಮ ಪ್ರಬೋಧನೆ ಮಾಡುವರು.

14ರಂದು 'ಭವಿಷ್ಯ ಭಾರತಕ್ಕೆ ಬೌದ್ಧ ಧರ್ಮದ ಅವಶ್ಯಕತೆ' ಎಂಬ ಪ್ರವಚನ ಮಾಲಿಕೆ ಜರುಗಲಿದ್ದು, ಅಂದು ರೇಕುಳಗಿ ಅನಾಥ ಪಿಂಡಕ ಬುದ್ಧ ವಿಹಾರದ ಪೂಜ್ಯ ಭಂತೆ ರೇವತ್ ಥೇರೊ ದಿವ್ಯ ಸಾನಿಧ್ಯ ವಹಿಸಲಿದ್ದು, ವೈಶಾಲಿನಗರ ಅಣದೂರಿನ ಪೂಜ್ಯ ಭಂತೆ ಸಂಗರಖ್ಖಿತ ಗೌರವ ಉಪಸ್ಥಿತರಿರುವರು. ಹಿಪ್ಪಳಗಾವದ ಪೂಜ್ಯ ಭಂತೆ ಬೋಧಿರತ್ನ ಧಮ್ಮ ಪ್ರಬೋದನೆ ಮಾಡುವರು.

15ರಂದು ಸಂಜೆ 6.30 ಗಂಟೆಗೆ 'ಬೌದ್ಧ ಧಮ್ಮ ಮತ್ತು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನಡೆದು ಬಂದ ದಾರಿ' ಎಂಬ ವಿಷಯದ ಮೇಲೆ ಪ್ರವಚನ ಕಾರ್ಯಕ್ರಮ ಜರುಗಲಿದೆ. ಅಂದು ಪೂಜ್ಯ ಭಂತೆ ಧಮ್ಮಾನಂದ ಮಹಾ ಥೇರೊ ದಿವ್ಯ ಸಾನಿಧ್ಯ ವಹಿಸಲಿದ್ದು, ಪೂಜ್ಯ ಭಂತೆ ಸಂಗ ರಖ್ಖಿತ ಗೌರವ ಉಪಸ್ಥಿತರಿರುವರು. ಮೈಸೂರಿನ ಪೂಜ್ಯ ಭಂತೆ ಡಾ.ಕಲ್ಯಾಣ ಸಿರಿ ಧಮ್ಮ ಪ್ರಭೋದನೆ ಮಾಡುವರು.

16 ರಂದು ಸಮಾರೋಪ ಸಮಾರಂಭ ಜರುಗಲಿದ್ದು, ಅಣದುರ ವೈಶಾಲಿನಗರದ ಪೂಜ್ಯ ಭಂತೆ ಧಮ್ಮಾನಂದ ಮಹಾ ಥೇರೊ ದಿವ್ಯ ಸಾನಿಧ್ಯ ವಹಿಸಲಿದ್ದು, ಮೈಸೂರಿನ ಪೂಜ್ಯ ಭಂತೆ ಡಾ. ಕಲ್ಯಾಣ ಸಿರಿ ಗೌರವ ಉಪಸ್ಥಿತರಿರುವರು. ಪೂಜ್ಯ ಭಂತೆ ಜ್ಞಾನಸಾಗರ ಅವರು ಧಮ್ಮ ಪ್ರಬೋಧನೆ ಮಾಡುವರು. ಮುಖ್ಯ ಅತಿಥಿಗಳಾಗಿ ಭಾರತೀಯ ಬೌದ್ಧ ಮಹಾಸಭಾದ ರಾಷ್ಟ್ರೀಯ ಕಾರ್ಯಾಧ್ಯಕ್ಷ ಡಾ. ಭೀಮರಾವ್ ವೈ ಅಂಬೇಡ್ಕರ್ ಅವರು ಭಾಗವಹಿಸಲಿದ್ದು, ತಾನು ಸರ್ವಾಧ್ಯಕ್ಷತೆ ವಹಿಸುವೇನು. ಬಿಎಸ್ ಐ ತಾಲೂಕ ಅಧ್ಯಕ್ಷ ಶಿವಕುಮಾರ ಸದಾಪುಲೆ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ನಿವೃತ್ತ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವೈಜಿನಾಥ ಜ್ಯೋತಿ, ಡಿಯುಡಿಸಿ ನಿವೃತ್ತ ಯೋಜನಾ ನಿರ್ದೇಶಕ ಬಲಭೀಮ ಕಾಂಬಳೆ, ಕಲಬುರಗಿ ನಿವೃತ್ತ ಕಾರ್ಯನಿರ್ವಾಹಕ ಅಭಿಯಂತರ ಮಲ್ಲಿಕಾರ್ಜುನ ಸುಧಾನೆ, ನಿವೃತ್ತ ಪ್ರಾಂಶುಪಾಲ ವಿಠಲದಾಸ ಪ್ಯಾಗೆ ಅತಿಥಿಗಳಾಗಿ ಪಾಲ್ಗೊಳ್ಳುವರು.

ಒಂದು ವಾರದ ಮಟ್ಟಿಗೆ ನಡೆಯುವ ಈ ಪ್ರವಚನ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ಧರ್ಮದ, ಎಲ್ಲ ಜಾತಿಯ ಜನರು ಈ ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರವಚನದ ಲಾಭ ಪಡೆದುಕೊಳ್ಳಬೇಕೆಂದು ರಾಜಕುಮಾರ ಗುನ್ನಳ್ಳಿ ಮನವಿ ಮಾಡಿದರು.

ವೈಶಾಲಿ ನಗರ ಅಣದೂರಿನ ಪೂಜ್ಯ ಧಮ್ಮಸಂಗ ರಖ್ಖಿತ ಅವರು ಮಾತನಾಡಿ, ಪ್ರವಚನವು ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು, ಮೂಢನಂಬಿಕೆ ಹೋಗಲಾಡಿಸಲು, ಸಮಾಜದಲ್ಲಿನ ಅನಿಷ್ಟತೆ, ಯುವಜನರಲ್ಲಿರುವ ದುಷ್ಚಟಗಳ ನಿವಾರಣೆ, ಶೋಷಣೆ, ದೌರ್ಜನ್ಯ ಇತ್ಯಾದಿ ದುರ್ಘಟನೆಗಳನ್ನು ಹೋಗಲಾಡಿಸಲು ಆಯೋಜಿಸಲಾಗಿದೆ. ಬುದ್ಧನ ವಿಚಾರಗಳು ಎಲ್ಲ ಸಮುದಾಯದ, ಎಲ್ಲ ಜಾತಿ ಧರ್ಮಗಳ ಒಂದು ಸಂಗಮವಾಗಿದ್ದು ಈ ಅಪರೂಪದ ಪ್ರವಚನದಲ್ಲಿ ತಾವೆಲ್ಲರೂ ಭಾಗಿಗಳಾಗಿ ಪ್ರವಚನ ಯಶಸ್ವಿಗೊಳಿಸಬೇಕೆಂದರು.

ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾ ಉಪಾಧ್ಯಕ್ಷ ಡಾ. ಕಾಶಿನಾಥ ಚೆಲುವಾ ಮಾತನಾಡಿ, ಬುದ್ಧನ ವಿಚಾರಧಾರೆಗಳು ಜಗತ್ತಿನ ಹಲವಾರು ರಾಷ್ಟಗಳು ಅನುಕರಿಸುತ್ತಿದ್ದು ನಮ್ಮಲ್ಲಿ ಅದರ ಆಚರಣೆ ಅಷ್ಟಾಗಿ ಕಂಡು ಬರದೆ ಇರುತ್ತಿರುವುದು ದೊಡ್ಡ ದುರಂತವೇ ಸರಿ. ಸಂವಿಧಾನದ ಎಲ್ಲಾ ಆಯಾಮಗಳನ್ನು ನೋಡಿದರೆ ಅದರಲ್ಲಿ ಬುದ್ಧನ ವಿಚಾರಧಾರೆಗಳು ಅಡಗಿರುವುದು ಒಂದು ಸಂತೋಷ. ಡಾ. ಅಂಬೇಡ್ಕರ್ ಅವರು ಹೇಳಿದ ಪ್ರಕಾರ ನಾನು ಹಿಂದೂ ಧರ್ಮದಲ್ಲಿ ಹುಟ್ಟಿ ಹಿಂದೂ ಧರ್ಮದಲ್ಲಿ ಸಾಯಲು ಇಷ್ಟಪಡುವುದಿಲ್ಲ ಎಂಬ ಮಾತು ಗಟ್ಟಿಯಾಗಿಸಲು ನಾಗಪುರದಲ್ಲಿ ಬೌದ್ಧ ಧರ್ಮವನ್ನು ಸ್ವೀಕಾರ ಮಾಡಿ ಭಾರತೀಯ ಬೌದ್ಧ ಮಹಾಸಭಾ ಹುಟ್ಟು ಹಾಕಿ, ಸಮತಾ ಸೈನಿಕ ದಳ ರಚಿಸಿ, ರಾಜಕೀಯವಾಗಿ ನಮ್ಮ ಜನಾಂಗ ಮುಂದೆ ಬರಲು ರಿಪಬ್ಲಿಕ್ ಪಾರ್ಟಿ ಆಫ್ ಇಂಡಿಯಾ ಎಂಬ ರಾಜಕೀಯ ಪಕ್ಷವನ್ನು ಹುಟ್ಟು ಹಾಕಿ ಸಮಾಜಕ್ಕೆ ಒಂದು ಹೊಸ ಸಂದೇಶ ರವಾನೆ ಮಾಡುವಲ್ಲಿ ಕಾರಣೀಭೂತರಾಗಿರುವ ಡಾ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಈ ಸಪ್ತ ದಿವಸಗಳಲ್ಲಿ ನಡೆಯುವ ಪ್ರವಚನದಲ್ಲಿ ನಾವು ಮೆಲುಕು ಹಾಕಲಿದ್ದೇವೆ. ಹಾಗಾಗಿ ತಾವೆಲ್ಲರೂ ಈ ಪ್ರವಚನದಲ್ಲಿ ಭಾಗಿಗಳಾಗಬೇಕೆಂದು ಚಲವಾ ಹೇಳಿದರು.

ಮಹಾಸಭಾ ಪ್ರಚಾರ ಸಮಿತಿ ಅಧ್ಯಕ್ಷರಾದ ಪಾಂಡುರಂಗ ಬೆಲ್ದಾರ್ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿಂಗೆ ಸೂರ್ಯಕಾಂತ ಮಾತನಾಡಿದರು. ಜಿಲ್ಲಾ ಕೋಶಾಧ್ಯಕ್ಷ ನರಸಪ್ಪ ಮೇಟಿ, ಬೀದರ್ ತಾಲೂಕ ಅಧ್ಯಕ್ಷ ಶಿವಕುಮಾರ ಸದಾಪುಲೆ, ಮಂಜುಳಾ ಬಾವಿದೊಡ್ಡಿ, ಚಂದ್ರಕಲಾ ಬಡಿಗೇರ್, ಧನರಾಜ ಜ್ಯೋತಿ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 06 : ಬಸವ ತೀರ್ಥ ಪ್ರೌಡ ಶಾಲೆ ಹಳ್ಳಿಖೇಡ ಬಿ ಯಲ್ಲಿ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮ ಹಮ್ಮಿಕೊಳಲಾಗಿದು ಕಾರ್ಯಕ್ರಮದಲ್ಲಿ ಬಸವತೀರ್ಥ ಪ್ರೌಡ ಶಾಲೆಯ ಮುಖ್ಯ ಗುರುಗಳಾದ ಶ್ರೀ ಮಸ್ತಾನ ಪಟೇಲ್ ರವರು ಅಧ್ಯಕ್ಷತೆ ಸ್ಥಾನ ವಹಿಸಿದ್ದರು ಮುಖ್ಯ ಅತಿಥಿಗಳಾಗಿ ಬ್ರೆಡ್ ಡಾನ ಬಾಸ್ಕೋ ಸಂಸ್ಥೆಯ ಸ್ಟೇಟ್ ಕೋಡಿನೇಟರ್ ಆದ ಅಕ್ಷತಾ .ರವರು ಕಾರ್ಯಕ್ರಮದ ಕುರಿತ್ತು ಮಾತಾನಾಡುತ ಕುಷ್ಠರೋಗವು ಯಾವುದೇ ಶಾಪ ಪಾಪ ದಿಂದ ಬರುವುದಿಲ್ಲ ಇದು ಒಂದು ಮೈಕೋಬ್ಯಾಕ್ಟೀರಿಯಂ ಲೆಪ್ರೆ ಎಂಬ ರೋಗಾಣುವಿನಿಂದ ಬರುವ ಸಾಂಕ್ರಮಿಕ ರೋಗವಾಗಿದ್ದು ಇದು ಮುಖ್ಯವಾಗಿ ಚರ್ಮ ಹಾಗೂ ನರಕ್ಕೆ ಸಂಭಂಧಪಟ್ಟಿದ್ದು ದೇಹದ ಯಾವುದೇ ಭಾಗದಲ್ಲಿ ಸ್ಪರ್ಶಜ್ಞಾನವಿಲ್ಲದ ತಿಳಿ ಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳಿದ್ದಲ್ಲಿ ಅದು ಕುಷ್ಠರೋಗದ ಲಕ್ಷಣಗಲಾಗಿರ ಬಹುದು ಯಾವುದೆ ತರಹದ ಮಚ್ಚೆಗಳು ಇದಲ್ಲಿ ತಮ್ಮ ಸಮೀಪದ ಪ್ರಾಥಮೀಕ ಆರೋಗ್ಯ ಕೇಂದ್ರಕ್ಕೆ ಭೇಟನಿಡಿ ಪರಿಕ್ಷಿಸಿಕೋಳಬೇಕು ರೋಗ ಕಂಡು ಬಂದಲ್ಲಿ ಬಹುಔಷದಿ ಚಿಕಿತ್ಸೆಯಿಂದ ಗುಣ ಪಡಿಸಬಹುದು ಇದಕ್ಕೆ ಯಾವುದೇ ರೀತಿಯ ಹೆದರುವಂತಹ ಅಗತ್ಯವಿಲ್ಲಾ ಎಂದು ಹೇಳಿದರು. ಕಾರ್ಯಕ್ರಮದ ಮೇಲ್ವಿಚಕರಾದ ಶಾಮರಾವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಕನಸಾದ ಕುಷ್ಠಮುಕ್ತ ಭಾರತವನ್ನು ಮಾಡಲು ಪ್ರತಿಜ್ಞಾ ಮಾಡೋಣ ಎಂದು ಪ್ರತಿಜ್ಞೆ ಮಾಡಿಸಿದ್ದರು.

ಅತಿಥಿಗಳಾಗಿ ಶಿಕ್ಷರಾದ, ಶ್ರೀ ರೇವಣಪ್ಪ ಸ್ವಾಮಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀ ವಿಲ್ಸನ್, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಶ್ರೀಮತಿ ಸುಧಾರಾಣಿ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಹವಳಮ್ಮಾ ಆಶಾ ಕಾರ್ಯಕತಾರು ಅರೋಗ್ಯ ಸಿಬ್ಬಂದಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಇಂದು ವಿಶೇಷ ಅಂಚೆ ಲಕೋಟೆ ಬಿಡುಗಡೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.06:ಅಂಚೆ ಇಲಾಖೆಯಿಂದ ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳ ಸುವರ್ಣ ಮಹೋತ್ಸವದ ನೆನಪಿನಲ್ಲಿ ಅಖಿಲ ಭಾರತ ಗ್ರಾಮೀಣ ಬ್ಯಾಂಕ್‌ಗಳ ನೌಕರರ ಒಕ್ಕೂಟದ ಸಹಯೋಗದಲ್ಲಿ ಫೆ.07ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕರ್ನಾಟಕ ಗ್ರಾಮೀಣ ಬ್ಯಾಂಕಿನ ನೌಕರರ ಸಹಕಾರಿ ಸಂಘದ ಸಮುದಾಯ ಭವನದಲ್ಲಿ ವಿಶೇಷ ಅಂಚೆ ಲಕೋಟೆ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬಳ್ಳಾರಿ ಅಂಚೆ ವಿಭಾಗದ ಅಂಚೆ ಅಧೀಕ್ಷಕ ಪಿ.ಚಿದಾನಂದ ಅವರು ತಿಳಿಸಿದ್ದಾರೆ.

ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಎಸ್.ರಾಜೇಂದ್ರ ಕುಮಾರ್, ಉತ್ತರ ಕರ್ನಾಟಕ ವಲಯದ ಪೋಸ್ಟ್ ಮಾಸ್ಟರ್ ಜನರಲ್ ಕರ್ನಲ್ ಸುಶೀಲ್ ಕುಮಾರ್, ಕರ್ನಾಟಕ ಗ್ರಾಮೀಣ ಬ್ಯಾಂಕಿನ ಚೇರ್‌ಮನ್ ಡಿ.ಆರ್.ದಿಲ್ಲಿಬಾಬು, ಅಖಿಲ ಭಾರತ ಗ್ರಾಮೀಣ ಬ್ಯಾಂಕ್ ನೌಕರರ ಸಂಘದ ಕಾರ್ಯದರ್ಶಿ ಎಸ್. ವೆಂಕಟೇಶ್ವರ ರೆಡ್ಡಿ, ಅಧ್ಯಕ್ಷರಾದ ಹೆಚ್.ನಾಗಭೂಷಣ ರಾವ್, ವಿ.ಕೆ.ಬನ್ನಿಗೊಳ್, ಸಿ.ರಾಜೀವನ್ ಹಾಗೂ ಇತರರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಸಾರ್ವಜನಿಕರು, ಅಂಚೆ ಚೀಟಿ ಸಂಗ್ರಹಕರು ಮತ್ತು ಆಸಕ್ತರು ಹೆಚ್ಚಿನ ಸಂಖೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶ ಸುತ್ತಿ, ಕೋಶ ಓದಿ, ದೇವರ ಬಗ್ಗೆ ಭಕ್ತಿ - ಶ್ರದ್ಧೆ ಇರಲಿ : ವೀರಭದ್ರಪ್ಪ ಉಪ್ಪಿನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 06 : ಜ್ಞಾನ ಸಂಪಾದನೆ ಮಾಡಬೇಕಾದರೆ ದೇಶ ಸುತ್ತಬೇಕು, ಕೋಶ ಓದಬೇಕು ಅದರ ಜೊತೆಗೆ ದೇವರ ಬಗ್ಗೆ ಭಯ–ಭಕ್ತಿ ಇರಬೇಕು ಎಂದು ಪಶು ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ನಿವೃತ್ತ ಅಧಿಕಾರಿಯಾದ ವೀರಭದ್ರಪ್ಪ ಉಪ್ಪಿನ್ ರವರು ಅಭಿಪ್ರಾಯ ಪಟ್ಟರು. ಅವರು ಪ್ರಯಾಗರಾಜ ಮಹಾ ಕುಂಭ್ ಮೇಳ, ಕಾಶಿ, ಅಯೋಧ್ಯಾ ಹಾಗೂ ಇತರ ಉತ್ತರ ಭಾರತ ದ ಸ್ಥಳಗಳ ತೀರ್ಥಯಾತ್ರೆ ಕೈಗೊಂಡು ಬೀದರಿಗೆ ವಾಪಸ್ಸಾದ ಯಾತ್ರಾರ್ಥಿಗಳಿಗೆ ಇಂದು ಬೆಳ್ಳಂಬೆಳಿಗ್ಗೆ ನಗರದ ಸಾಯಿ ಪುಷ್ಪಾಂಜಲಿ ಕಲ್ಯಾಣ ಮಂಟಪದ ಸಮೀಪದಲ್ಲಿ ವಿಶ್ವವಿದ್ಯಾಲಯದ ಒಕ್ಕೂಟದಿಂದ, ಆತ್ಮೀಯವಾಗಿ ಬರಮಾಡಿಕೊಂಡು ಮಾತನಾಡುತ್ತಿದ್ದರು. ಉತ್ತರ ಪ್ರದೇಶದ ಪ್ರಯಾಗರಾಜ್‌ನಲ್ಲಿ ಸರಕಾರದಿಂದ ಆಯೋಜಿಸಲಾದ, ಕೊಟ್ಯಾಂತರ ಜನರು ಭಾಗವಹಿಸಿರುವ ಬೃಹತ್ ಮಹಾಕುಂಭದ ಅಚ್ಚುಕಟ್ಟಾದ ವ್ಯವಸ್ಥೆಯು ಶ್ಲಾಘನಿಯವಾಗಿದ್ದು, ಐತಿಹಾಸಿಕ ವಾಗಿದೆ ಎಂದರು. ತೀರ್ಥ ಸ್ಥಳಗಳ ದರ್ಶನ ಮೇಲಿಂದ ಮೇಲೆ ಪಡೆಯುವುದರಿಂದ ದೇವರ ಮೇಲಿನ ಶ್ರದ್ಧೆ ಭಕ್ತಿ ಹೆಚ್ಚಾಗಿ, ಜೀವನ ದಲ್ಲಿ ಪ್ರಾಮಾಣಿಕತೆಯನ್ನು ಅಳವಡಿಸಿ ಕೊಳ್ಳಲು ಸಹಾಯಕ ವಾಗುತ್ತದೆ ಎಂದರು. ಯಾತ್ರಾರ್ಥಿಗಳಲ್ಲಿ ಹಿರಿಯರಾದ ಎಂ. ಎನ್. ಕುಲಕರ್ಣಿಯವರು ಮಾತನಾಡಿ, 6 ದಿವಸಗಳ ಯಾತ್ರೆಯಲ್ಲಿ ಯಾವುದೇ ತರಹದ ಅವ್ಯವಸ್ಥೆಯಾಗದೆ ಯಶಸ್ವಿಯಾಗಿ, ಅವಿ ಸ್ಮರಣೀಯವಾಗಿತ್ತು ಎಂದು ನುಡಿದರು. ಯಾತ್ರಾರ್ಥಿಗಳಿಗೆ ಶಾಲು ಹೊದಿಸಿ ಸನ್ಮಾನಿಸಲಾಯಿತು. ಮದನ್ ಮುರ್ಕಿ, ಉದಯಕುಮಾರ್ ಲದ್ದೆ, ಖ್ಯಾಮಾ, ರಾಜೇಂದ್ರ ಸಿಂಗ್ ಪವಾರ, ದಿಲೀಪ್ ಮುಂತಾದವರು ಇದ್ದರು.

# ಹೈದ್ರಾಬಾದ ಕರ್ನಾಟಕದ ಮದನಮೋಹನ ಮಾಳವಿಯ ದಿ. ಮಹಾದೇವಪ್ಪ ರಾಂಪೂರೆಯವರ 52ನೇ ಪುಣ್ಯಸ್ಮರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಫೆ.6:ಬಿ.ವಿ.ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ಮಹಾದೇವಪ್ಪ ರಾಂಪೂರೆಯವರ ಪುಣ್ಯಸ್ಮರಣೆ ಪ್ರಯುಕ್ತ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಪೂಜೆ ಸಲ್ಲಿಸಿ ಘನ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ ಹೈದ್ರಾಬಾದ ಕರ್ನಾಟಕ ಇಂದಿನ ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿಶೇಷವಾಗಿ ನಮ್ಮ ಬೀದರ ಜಿಲ್ಲೆಗೆ 1960ರಲ್ಲಿ ಮಹಾವಿದ್ಯಾಲಯ ಸ್ಥಾಪಿಸಿ ಇಲ್ಲಿನ ಪ್ರತಿಭೆಗಳನ್ನು ಇಲ್ಲಿಯೇ ನಿರ್ಮಾಣ ಮಾಡಲು ಅವಕಾಶ ಮಾಡಿದ ಮಹಾನಜೀವಿ ಇವರು ಸ್ಥಾಪಿಸಿರುವ ಶಿಕ್ಷಣ ಸಂಸ್ಥೆಯಲ್ಲಿ ಹಲವಾರು ಕುಟುಂಬಗಳು ಇಂದು ಸುಖವಾಗಿ ಜೀವನ ನಡೆಸುತ್ತಿದ್ದಾರೆ ಅವರ ಸ್ವ–ಂತಕ್ಕಾಗಿ ಯಾವುದೇ ಆಸ್ತಿ ಮಾಡಿಕೊಳ್ಳದೆ ಎಲ್ಲಾ ಶಿಕ್ಷಣ ಸಂಸ್ಥೆಗಳ ಸರ್ವಾಂಗಿಣ ಅಭಿವೃದ್ಧಿಗಾಗಿ ಶ್ರಮಿಸಿದರು, ಆದುದರಿಂದ ಇವರು ಕಲ್ಯಾಣ ಕರ್ನಾಟಕದ ದಿವ್ಯಜ್ಯೋತಿ ಶಿಕ್ಷಣ ಶಿಲ್ಪಿ, ಹುಟ್ಟು ಹೋರಾಟಗಾರ ಸ್ವಾತಂತ್ರ್ಯವೀರ ದೇಶಪ್ರೇಮಿ ಹಾಗೂ ಈ ಭಾಗದ ಮದನಮೋಹನ ಮಾಳವೀಯ ಎಂದೇ ಹೆಸರುವಾಸಿಯಾಗಿರುವುದು ನಿಜಕ್ಕೂ ಸೂಕ್ತವಾಗಿದೆ ಇವರ ಆದರ್ಶ ಇಟ್ಟು–ಕೊಂಡು ವಿದ್ಯಾರ್ಥಿಗಳು ತಮ್ಮ ಉನ್ನತ ವ್ಯಾಸಂಗ ಮಾಡಿ ದೇಶ, ವಿದೇಶಗಳಲ್ಲಿ ನಮ್ಮ ಮಹಾವಿದ್ಯಾಲಯದ ತಮ್ಮ ಪಾಲಕರ ಹಾಗೂ ಗುರುಗಳ ಕೀರ್ತಿಯನ್ನು ಅಜರಾಮರಗೋಳಿಸಬೇಕೆಂದು ವಿದ್ಯಾರ್ಥಿಗಳಿಗೆ ಕರೆಕೊಟ್ಟರು.



ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಮಹಾದೇವಪ್ಪ ರಾಂಪೂರೆಯವರು ಎಂದೂ ಬತ್ತದ ಭತ್ತದ ಕಣಜ ಜ್ಞಾನದ ಕಣಜ, ಕಲ್ಪವೃಕ್ಷ, ಕಾಮದೇನು ಇವರು ಉನ್ನತ ಶಿಕ್ಷಣಕ್ಕಾಗಿ 1958ರಲ್ಲಿ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆ ಸ್ಥಾಪಿಸಿ ಬಡವರಿಗೆ ವಿದ್ಯಾರ್ಜನೆ ಅಂದಿನ ದಿನಗಳಲ್ಲಿ ಬಹಳ ಕಷ್ಟವಾಗಿತ್ತು ಅಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗ ಮಾಡಿ ಉನ್ನತ ಹುದ್ದೆ ಪಡೆಯಲು ಮಾರ್ಗದರ್ಶಕರಾದರು ಬ್ರಿಟಿಷ್‌ರ ವಿರುದ್ಧ ಚಳುವಳಿ ಹೋರಾಟ ಮಾಡುತ್ತಾ ಜನನಾಯಕರಾದ ಇವರ ರಾಜಕೀಯ ಗುರುಗಳು ಎಂ.ಎನ್. ರಾಯ ಅವರ ಮಾರ್ಗದರ್ಶನದಲ್ಲಿ ರಾಂಪೂರೆಯವರು ಅನೇಕ ಚಳುವಳಿಗಳಲ್ಲಿ ಭಾಗವಹಿಸಿದರು ಆದರು ಸಹ ಅವರ ಛಲ ಬಿಡದೆ ಮೂರ್ತಿ ಚಿಕ್ಕದಾದರು ಕೀರ್ತಿ ದೊಡ್ಡದು ಹೀಗಾಗಿ ಅನೇಕ ಇತಿಹಾಸಕಾರರು ಅವರು ಮಾಡಿದ ಸೇವೆಯನ್ನು ಪರಿಗಣಿಸಿ ದಕ್ಷಿಣ ಭಾರತದ ಶಿಕ್ಷಣ ಶಿಲ್ಪಿ ಎಂದು ನುಡಿದರು ವಿದ್ಯಾರ್ಥಿಗಳು ಸಹ ಇವರ ಮಾರ್ಗದರ್ಶದಲ್ಲಿ ನಡೆಯಬೇಕೆಂದು ನುಡಿದರು

ಕಾರ್ಯಕ್ರಮದ ಮೊದಲಿಗೆ ಕಛೇರಿಯ ಅಧೀಕ್ಷಕರಾದ ಶ್ರೀ ಸುಜೀತಕುಮರ ಬಿ. ಸ್ವಾಗತಿಸಿದರೆ, ಇತಿಹಾಸದ ಉಪನ್ಯಾಸಕರಾದ ಶ್ರೀ ಬಸವರಾಜ ಬಿರಾದಾರ ವಂದಿಸಿದರು, ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು ಹಾಗೂ ಬೋಧಕೇತರ ಸಿಬ್ಬಂದಿಗಳು ಹಾಜರಿದ್ದರು.

# ಜಾನಪದ ಸಂಸ್ಕೃತಿ, ಸಂಸ್ಕಾರದ ಬದುಕನ್ನು ಬಿಂಬಿಸುತ್ತದೆ:ಗಿರಿಸಾಗರ ಶ್ರೀಗಳು



ಮಲ್ಲಮ ನುಡಿ ವಾರ್ತೆ

ಬಾಗಲಕೋಟೆ,ಫೆ.6– ಜನರ ಸಂಸ್ಕೃತಿ, ಸಂಸ್ಕಾರ, ಬದುಕನ್ನು ಬಿಂಬಿಸುವುದೇ ಜಾನಪದವಾಗಿದ್ದು ಅದನ್ನು ಉಳಿಸಿ ಬೆಳೆಸಬೇಕು. ವಿದೇಶಿ ಸಂಸ್ಕೃತಿಯನ್ನು ಅನುಸರಿಸಿ ನಮ್ಮ ಸಂಸ್ಕೃತಿಯನ್ನು ಮರೆಯುವುದು ಸರಿಯಲ್ಲ ಎಂದು ಗಿರಿಸಾಗರ ಕಲ್ಯಾಣ ಹಿರೇಮಠದ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಗಿರಿಸಾಗರ ಗ್ರಾಮದಲ್ಲಿ ಕನ್ನಡ ಜಾನಪದ ಪರಿಷತ್ ಬೆಂಗಳೂರು, ಜಿಲ್ಲಾ ಘಟಕ ಬಾಗಲಕೋಟೆ, ತಾಲೂಕು ಘಟಕ ಬೀಳಗಿ ಇವರ ಸಹಯೋಗದಲ್ಲಿ ಗಿರಿಸಾಗರ ವಲಯ ಘಟಕ ಮತ್ತು ಗಿರಿಸಾಗರ ಗ್ರಾಮ ಘಟಕದ ಉದ್ಘಾಟನೆ, ಪದಗ್ರಹಣ, ಸನ್ಮಾನ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಂವಿಧಾನದ ನಡವಳಿಕೆಗಳನ್ನು ಅನುಸರಿಸಿದಂತೆ ನಮ್ಮ ಹಿರಿಯರು, ಅನುಭಾವಿಗಳು, ಜನಪದರು ನಮ್ಮ ನಾಡಿನ ಸಂಸ್ಕೃತಿಯನ್ನು, ಬದುಕಿನ ನೆಲೆಗಳನ್ನು, ಜೀವನದ ಕಲೆಗಳನ್ನು ಜಾನಪದದ ರೂಪದಲ್ಲಿ ಉಳಿಸಿ ಹೋಗಿದ್ದಾರೆ ಅದನ್ನು ರಕ್ಷಿಸುವುದು ನಮ್ಮಗಳ ಕೆಲಸವಾಗಬೇಕು ಎಂದು ಶ್ರೀಗಳು ಹೇಳಿದರು.

ಮುಖ್ಯ ಅತಿಥಿ ಕನ್ನಡ ಸಾಹಿತ್ಯ ಪರಿಷತ್ ರಾಜ್ಯ ಕಾರ್ಯಕಾರಿಣಿ ಸದಸ್ಯ ಜಿ.ಕೆ. ತಳವಾರ ಮಾತನಾಡಿ, ಕಣ್ಮರೆಯಾಗುತ್ತಿರುವ ಗೋಂಧಳಿ ಕಲೆಯನ್ನು ಉಳಿಸುವಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಡಾ.ವೆಂಕಪ್ಪ ಸುಗತೇಕರ ಕುಟುಂಬದ ಕಾರ್ಯ ಸ್ಮರಣೀಯ. ಅವರನ್ನು ಕನ್ನಡ ಜಾನಪದ ಪರಿಷತ್ ಗುರ್ತಿಸುವ ಮೂಲಕ, ಶಿರೂರದಲ್ಲಿ ಜರುಗಿದ ಕನ್ನಡ ಜಾನಪದ ಪರಿಷತ್ತಿನ ಪ್ರಥಮ ಜಿಲ್ಲಾ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿತ್ತು ಎಂದು ಹೇಳಿದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಣ್ಮರೆಯಾಗುತ್ತಿರುವ ಗೋಂದಳಿ ಕಲೆಯನ್ನು ಉಳಿಸಿ ಬೆಳೆಸುವಲ್ಲಿ ವೆಂಕಪ್ಪ ಸುಗತೇಕರ ಕುಟುಂಬದ ಶ್ರಮ ಶ್ಲಾಘನೀಯವಾಗಿದೆ. ಅದರ ಪ್ರತಿಫಲವಾಗಿ ಇಂದು ವೆಂಕಪ್ಪ ಸುಗತೇಕರ ಅವರಿಗೆ ಪದ್ಮಶ್ರೀ ಪ್ರಶಸ್ತಿ ಲಭಿಸಿದೆ. ಇದು ಹೆಮ್ಮೆಯ ಸಂಗತಿ ಎಂದರು.

ಕನ್ನಡ ಜಾನಪದ ಪರಿಷತ್ ತಾಲೂಕಾಧ್ಯಕ್ಷ ಬಸವರಾಜ ದಾವಣಗೆರೆ ಪ್ರಾಸ್ತಾವಿಕವಾಗಿ ಮಾತನಾಡಿ, ಜನಪದ ಕಲೆ ಸಾಹಿತ್ಯವನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ನಮ್ಮ ಕನ್ನಡ ಜಾನಪದ ಪರಿಷತ್ ಶ್ರಮಿಸುತ್ತಿದ್ದು, ಈ ಕಾರ್ಯಕ್ಕೆ ಸಮಾಜ ಕೈಜೋಡಿಸಬೇಕು. ಅಂದಾಗ ಕಲೆ ಮತ್ತು ಕಲಾವಿದರು ಉಳಿಯಲಿದ್ದಾರೆಂದು ಹೇಳಿದರು.

ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಜಾನಪದ ಕಲಾವಿದ ಡಾ. ವೆಂಕಪ್ಪ ಸುಗತೇಕರ ಸಂಬಳ ನುಡಿಸಿ, ಶಿವನಾಮ ಪದ ಹಾಡುವ ಮೂಲಕ ಸಮಾರಂಭ ಉದ್ಘಾಟಿಸಿದರು. ಕನ್ನಡ ಜಾನಪದ ಪರಿಷತ್ ಗಿರಿಸಾಗರ ವಲಯ ಘಟಕದ ಅಧ್ಯಕ್ಷರಾಗಿ ಶ್ರೀಕಾಂತ ಸಂದಿಮನಿ ಹಾಗೂ ಗಿರಿಸಾಗರ ಗ್ರಾಮ ಘಟಕದ ಅಧ್ಯಕ್ಷರು, ಪದಾಧಿಕಾರಿಗಳು ಪದಗ್ರಹಣ ಮಾಡಿದರು. ಅತಿಥಿಗಳಾಗಿ ಮುಖ್ಯೋಪಾಧ್ಯಾಯ ಹನುಮಂತ ಅರಸುಣಗಿ, ಕಜಾಪ ಜಿಲ್ಲಾ ಕಾರ್ಯದರ್ಶಿ ಆರ್.ಬಿ. ನಬಿವಾಲೆ, ಜಿಲ್ಲಾ ಖಜಾಂಚಿ ಸುರೇಶ ವಸ್ತ್ರದ, ಗ್ರಾಪಂ ಅಧ್ಯಕ್ಷೆ ಶಾಂತವ್ವ ಬಂಡಿವಡ್ಡರ, ಪಿಡಿಒ ವಿಮಲಾ ಕಲ್ಮಣಿ, ಕಜಾಪ ತಾಲೂಕಾ ಕಾರ್ಯದರ್ಶಿ ಬಸವರಾಜ ನಾಯ್ಕ ಮತ್ತಿತರು ಇದ್ದರು. ಬಿ.ವೈ.ಹರದೊಳ್ಳಿ ನಿರೂಪಿಸಿದರು. ಆನಂದ ಬೊಮ್ಮನ್ನವರ ಸ್ವಾಗತಿಸಿದರು. ಸಂಗಮೇಶ ಅಗಸರ ವಂದಿಸಿದರು.

# ಅರಿಶಿಣ, ಮೆಣಸಿನಕಾಯಿ ಬೆಳೆಗೆ ಪೂರಕ ವಾತಾವರಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.6–ಜಿಲ್ಲೆಯಲ್ಲಿ ಅರಿಶಿಣ ಹಾಗೂ ಮೆಣಸಿನಕಾಯಿ ಬೆಳೆ ಬೆಳೆಯಲು ಪೂರಕ ವಾತಾವರಣವಿದ್ದು, ರೈತರ ಈ ಬೆಳೆಗಳನ್ನು ಬೆಳೆಯುವುದಕ್ಕೆ ಹೆಚ್ಚು ಗಮನಹರಿಸುವಂತೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ವಿಷ್ಣುವರ್ಧನ ಹೇಳಿದರು.

ತೋಟಗಾರಿಕೆ ವಿವಿಯ ರೈತ ಹಾಗೂ ಸಿಬ್ಬಂದಿ ತರಬೇತಿ ಕೇಂದ್ರದ ರೈತ ವಿಕಾಸ ಭವನದಲ್ಲಿ ಗುರುವಾರ ತೋಟಗಾರಿಕೆ ವಿವಿ ಬೀಜ ಘಟಕ, ಉತ್ಪಾದಕರ ಸಂಘಗಳ ಉತ್ತೇಜನ ಕೇಂದ್ರ ಹಾಗೂ ಸಿಎಸ್ಎಸ್–ಎಂ.ಐ.ಡಿಎಚ್ ಯೋಜನೆ, ಅಡಿಕೆ ಮತ್ತು ಸಾಂಬಾರು ಬೆಳೆ ಅಭಿವೃದ್ಧಿ ನಿರ್ದೇಶನಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ಅರಿಶಿಣ ಮತ್ತು ಒಣ ಮೆಣಸಿನಕಾಯಿ ಬೆಳೆಗಳಲ್ಲಿ ಆಧುನಿಕ ಉತ್ಪಾದನಾ ತಾಂತ್ರಿಕತೆ ಕುರಿತು ಜಿಲ್ಲಾ ಮಟ್ಟದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಒಣ ಮೆಣಸಿನಕಾಯಿ ಹಾಗೂ ಅರಿಷಿಣ ಹೆಚ್ಚಿನ ಪ್ರಮಾಣದಲ್ಲಿ ರಫ್ತು ಮಾಡುವಂತಹ ಬೆಳೆಗಳಾಗಿವೆ. ದೇಶದಲ್ಲಿ ಆಂಧ್ರಪ್ರದೇಶದಲ್ಲಿ ಅತೀ ಹೆಚ್ಚು ಮೆಣಸಿನಕಾಯಿ ಬೆಳೆಯನ್ನು ಅಂದರೆ ಪ್ರತಿ ಎಕರೆಗೆ 30 ಕ್ವಿಂಟಲ್‌ವರೆಗೆ ಬೆಳೆಯುತ್ತಿದ್ದಾರೆ. ಆದರೆ ರಾಜ್ಯದಲ್ಲಿ ಪ್ರತಿ ಎಕರೆಗೆ 15 ರಿಂದ 20 ಕ್ವಿಂಟಲ್ ಮಾತ್ರ ಬೆಳೆಯಲಾಗುತ್ತಿದೆ. ಇದೊಂದು ಲಾಭದಾಯಕ ಬೆಳೆಯಾಗಿದ್ದು, ಇಲ್ಲಿಯ ರೈತರು ಬೆಳೆಗಳ ಉತ್ಪಾದನೆಯಲ್ಲಿ ತಾಂತ್ರಿಕತೆ ಅಳವಡಿಸಿಕೊಂಡಲ್ಲಿ ಹೆಚ್ಚಿನ ಇಳುವರಿ ತೆಗೆಯಬಹುದಾಗಿದೆ ಎಂದು ಡಾ.ವಿಷ್ಣುವರ್ಧನ ಹೇಳಿದರು.

ಬಾಗಲಕೋಟೆ ಜಿಲ್ಲೆಯಲ್ಲಿ ಅರಿಶಿಣ ಹಾಗೂ ಮೆಣಸಿನಕಾಯಿ ಬೆಳೆ ಬೆಳೆಯಲು ಪೂರಕವಾದ ಫಲವತ್ತಾದ ಭೂಮಿ, ನೀರು ಇದ್ದು, ಬೆಳೆಗಳ ಉತ್ಪಾದನೆಯಲ್ಲಿ ತಾಂತ್ರಿಕತೆ ಅಳವಡಿಸಿಕೊಂಡು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದನೆ ಮಾಡಿದಲ್ಲಿ ಬೇರೆ ದೇಶಗಳಿಗೆ ರಫ್ತು ಮಾಡಿ ಆರ್ಥಿಕ ಮಟ್ಟ ಹೆಚ್ಚಿಸಿಕೊಳ್ಳಬಹುದಾಗಿದೆ. ಇಂತಹ ವಾಣಿಜ್ಯ ಬೆಳೆಗಳಿಗೆ ಮಾರುಕಟ್ಟೆ ಸಮಸ್ಯೆ ಇದ್ದು, ಈ ಮಾರುಕಟ್ಟೆ ಬಗ್ಗೆ ಮಾಹಿತಿ ನೀಡುವ ಉದ್ದೇಶದಿಂದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರೈತರು ಈ ತರಬೇತಿಯನ್ನು ಸದುಪಯೋಗ ಮಾಡಿಕೊಳ್ಳುವಂತೆ ಕುಲಪತಿಗಳು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹುಬ್ಬಳ್ಳಿಯ ರಾಜ್ಯ ಸಾಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕ ಬಿ.ಆರ್.ಗಿರೀಶ ಮಾತನಾಡಿ, ದೇಶದಲ್ಲಿ ವೈವಿದ್ಯಮಯ ಬೆಳೆ ಬೆಳೆಯಲು ವಾತಾವರಣ ಪೂರಕವಾಗಿದ್ದು, 303 ಸಾಂಬಾರು ಪದಾರ್ಥಗಳ ಪೈಕಿ 50ಕ್ಕೂ ಹೆಚ್ಚು ಪದಾರ್ಥಗಳನ್ನು ದೇಶದಲ್ಲಿ ಬೆಳೆಯಲಾಗುತ್ತಿದೆ. ಅವಕಾಶಗಳ ಜೊತೆ ತೊಂದರೆಗಳು ಇದ್ದು, ಸಾಧಕ ಬಾಧಕ ಪರಿಶೀಲಿಸಿ ಇದಕ್ಕಾಗಿ ಸಾಂಸ್ಥಿಕ ವ್ಯವಸ್ಥೆ ಕೊಡಲು ಸರಕಾರ ಮುಂದಾಗಿದೆ. ಇತ್ತೀಚೆಗೆ ಹುಬ್ಬಳ್ಳಿಯಲ್ಲಿ ನಡೆದ ಸಮಾವೇಶದಲ್ಲಿ ಮಾರುಕಟ್ಟೆಗೆ ಸಂಬಂಧಿಸಿದಂತೆ ರಫ್ತುದಾರರು, ಉದ್ದಿಮೆದಾರರು ಹಾಗೂ ರೈತರ ನಡುವೆ ದೊಡ್ಡ ಮಟ್ಟದ ವಹಿವಾಟು ನಡೆಯಿತು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ರೈತ ಹಾಗೂ ಸಿಬ್ಬಂದಿ ತರಬೇತಿ ಕೇಂದ್ರದ ಮುಖ್ಯಸ್ಥ ಡಾ.ವಸಂತ ಗಾಣಿಗೇರ, ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ರೈತರಿಗೆ ಅನುಕೂಲವಾಗುವಂತಹ ಸಂಶೋಧನೆಗಳು ನಡೆಯುತ್ತಿವೆ. ತೋಟಗಾರಿಕೆ ಬೆಳೆಗಳ ಮಹತ್ವದ ಜೊತೆ ಮಾರುಕಟ್ಟೆ ವ್ಯವಸ್ಥೆಯ ಬಗ್ಗೆ ರೈತರಿಗೆ ಮಾಹಿತಿ ನೀಡುವ ಸಲುವಾಗಿ ಈ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ತೋಟಗಾರಿಕೆ ವಿವಿಯ ವಿಸ್ತರಣಾ ನಿರ್ದೇಶಕ ಡಾ.ಎಂ.ಎಸ್.ಲೋಕೇಶ, ಬೀಜ ಘಟಕದ ವಿಶೇಷಾಧಿಕಾರಿ ಡಾ.ಶಾಂತಪ್ಪ ತಿರಕನ್ನವರ, ಸಹ ಪ್ರಾಧ್ಯಾಪಕಿ ಡಾ.ಪಲ್ಲವಿ ಎಚ್.ಎಂ, ಸಂಶೋಧನ ನಿರ್ದೇಶಕ ಡಾ.ಬಿ.ಫಕ್ರುದ್ದೀನ್, ಡಾ.ಬಾಪುರಾಯಗೌಡ ಪಾಟೀಲ ಸೇರಿದಂತೆ ಇತರರು ಇದ್ದರು.

# ಛತ್ರಪತಿ ಶಿವಾಜಿ ಜಯಂತಿಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ : ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.6: ಫೆಬ್ರವರಿ 25ರಂದು ಜಿಲ್ಲಾ ಕೇಂದ್ರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಸೂಚನೆ ನೀಡಿದರು.

ಅವರು ಸೋಮವಾರ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ ಕುರಿತು ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್–2ರ ಸಭಾಂಗಣದಲ್ಲಿ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾಜದ ಮುಖಂಡರ ಕೋರಿಕೆಯ ಮೇರೆಗೆ ಕೊಪ್ಪಳ ಜಿಲ್ಲಾ ಮಟ್ಟದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆಯನ್ನು ಫೆ.19ರ ಬದಲಿಗೆ ಫೆ. 25ರಂದು ಆಯೋಜಿಸಲಾಗುವುದು. ಅಂದು 10.30 ಗಂಟೆಗೆ ಸಾಹಿತ್ಯ ಭವನದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಪೂಜೆ, ಛತ್ರಪತಿ ಶಿವಾಜಿ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ನಡೆಯಲಿದೆ. ವೇದಿಕೆ ಕಾರ್ಯಕ್ರಮದ ಬಳಿಕ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರದ ಮೆರವಣಿಗೆಯು ಸಾಹಿತ್ಯ ಭವನದಿಂದ ಪ್ರಾರಂಭಗೊಂಡು ಜವಾಹರ ರಸ್ತೆ ಮೂಲಕ ಗಡಿಯಾರ ಕಂಬದ ಹತ್ತಿರದ ಕೋಟೆ ರಸ್ತೆಯಲ್ಲಿರುವ ಛತ್ರಪತಿ ಶಿವಾಜಿ ವೃತ್ತದ ವರೆಗೆ ಜರುಗಲಿದೆ ಎಂದರು.

ಸಮಾರಂಭ ದಿನದಂದು, ಸಾಹಿತ್ಯ ಭವನ ಮತ್ತು ರಸ್ತೆ ಸ್ವಚ್ಛತೆ, ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳಬೇಕು. ಈ ಜಯಂತಿಯನ್ನು ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳು, ಗ್ರಾಮ ಪಂಚಾಯತ್ ಮತ್ತು ಇತರೆ ಕಛೇರಿಗಳಲ್ಲಿ ಆಚರಿಸುವಂತಾಗಬೇಕು. ಜಿಲ್ಲಾ ಮಟ್ಟದ ಜಯಂತಿ ಆಚರಣೆ ಕಾರ್ಯಕ್ರಮಕ್ಕಾಗಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತಿ ಕಾರ್ಯಕ್ರಮ ಯಶಸ್ವಿಗೆ ಎಲ್ಲಾ ಸಮಾಜದ ಮುಖಂಡರು, ಸಾರ್ವಜನಿಕರು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ಮರಬನಳ್ಳಿ, ಕೊಪ್ಪಳ ನಗರಸಭೆ ಪೌರಾಯುಕ್ತರಾದ ಗಣಪತಿ ಪಾಟೀಲ್, ಛತ್ರಪತಿ ಶಿವಾಜಿ ಮಹಾರಾಜ (ಮರಾಠ) ಸಮಾಜದ ಮುಖಂಡರಾದ ಮಾರುತಿ ಎನ್., ಫಕೀರಪ್ಪ ಆರೇರ್, ಉಮೇಶ ಸುರ್ವೆ, ಚಂದ್ರಪ್ಪ ಬಡಿಗೇರ, ರಮೇಶ ಘೋರ್ಪಡೆ, ಪ್ರಾಣೇಶ ಕಂಪ್ಲಿ, ಹನುಮಂತ ಕಾರಟಗಿ, ಬಸವರಾಜ ಕಂಪ್ಲಿ, ಮಹಾಂತೇಶ, ಪ್ರತಾಪ ಬಡಿಗೇರ ಸೇರಿದಂತೆ ಮತ್ತಿತರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಮೀರವಾಡಿ, ಬೀಳಗಿ ದತ್ತಿ ಪ್ರಶಸ್ತಿಗೆ ಕೃತಿಗಳ ಆಹ್ವಾನ


ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.6– ಸಮೀರವಾಡಿಯಲ್ಲಿ ಜರುಗಿದ ಅವಿಭಜಿತ ವಿಜಯಪುರ ಜಿಲ್ಲೆಯ 7 ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸವಿನೆನಪಿನ ದತ್ತಿ ಪ್ರಶಸ್ತಿಗೆ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಯ ಸಾಹಿತಿಗಳ 2024 ನೇ ಸಾಲಿನಲ್ಲಿ ಪ್ರಕಟವಾದ ಸಣ್ಣಕತೆ, ಕಾದಂಬರಿ, ಕಾವ್ಯ, ನಾಟಕ ಹಾಗೂ ಮಕ್ಕಳ ಸಾಹಿತ್ಯ ಪ್ರಕಾರದ ಕೃತಿಗಳನ್ನು ಆಹ್ವಾನಿಸಲಾಗಿದೆ.

ಅದರಂತೆ ಬಾಗಲಕೋಟೆ ಜಿಲ್ಲಾ ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನದ ಸವಿನೆನಪಿನ ಬೀಳಗಿ ದತ್ತಿ ಪ್ರಶಸ್ತಿಗೆ ಬಾಗಲಕೋಟೆ ಜಿಲ್ಲಾ ಲೇಖಕರ ನಾಟಕ, ಕಾವ್ಯ, ಕಥೆ, ಜಾನಪದ ಹಾಗೂ ಪತ್ರಿಕಾ ಲೇಖನಗಳ ಪುಸ್ತಕ ಪ್ರಕಾರದ ಕೃತಿಗಳು ಮತ್ತು ಬೀಳಗಿಯಲ್ಲಿ ಜರುಗಿದ ತಾಲ್ಲೂಕಾ ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನದ ಸವಿನೆನಪಿನ ದತ್ತಿ ಪ್ರಶಸ್ತಿಗೆ ಬೀಳಗಿ ತಾಲೂಕಿನ ಲೇಖಕರ ಯಾವುದೇ ಪ್ರಕಾರದ ಸಾಹಿತ್ಯ ಕೃತಿಗಳನ್ನು ಆಹ್ವಾನಿಸಲಾಗಿದೆ.

ಸಾಹಿತಿಗಳು ತಮ್ಮ ಅರ್ಜಿಯ ಜೊತೆಗೆ 2024 ರಲ್ಲಿ ಪ್ರಕಟವಾದ ತಮ್ಮ ಪುಸ್ತಕದ ಮೂರು ಪ್ರತಿಗಳನ್ನು ದಿನಾಂಕ 20–2–2025 ರೊಳಗಾಗಿ ಶಿವಾನಂದ ಶೆಲ್ಲಿಕೇರಿ ಜಿಲ್ಲಾಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು ಬಾಗಲಕೋಟೆ, ಅಂಚೆ:ಗಲಗಲಿ ತಾ:ಬೀಳಗಿ ಜಿ:ಬಾಗಲಕೋಟೆ ಈ ವಿಳಾಸಕ್ಕೆ ಕಳಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.9731095271, 9481726144, 9449645535 ನಂಬರಗಳಿಗೆ ಸಂಪರ್ಕ ಮಾಡಬೇಕೆಂದು ಗೌರವ ಕಾರ್ಯದರ್ಶಿ ಚಂದ್ರಶೇಖರ ಕಾಳನ್ನವರ, ಕೋಶಾಧ್ಯಕ್ಷ ಸಿ.ಎಂ.ಜೋಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.೩ ಡಾ.ಚನ್ನಬಸವ ಪಟ್ಟದ್ದೇವರ ಮೂರ್ತಿ ಅನಾವರಣ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.6:ತಾಲೂಕಿನ ಖೇಡ–ಸಂಗಮದ ನೀಲಾಂಬಿಕಾ ಆಶ್ರಮದಲ್ಲಿ ಫೆ.9 ರಂದು ಪೂಜ್ಯ ಶ್ರೀ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಹಾಗೂ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರ ದಿವ್ಯಸಾನಿಧ್ಯದಲ್ಲಿ ಪರಮಪೂಜ್ಯ ಡಾ.ಚನ್ನಬಸವ ಪಟ್ಟದ್ದೇವರ ಮೂರ್ತಿ ಅನಾವರಣ ಹಾಗೂ ಮಹಾದೇವಮ್ಮತಾಯಿ ಕುರಿತು ದಿವ್ಯಾಂಗ ದೀಪ್ತ ಅಭಿನಂದನಾ ಗ್ರಂಥ ಲೋಕಾರ್ಪಣೆ ಮತ್ತು ಮನೆಯಲ್ಲಿ ಮಹಾಮನೆ ಬೆಳ್ಳಿಹಬ್ಬ ಸಮಾರಂಭ ಜರುಗಲಿದೆ.

ಪೂಜ್ಯ ಶ್ರೀ ಡಾ.ಚನ್ನಬಸವ ಪಟ್ಟದ್ದೇವರು ಗಡಿಭಾಗದಲ್ಲಿ ಕನ್ನಡ ಕಟ್ಟಿದ ಕನ್ನಡದ ಪಟ್ಟದ್ದೇವರು ಆಗಿದ್ದಾರೆ. ನಿಜಾಮ ಆಡಳಿತದ ಉರ್ದು ಭಾಷೆಯ ಪ್ರಾಬಲ್ಯದಲ್ಲಿ ಕನ್ನಡದ ಧ್ವಜ ಎತ್ತಿ ಹಿಡಿದಿದ್ದಾರೆ. ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಸ್ಥಾಪಿಸಿ ಶೈಕ್ಷಣಿಕ ಜಾಗೃತಿ ಮಾಡಿದ್ದಾರೆ. ಶಿಕ್ಷಣಕ್ಕಾಗಿ ಅವರು ಅನುಭವಿಸಿದ ಕಷ್ಟ, ನೋವು, ಪರಿಶ್ರಮ, ತ್ಯಾಗ ಎಲ್ಲರಿಗೂ ಮಾದರಿಯಾದದ್ದು. ಅಂತಹ ಪೂಜ್ಯರು ಬದುಕಿದ ಮೌಲ್ಯಗಳನ್ನು ವಿದ್ಯಾರ್ಥಿಗಳಿಗೆ ಸದ್ಭಕ್ತರಿಗೆ ಪ್ರೇರಣೆಯಾಗಲೆಂಬ ಉದ್ದೇಶದಿಂದ ಪೂಜ್ಯರ ಮೂರ್ತಿ ಅನಾವರಣ ಮಾಡಲಾಗುತ್ತಿದೆ.

ಜೊತೆಗೆ ಪೂಜ್ಯರ ಮಾರ್ಗದರ್ಶನದಲ್ಲಿ ಬಸವತತ್ವ ಪ್ರಸಾರ ಮಾಡುತ್ತಿರುವ ಡಾ.ಮಹಾದೇವಮ್ಮತಾಯಿ ಅವರಿಗೆ ದಿವ್ಯಾಂಗ ದೀಪ್ತಿ ಅಭಿನಂದನಾ ಗ್ರಂಥ ಅರ್ಪಿಸಲಾಗುತ್ತಿದೆ. ಈ ಸಮಾರಂಭದ ಜೊತೆಗೆ ಅನೇಕ ಕಾರ್ಯಕ್ರಮಗಳು ನಡೆಯಲಿವೆ.

ಈ ಕಾರ್ಯಕ್ರಮದಲ್ಲಿ ಎಲ್ಲ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸ್ವಾಗತ ಸಮಿತಿ ಅಧ್ಯಕ್ಷರಾದ ವರ್ಷಾ ಓಂಪ್ರಕಾಶ ಬಿರಾದಾರ ಅವರು ಮನವಿ ಮಾಡಿದ್ದಾರೆ.

# ಸ್ವಚ್ಛ ಪರಿಸರ ಉಳಿಸಿ, ಜೀವ ಸಂಕುಲ ಬೆಳೆಸಿ: ಮಠ



ಮಲ್ಲಮ ನುಡಿ ವಾರ್ತೆ

ಹುಣಸಗಿ:ಫೆ.6: "ಕಾಡು ಬೆಳೆಸಿ, ನಾಡು ಉಳಿಸಿ" ಎಂಬ ನಾಣ್ನುಡಿ ಕೇವಲ ಹೇಳಿಕೆಗೆ ಮೀಸಲಾಗಿರದೇ ಸ್ವಚ್ಛ ಹಸಿರಿನಿಂದ ಕೂಡಿದ ಪರಿಸರ ಉಳಿದಾಗ ಮಾತ್ರ ಸಕಲ ಜೀವ ಸಂಕುಲ ಉಳಿದು ಬೆಳೆದು ಬರಲು ಸಾಧ್ಯ ಎಂದು ಪಿಯು ಕಾಲೇಜಿನ ಉಪನ್ಯಾಸಕ ದಯಾನಂದ ಮಠ ಸ್ಥಳೀಯ ಸ.ಪ.ಪೂ.ಮಹಾವದ್ಯಾಲಯದಲ್ಲಿ (ಪ್ರೌಢ ವಿಭಾಗ) ಇಕೋ ಕ್ಲಬ್ ವತಿಯಿಂದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಮಾತನಾಡುತ್ತಾ ಇದೀಗ ಕಾಯ್ದಿಟ್ಟ ಅರಣ್ಯಗಳೆಲ್ಲಾ, ಕಡಿದಿಟ್ಟ ಅರಣ್ಯಗಳಾಗುತ್ತಿರುವುದು ವಿಷಾದನೀಯ ಎಂದರು.

ಉಪ ಪ್ರಾಚಾರ್ಯ ಶರಣಪ್ಪ ಹೂಗಾರ ಮಾತನಾಡಿ ಮನೆ ಅಂಗಳದಿಂದ ಹಿಡಿದು ಶಾಲಾ ಕಾಲೇಜುಗಳ ಆವರಣದಲ್ಲಿ ಸ್ವಚ್ಛ ಪರಿಸರವನ್ನು ಹೊಂದಲು ಮರಗಿಡಗಳನ್ನು ಬೆಳೆಸಲು ಮುಂದಾಗಿ ಎಂದು ಕರೆ ನೀಡಿದರು, ಶಿಕ್ಷಕ ಆನಂದಕುಮರ ಕಟ್ಟಿಮನಿ, ವಿಶ್ವನಾಥ ಪತ್ತಾರ ಮಾತನಾಡಿದರು. ಶಿಕ್ಷಕರಾದ ಖಾಜಾ ಮೈನುದ್ದೀನ, ರಾಜು ಕಟ್ಟಿಮನಿ, ರಿಯಾಜ ಡೋಣ , ಸಂಗಮೇಶ ಅಂಗಡಿ, ಇದ್ದರು. ಇದೇ ಸಮಯದಲ್ಲಿ ಪರಿಸರದ ಕುರಿತು ನಡೆದ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಪ್ರಕಾಶ ದಿಡ್ಡಿಮನಿ ಸ್ವಾಗತಿಸಿ ವಂದಿಸಿದರು.

# ಗ್ರಾಮೀಣ ಜನರಿಂದ ಭಾರತೀಯ ಸಂಸ್ಕೃತಿ ಉನ್ನತಿ : ವಿಜಯ ಮಹಾಂತ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :ಫೆ.6: ಯಲಬುರ್ಗಾ ತಾಲೂಕಿನ ಭಾರತೀಯ ಸಂಸ್ಕತಿ ಉಳಿಯ ಬೇಕಾದರೆ ಗ್ರಾಮೀಣ ಜನರಿಂದ ಸಾಧ್ಯವಾಗಿದೆ ಎಂದು ಕುದರಿಮೋತಿಯ ವಿಜಯ ಮಹಾಂತ ಶ್ರೀಗಳು ಹೇಳಿದರು.

ತಾಲೂಕಿನ ಹಳ್ಳಿಗಳಲ್ಲಿರುವ ಜನರೂ ಧರ್ಮರಕ್ಷಣೆಗೆ ಆದ್ಯತೆ ನೀಢುತ್ತಿದ್ದಾರೆ.ದುಡ್ಡು ಇದ್ದವರು ದೊಡ್ಡವರಲ್ಲ ವ್ಯಕ್ತಿತ್ವದಿಂದ ದೊಡ್ಡವರಾಗಬೇಕು ಎಂದರು ತಾಲೂಕಿನ ಸೊಂಪುರ –ಹೊಸೂರ ಗ್ರಾಮದಲ್ಲಿ ಶ್ರೀ ದುರ್ಗಾದೇವಿ ಹಾಗೂ ಮಾರುತೇಶ್ವರ ದೇವಸ್ಥಾನದ ಕಳಸಾರೋಹಣ ಕಾರ್ಯಕ್ರಮದ ಧಿವ್ಯಸಾನಿಧ್ಯವನ್ನು ವಹಿಸಿ ಆಶೀರ್ವಚನಗೈದ ಅವರು ಅಷ್ಟಾವರಣದ ಮಹತ್ವವನ್ನು ವಿವರಿಸಿದರು. ಹಾಲಕೇರಿಯ ಮುಪ್ಪಿನ ಬಸವಲಿಂಗೇಶ್ವರ ಶ್ರೀಗಳು, ಯಲಬುರ್ಗಾ ಶ್ರೀಧರ ಹಿರೇಮಠದ ಬಸವಲಿಂಗೇಶ್ವರ ಶ್ರೀಗಳು, ಜಿಗೇರಿಯ ಶ್ರೀಗಳು, ಚಂದ್ರಶೇಖರಸ್ವಾಮಿಗಳು ಆಶೀರ್ವಚನ ಗೈದರು. ಧರ್ಮಸಾರದ ಬಗ್ಗೆ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೀರಣ್ಣ ನಿಂಗೋಜಿ ಉಪನ್ಯಾಸ ನೀಡಿದರು. ಗ್ರಾಮದ ಹಿರಿಯರಾದ ಹನುಮಂತಪ್ಪ ಬೇರಗಿ ಅಧ್ಯಕ್ಷತೆ ವಹಿಸಿ ಮಾತಾನಾಡಿದರು. ಗ್ರಾಮದ ಹಿರಿಯರಾದ ಮಂ.ಪಂ.ಮಾಜಿ ಸದಸ್ಯ ಹನುಮಂತಪ್ಪ ಬೇರಗಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಮುತ್ತಪ್ಪ ಅಂಗಡಿ , ಶಿವಪುತ್ರಪ್ಪ ಮಲಿಗೋಡದ, ಶರಣಪ್ಪ ಆರೇರ್. ನೀಲಮ್ಮ ತಮ್ಮಿನಾಳ, ಅಮರೇಶ ಶಿವಸಿಂಪರ್, ರಾಮನಗೌಡ , ಶರಣಪ್ಪ ಆರೇರ , ಶೇಖಪ್ಪ ಬೇರಗಿ , ಇನ್ನಿತರರು ವೇದಿಕೆ ಮೇಲೆ ಉಪಸ್ಥಿತರಿದ್ದರು.ಹಲವಾರು ಮಹಿಳೆಯರು ಶ್ರದ್ಧಾ ಭಕ್ತಿಯಿಂದ ಭಾಗವಹಿಸಿದ್ದು ವಿಶೇಷವಾಗಿತ್ತು.

# ಕೊಪ್ಪಳ ನಗರ ಸಭೆ : ಆಸ್ತಿಗಳ ತೆರಿಗೆಗೆ ಅಗತ್ಯ ದಾಖಲೆ ಸಲ್ಲಿಸಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.6: ಕೊಪ್ಪಳ ನಗರಸಭೆ ವ್ಯಾಪ್ತಿಯಲ್ಲಿನ ಸಾರ್ವಜನಿಕರು ತಮ್ಮ ಆಸ್ತಿಗಳ ತೆರಿಗೆಗೆ ಅಗತ್ಯ ದಾಖಲೆ ಸಲ್ಲಿಸಬೇಕು.

ಸರ್ಕಾರದ ಸುತ್ತೋಲೆಯನುಸಾರ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಆಸ್ತಿಗಳ ತೆರಿಗೆ, ಬೇಡಿಕೆ, ವಸೂಲಿ ಮತ್ತು ಬಾಕಿ ನಿರ್ವಹಿಸಲು ನಿಗದಿಪಡಿಸಿರುವ ನಮೂನೆ ಕೆ.ಎಂ.ಎಫ್. 24ರ ವಹಿ ಮತ್ತು ಆಸ್ತಿ ಕಣಜ ತಂತ್ರಾಂಶದಲ್ಲಿ ನಿಗದಿತ ಕಾಲಮಿತಿಯೊಳಗೆ ಕಾಲೋಚಿತಗೊಳಿಸಬೇಕಾಗಿರುತ್ತದೆ.

ಈ ಕಾರ್ಯವನ್ನು ನಿರ್ವಹಿಸಲು ಆಸ್ತಿಗಳಿಗೆ ಸಂಬಂಧಪಟ್ಟಂತೆ ಅಗತ್ಯ ದಾಖಲಾತಿಗಳಾದ ಖರೀದಿ ಪತ್ರ, ಎನ್.ಎ.ಆದೇಶದ ಪ್ರತಿ, ವಿನ್ಯಾಸ ನಕ್ಷೆ, ಚೆಕ್ಕಬಂದಿ ದಾಖಲಾತಿಗಳು, ವರ್ಗಾವಣೆ ಆದೇಶದ ಪ್ರತಿ, ಕೈ ಬರಹದ ನಮೂನೆ–3ರ ಪ್ರತಿ, ಆಸ್ತಿಯ ಭಾವಚಿತ್ರ, ಆಸ್ತಿ ಮಾಲೀಕರ ಪಾಸ್ ಪೋರ್ಟ ಸೈಜ್ ಭಾವಚಿತ್ರ ಮತ್ತು ಓಟರ್ ಐ.ಡಿ. ಈ ದಾಖಲಾತಿಗಳ ಅವಶ್ಯಕತೆ ಇರುತ್ತದೆ. ಈ ಎಲ್ಲಾ ದಾಖಲಾತಿಗಳನ್ನು ನಗರಸಭೆಯ ಸಂಬಂಧಪಟ್ಟ ವಾರ್ಡಿನ ಕರವಸೂಲಿಗಾರರಿಗೆ ವದಗಿಸಿಕೊಟ್ಟು ಸಹಕರಿಸುವಂತೆ ಕೊಪ್ಪಳ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸದೃಢ ರಾಷ್ಟ್ರಕ್ಕೆ ವಿದ್ಯಾರ್ಥಿಗಳ ಪಾತ್ರ ಮುಖ್ಯ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ

ನುಡಿಬಳ್ಳಾರಿ,ಫೆ.06:ಸ್ಪರ್ಧಾತ್ಮಕ ಯುಗದಲ್ಲಿ ಸದೃಢ ರಾಷ್ಟ್ರ ನಿರ್ಮಾಣಕ್ಕೆ ವಿದ್ಯಾರ್ಥಿಗಳ ಪಾತ್ರ ಬಹುಮುಖ್ಯ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಬುಧವಾರದಂದು,ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಆವರಣದಲ್ಲಿ ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ರಾಷ್ಟ್ರೀಯ ಸೇವಾ ಯೋಜನೆ ಘಟಕ ಬಳ್ಳಾರಿ, ಉನ್ನತಿ ಫೌಂಡೇಶನ್ ಬೆಂಗಳೂರು, ಉದ್ಯೋಗ-ಕೌಶಲ್ಯಅಭಿವೃದ್ಧಿ ಘಟಕ ಸಿಡಾಕ್ ಧಾರವಾಡ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ವಿದ್ಯಾರ್ಥಿಗಳ ಶ್ರೇಯಸ್ಸಿಗಾಗಿ ಮುಂಜಾನೆಯ ಹಾಗೂ ಮುಸ್ಸಂಜೆಯ ಮಾತು ಮತ್ತು ಮಂಥನ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ತಮ್ಮ ಭವಿಷ್ಯರೂಪಿಸಿಕೊಳ್ಳುವ ಶಕ್ತಿ ವಿದ್ಯಾರ್ಥಿಗಳ ಕೈಯಲ್ಲಿದೆ. ಸತತ ಪ್ರಯತ್ನ ಮತ್ತು ಗುಣಮಟ್ಟದ ವಿದ್ಯಾಭ್ಯಾಸದಿಂದ ವಿದ್ಯಾರ್ಥಿಗಳು ಯಶಸ್ಸು ಕಾಣಬಹುದು. ಉನ್ನತ ಸ್ಥಾನಮಾನದ ಉದ್ಯೋಗದ ಕನಸು ಹೊಂದಿರುವವರು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ಐಎಎಸ್, ಐಪಿಎಸ್ ಗಳಂತ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪ್ರಿಲಿಮ್ಸ್, ಮೇನ್ಸ್ ಮತ್ತು ಸಂದರ್ಶನ ಎಂದು ಮೂರು ಹಂತ ಇರುತ್ತವೆ. ವಿದ್ಯಾರ್ಥಿಗಳು ಸ್ವಯಂ ಪ್ರೇರಣೆ, ಸಾಫ್ಟ್ ಸ್ಕಿಲ್ ಕೌಶಲ್ಯ ಅಳವಡಿಸಿಕೊಂಡು ಯಶಸ್ಸು ಕಾಣಬಹುದು ಎಂದು ಹೇಳಿದರು.

ವಿಶ್ವವಿದ್ಯಾಲಯದಕುಲಪತಿಗಳಾದ ಪ್ರೊ.ಎಂ.ಮುನಿರಾಜು ಅವರು ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ಮತ್ತು ಸಮಯ ನಿರ್ವಹಣೆ ಪ್ರಜ್ಞೆ ಬೆಳೆಸಿಕೊಳ್ಳಬೇಕು. ಸ್ಪರ್ಧಾತ್ಮಕ ಪರೀಕ್ಷೆಗೆ ಪಠ್ಯಕ್ರಮ ಅಧ್ಯಯನದ ಜೊತೆಗೆ ದಿನ-ಪತ್ರಿಕೆ ಓದುವ ಹವ್ಯಾಸ ವೃದ್ಧಿಸಿಕೊಳ್ಳಬೇಕು ಎಂದು ಹೇಳಿದರು.

ಪದವಿಹಂತದಲ್ಲಿಅನೇಕಹೊಸ ಕೋರ್ಸ್ಗಳನ್ನು ಆರಂಭಿಸಲು ವಿಶ್ವವಿದ್ಯಾಲಯವು ಮುನ್ನುಡಿ ಬರೆದಿದೆ. ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಿ ಅಭಿವೃದ್ಧಿಪಡಿಸುವುದು ವಿವಿಯ ಗುರಿಯಾಗಿದೆ ಎಂದರು.


ವಿಶ್ವವಿದ್ಯಾಲಯದಕುಲಸಚಿವರಾದ ರುದ್ರೇಶ ಎಸ್.ಎನ್ ಅವರು ಪ್ರಾಸ್ತಾವಿಕವಾಗಿಮಾತನಾಡಿದರು.

ಕಾರ್ಯಕ್ರಮದಲ್ಲಿಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ಪ್ರಾಣೇಶ್.ಎಸ್., ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ನಮ್ಮೂರು ಧನ್ನೂರು ಹಬ್ಬ ಇಂದಿನಿಂದ

ಮಲ್ಲಮ್ಮ ನುಡಿ ವಾರ್ತೆ



ಭಾಲ್ಕಿ:ಫೆ.6:ಕಲ್ಯಾಣ ಕುವರ ಕಲ್ಚರಲ್ ಟ್ರಸ್ಟ್, ಕರ್ನಾಟಕ ನಾಟಕ ಅಕಾಡೆಮಿ, ಕನ್ನಡ ಮತ್ತುಸಂಸ್ಕೃತಿ ಇಲಾಖೆ ಹಾಗು ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಧನ್ನೂರ(ಹೆಚ್) ವತಿಯಿಂದ ಆಯೋಜಿಸಿದ್ದ ನಮ್ಮೂರ ಧನ್ನೂರು ಹಬ್ಬ 2025 ರ ಫೆ.7 ರಿಂದ ಫೆ.11 ರ ವರೆಗೆ ಐದು ದಿವಸಗಳ ಕಾಲ ನಡೆಯಲಿದೆ ಎಂದು ಕಲ್ಯಾಣ ಕುವರ ಕಲ್ಚರಲ್ ಟ್ರಸ್ಟ್ ಅಧ್ಯಕ್ಷ ವಿಷ್ಣುಕಾಂತ.ಬಿ.ಜೆ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿದ ಅವರು, ತಾಲೂಕಿನ ಧನ್ನೂರ(ಹೆಚ್) ಗ್ರಾಮದ ಸರ್ಕಾರಿ ಮಾದರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ನಮ್ಮೂರ ಧನ್ನೂರ ಹಬ್ಬ ನೋಡಬನ್ನಿ ನಮ್ಮೂರ ಹಬ್ಬ ಎನ್ನುವಧೇಯವಾಕ್ಯದೊಂದಿಗೆ 2025ರ ಫೆ.7ರ ಶುಕ್ರವಾರದಿಂದ 5 ದಿವಸಗಳ ಕಾಲ ಪ್ರತಿನಿತ್ಯ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಫೆ.7ರಂದು ಉದ್ಘಾಟನಾ ಸಮಾರಂಭ ಮತ್ತು ಮಕ್ಕಳ ಜಾತ್ರೆನಡೆಯುವುದು. ಹಿರೇಮಠ ಸಂಸ್ಥಾನ ಭಾಲ್ಕಿಯ ಶ್ರೀ ಗುರುಬಸವ ಪಟ್ಟದ್ದೇವರು ದಿವ್ಯ ಸಾನಿಧ್ಯ ವಹಿಸುವರು. ಕರ್ನಾಟಕ ನಾಟಕ ಅಕಾಡೆಮಿಯ ಜಿಲ್ಲಾ ಸಂಚಾಲಕ ಡಾ. ಜಗನ್ನಾಥ ಹೆಬ್ಬಾಳೆ ಕಾರ್ಯಕ್ರಮ ಉದ್ಘಾಟಿಸುವರು. ಗ್ರಾ.ಪಂ. ಅಧ್ಯ ಕ್ಷೆ ಸಂತೋಷಿ ರಮೇಶ ಹಲಬುರ್ಗೆ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ಶ್ರೀ ವೀರಭದ್ರೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷ ಪರಮೇಶ್ವರ ಅಣ್ಣಾರಾವಪಾಟೀಲ, ಪಿ.ಕೆ.ಪಿ.ಎಸ್ ಅಧ್ಯಕ್ಷ ಗುರನಾಥ ಬಿರಾದಾರ, ಬಾಬುರಾವಪೊಲೀಸ್ ಪಾಟೀಲ, ಕಾಶಿನಾಥ ಖಂಡ್ರೆ, ಶರಣಪ್ಪ ಕಲ್ಲಪ್ಪನೋರ, ಅರುಣಾಬಾಯಿ ಶೆಡೋಳೆ, ಗಣಪತಿ ಭಕ್ತ, ನರಸಿಂಗರಾವ ಮೋಳಕೆರೆ, ನಿವರ್ತಿ ಭಕ್ತ, ಕಲ್ಲಪ್ಪಾ ಬಿರಾದಾರ ಉಪಸ್ಥಿತರಿರುವರು. ಇದೇವೇಳೆ ಬಸ್ ಕಂಡಕ್ಟರ್ ಸಾಮಾಜಿಕ ನಾಟಕ ಪ್ರದರ್ಶನ ನಡೆಯುವುದು.

ಫೆ.8 ರಂದು ಸಂಗೀತ ಸಂಜೆ ಕಾರ್ಯಕ್ರಮ ನಡೆಯುವುದು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಕಾರ್ಯಕ್ರಮ ಉದ್ಘಾಟಿಸುವರು. ಗ್ರಾಮದ ಮುಖಂಡ ಶ್ರೀಕಾಂತ ದಾನಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಸಾಹಿತಿ ಸೋಮನಾಥ ನುಚ್ಚಾ, ಶಿವರಾಜ ಹಾಸನಕರ, ಶಿವಕುಮಾರ ಬಾವಗೆ, ನಾಗನಾಥ ಅರಳಿ ಉಪಸ್ಥಿತರಿರುವರು. ದೀಪಿಕಾ ಬಸವರಾಜ ದಾನಿ ಮತ್ತು ಸಂಗಡಿಗರಿಂದ ಸಂಗೀತ ಸೇವೆ ಹಾಗು ಕರ್ನಾಟಕ ಹೆಸರಾಂತ ಕಲಾವಿದರಿಂದ ಕಿವುಡ ಮಾಡಿದ ಕಿತಾಪತಿ ಸಾಮಾಜಿಕ ನಾಟಕ ಪ್ರದರ್ಶನ ಗೊಳ್ಳುವುದು. ನಂತರ ಸಂಜೆ 8 ಗಂಟೆಗೆ ನಡೆಯುವ ಸಮಾರೋಪ ಸಮಾರಂಭವನ್ನು ಕಸಾಪ ಜಿಲ್ಲಾಧ್ಯಕ್ಷ ಸೂರೇಶ ಚನಶೆಟ್ಟಿ ಉದ್ಘಾಟಿಸುವರು. ಕಲ್ಯಾಣ ಕುವರ ಕಲ್ಚರಲ್ ಟ್ರಸ್ಟ್ ಅಧ್ಯಕ್ಷ ವಿಷ್ಣುಕಾಂತ ಬಿಜೆ ಅಧ್ಯಕ್ಷತೆ ವಹಿಸುವರು. ದಾನಿ ಬಾಬುರಾವ, ಡಾ. ಡಿ.ವಿ.ಕಮಠಾಣೆ, ಸುನೀಲಕುಮಾರ ಪಾಟೀಲ ಉಪಸ್ಥಿತರಿರುವರು. ಇದೇವೇಳೆ ಚಲನಚಿತ್ರ ನಟಿ ಸುಲಕ್ಷಾ ಕೈರಾ, ಡಾ. ಹೆಲನ್ ಮೈಸೂರು, ಡಾ. ಉಮೇಶ ಸಲಗರ ರವರಿಗೆ ಪ್ರಶಸ್ತಿ ಪ್ರಧಾನ ಮಾಡಲಾಗುವುದು. ಅಲ್ಲದೇ ರೋಷನಿ ಮಾಳಗೆ, ಅಕ್ಷಯ ಶೀಲವಂತ, ನಿಕ್ಕಿರಾಜ, ಜಯಸ್ವಾಮಿ, ದೇದಾರನಾಥ ಸ್ವಾಮಿ, ದೀಪಕ ಥಮಕೆ ಸುನೀಲ ನೀಲಾ, ಸಿದ್ಧಾರೂಢ ಕಂದಗೂಳ, ನಾಗರಾಜ ಜೋಗಿ, ಅಂಜಲಿ ಮಾಳೆ, ಸಾಕ್ಷಿ ಹಿರೇಮಠ, ಹಾಸ್ಯಕಲಾವಿದ ಶಿವಾ ಸ್ಟೈಲ್ ರವಿರಗೆ ಗೌರವ ಸನ್ಮಾನ ನಡೆಯಲಿದೆ. ನಂತರ ಫೆ.9, 10 ಮತ್ತು 11 ರಂದು ಮೂರು ದಿನಗಳ ಕಾಲ ವೀರಭದ್ರೇಶ್ವರ ದೇವರ ಜಾತ್ರಾ ಮಹೋತ್ಸವ ನಡೆಯಲಿದೆ ಎಂದು ತಿಳಿಸಿದರು.



ಬೀದರ :ನವದೆಹಲಿಯ ಉದ್ಯೋಗಭವನದಲ್ಲಿ ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಮತ್ತು ಕಾರ್ಮಿಕ ಖಾತೆ ರಾಜ್ಯ ಸಚಿವರು ಮತ್ತು ಉದ್ಯೋಗ ಸಚಿವೆ ಶೋಭಾ ಕರಂದ್ಲಾಜೆಯವರನ್ನು ಬೀದರ ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರ ನೇತೃತ್ವದಲ್ಲಿ ಜಿಲ್ಲಾ ಪ್ರಧಾನ ಕಾಯದರ್ಶಿಗಳಾದ ಪೀರಪ್ಪ ಔರಾದೆ, ಕಿರಣ ಪಾಟೀಲ್, ಹಾಗೂ ರಾಜ್ಯ ಪ್ರಶಿಕ್ಷಣ ಸಂಚಾಲಕರಾದ ರಾಜಶೇಖರ್ ನಾಗಮೂರ್ತಿ ಅವರುಗಳು ಭೇಟಿ ಮಾಡಿ ಕೇಂದ್ರ ಸಚಿವರಿಗೆ ಮನವಿ ಸಲ್ಲಿಸಿ ತಮ್ಮ ಸಚಿವಾಲಯದಿಂದ ಬೀದರ್ ಜಿಲ್ಲೆಗೆ ಅಭಿವೃದ್ಧಿ ಮಾಡುವ ಯೋಜನೆಗಳು ಕೊಡಬೇಕೆಂದು ಮನವಿ ಮಾಡಿದರು, ಎಂದು ಬೀದರ ಬಿಜೆಪಿ ಜಿಲ್ಲಾ ಮಾಧ್ಯಮ ಸಂಚಾಲಕರಾದ ಶ್ರೀನಿವಾಸ ಚೌಧರಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಣಸಗಿ ಸಂಭ್ರಮದ ಮಧ್ವನವಮಿ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ:ಫೆ.6: ಹರಿಯೇ ಸ್ಮರಣೆಯಿಂದ ಮಾತ್ರಮೋಕ್ಷ ಸಾಧ್ಯ ಎಂದು ನಿರೂಪಿಸಿಕೊಟ್ಟ ಮಹಾನ್ ಆಚಾರ್ಯರು ಎಂದು ವಿಪ್ರ ಸಮಾಜದ ಹಿರಿಯರಾದ ಮನೋಹರರಾವ್ ದ್ಯಾಮನಹಾಳ ಹೇಳಿದರು.



ಹುಣಸಗಿ ಪಟ್ಟಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮಧ್ವ ನವಮಿ ಉತ್ಸವದಲ್ಲಿ ಭಾಗವಹಿಸಿ ಮಧ್ವಾಚಾರ್ಯರ ಚರಿತ್ರೆ ಮಾತನಾಡಿದರು.

ಆಚಾರ್ಯ ಮಧ್ವರು ಪಾಜಕ ಕ್ಷೇತ್ರದಲ್ಲಿ ಜನಿಸಿದರು. ಅವರ ಮಹಿಮೆ ತಪಃ ಶಕ್ತಿ ಅಪಾರವಾದುದು. ಶ್ರೀ ಮದ್ ಆನಂದತೀರ್ಥರು, ಪೂರ್ಣ ಪ್ರಜ್ಞರು ಎಂದು ಪ್ರಸಿದ್ಧಿಯನ್ನು ಪಡೆದು ಉಡುಪಿಯಲ್ಲಿ ಶ್ರೀ ಕೃಷ್ಣನ್ನು ಪ್ರತಿಷ್ಠಾಪಿಸಿ ಅಷ್ಟಮಠಗಳಿಗೆ ಕೃಷ್ಣ ಪೂಜಾ ಕೈಂಕರ್ಯವನ್ನು ನೀಡಿದರು. ಆ ಮೂಲಕ ಹರಿ ಸ್ಮರಣೆ ಹಾಗೂ ಧ್ವೈತ ಮತ ತತ್ವ ಪ್ರಚಾರಕ್ಕೆ ಆದ್ಯತೆ ನೀಡಿದರು. ದೇಶದೆಲ್ಲೆಡೆ ಸಂಚರಿಸಿ ತತ್ವ ಸಿದ್ಧಾಂತವನ್ನು ಪ್ರಚಾರ ಮಾಡಿದರು. ಅಲ್ಲದೇ ಇವರು ರಚಿಸಿದ ಗ್ರಂಥಗಳನ್ನು ಸರ್ವಮೂಲ ಗ್ರಂಥಗಳು ಎಂದು ಕರೆಯಲಾಗುತ್ತದೆ ಎಂದು ಮಧ್ವ ಸಿದ್ಧಾಂತದ ಕುರಿತು ಮಾತನಾಡಿದರು.

ಬೆಳಿಗ್ಗೆಮಧ್ವನಾಮ,ವಾಯುಸ್ತುತಿ, ಮುನ್ಯುಸೂಕ್ತ ಪುನಃಶ್ಚರಣ, ಸುಮಧ್ವವಿಜಯ 16 ಸರ್ಗ ಪಾರಾಯಣ, ಪಂಚಾಮೃತ ಅಭೀಶೇಕ ಮಾಡಲಾಯಿತು.

ಬಳಿಕ ಮಧ್ವಾಚಾರ್ಯರ ಭಾವಚಿತ್ರವನ್ನು ಅಲಂಕೃತ ಪಲ್ಲಕ್ಕಿಯಲ್ಲಿ ಪುರಪ್ರದಕ್ಷಿಗೆ, ಮೆರವಣಿಗೆ ನಡೆಯಿತು.

ವೇದವತಿ ಮಹಿಳಾ ಭಜನಾ ಮಂಡಳಿ ಹಾಗೂ ಛಾಯಾಭಗವತಿ ಭಜನಾ ಮಂಡಳಿಯಿಂದ ಸಾಮೂಹಿಕ ಭಜನೆ ಕಾರ್ಯಕ್ರಮ ನಡೆಯಿತು.

ಬೆಳಿಗ್ಗೆ ಪಟ್ಟಣದವರಹಳ್ಳೇರಾಯ ದೇವಸ್ಥಾನದಲ್ಲಿ ಮಧ್ವನಾಮ ಪಠಣ, ವಾಯುಸ್ತುತಿ ಪಠಣ, ಪಂಚಾಮೃತ ಅಭಿಶೇಕ,

ಈ ಸಂದರ್ಭದಲ್ಲಿ ಪ್ರಲ್ಹಾದಾಚಾರ್ಯ ಜೋಶಿ, ವಿಜಯಾಚಾರ್ಯ ಕಕ್ಕೇರಾ, ವೆಂಕಟೇಶ ಆಚಾರ್ಯ ಅರಳಿಗಿಡದ, ಗಂಗಾಧರಜೋಶಿ, ಚಂದ್ರಕಾಂತ ದೇಶಪಾಂಡೆ, ರವಿಂದ್ರ ಜಮದರಖಾನಿ, ರಾಘವೇಂದ್ರ ಕಾಮನಟಗಿ, ಮೋಹನರಾವ್ ಕುಲಕರ್ಣಿ, ವಿಷ್ಣುವರ್ಧನ ಕುಲಕರ್ಣಿ, ಲಕ್ಷ್ಮೀಕಾಂತ ಜಮದರಖಾನಿ, ವೆಂಕಟೇಶ ದೇಶಪಾಂಡೆ, ಪ್ರಾಣೇಶ ಕುಲಕರ್ಣಿ, ಕೃಷ್ಣಾ ದೇಶಪಾಂಡೆ, ಶ್ರೀಹರಿ ಕುಲಕರ್ಣಿ, ಭೀಮಾಶಂಕರ ಕುಲಕರ್ಣಿ, ವಾಸು ದ್ಯಾಮನಹಾಳ, ಶಾಮಸುಂದರ ದೇಶಪಾಂಡೆ, ಪ್ರಾಣೇಶ ದೇಶಪಾಂಡೆ, ಶ್ರೀನಿವಾಸ ಕುಲಕರ್ಣಿ ಸೇರಿದಂತೆ ಇತರರು ಇದ್ದರು.

# ಬೀದರ ಜಿಲ್ಲೆಯಲ್ಲಿ ಕಾರ್ಖಾನೆ ಸ್ಥಾಪಿಸಿ ಉದ್ಯೋಗ ಕಲ್ಪಿಸಲು ಕೇಂದ್ರ ಸಚಿವರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 06 : ನವ ದೆಹಲಿಯಲ್ಲಿ ಕೇಂದ್ರ ಬೃಹತ್ ಉದ್ಯಮ & ಉಕ್ಕು ಸಚಿವರಾದ ಎಚ್.ಡಿ. ಕುಮಾರಸ್ವಾಮಿಯವರನ್ನು ಬೀದರ ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರ ನೇತೃತ್ವದಲ್ಲಿ ಬಸವಕಲ್ಯಾಣ್ ಶಾಸಕರಾದ ಶರಣು ಸಲಗರ, ಮಾಜಿ ಸಚಿವರಾದ ಬಂಡೆಪ್ಪ ಖಾಸೇಂಪುರ್ ಜಿಲ್ಲಾ ಪ್ರಧಾನಕಾರ್ಯದರ್ಶಿಗಳಾದ ಪೀರಪ್ಪ ಔರಾದೆ,ಕಿರಣ್ ಪಾಟೀಲ ಹಾಗೂ ರಾಜ್ಯ ಪ್ರ ಶಿಕ್ಷಣ ಸಂಚಾಲಕರಾದ ರಾಜಶೇಖರ್ ನಾಗಮೂರ್ತಿ ಅವರುಗಳು ಭೇಟಿ ಮಾಡಿ ಕೇಂದ್ರ ಸಚಿವರಿಗೆ ಮನವಿ ಸಲ್ಲಿಸಿ ಬೀದರ ಜಿಲ್ಲೆಯಲ್ಲಿ ಕಾರ್ಖಾನೆಗಳನ್ನು ಸ್ಥಾಪಿಸಿ ಯುವಕರಿಗೆ ಉದ್ಯೋಗ ಕಲ್ಪಿಸಿ ಹಿಂದುಳಿದ ಜಿಲ್ಲೆಯ ಅಭಿವೃದ್ಧಿಗೆ ಸಹಕರಿಸಬೇಕೆಂದು ಮನವಿ ಮಾಡಿದರು ಎಂದು ಬೀದರ ಜಿಲ್ಲಾ ಬಿಜೆಪಿ ಮಾಧ್ಯಮ ಸಂಚಾಲಕರಾದ ಶ್ರೀನಿವಾಸ ಚೌಧರಿಯವರು ಪತ್ರಿಕಾ ಪ್ರಕಟಣೆಯಲ್ಲಿ ಸೂಚಿಸಿದ್ದಾರೆ.

# ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸದ ಕಾರಣ ಮುಷ್ಕರ ಅನಿವಾರ್ಯ:ಶಶಿ ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.6:ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ವೃಂದದ ವತಿಯಿಂದ ಕೈಗೊಂಡ ಮುಷ್ಕರದ ಯಾವುದೇ ಬೇಡಿಕೆಗಳನ್ನು ಈಡೇರಿಸದ ಕಾರಣ ರಾಜ್ಯವ್ಯಾಪಿ 2ನೇ ಹಂತದ ಮುಷ್ಕರಕ್ಕೆ ಕರೆ ನೀಡಲು ನಿರ್ಣಯಿಸಿರುವ ಬಗ್ಗೆ ಬರೆದ ಮನವಿ ಪತ್ರ ಕಮಲನಗರ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಅವರ ಮೂಲಕ ಗುರುವಾರ ಸಲ್ಲಿಸಲಾಯಿತು

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಂಘ ಕಮಲನಗರ ತಾಲೂಕ ಅಧಕ್ಯ ಶಶಿ ಬಿರಾದಾರ ಮಾತನಾಡಿ,

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಕಾರ್ಯಕಾರಿ ಸಮಿತಿ ಸಭಾ ನಿರ್ಣಯದ ದಿನಾಂಕ: 02-02-25 ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ವತಿಯಿಂದ ದಿನಾಂಕ:22-09-2024 ರಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಭಾ ಭವನ, ಚಿತ್ರದುರ್ಗ ದಲ್ಲಿ ನಡೆದ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾಧ್ಯಕ್ಷರು, ಪದಾಧಿಕಾರಿಗಳು. ತಾಲ್ಲೂಕು ಅಧ್ಯಕ್ಷರು, ಹಾಗೂ ಸರ್ವ ಸದಸ್ಯರ ಒಪ್ಪಿಗೆಯಂತೆ ಸರ್ವಾನುಮತದಿಂದ ದಿನಾಂಕ:26-09-2024 ರಿಂದ 03-10-2024 ರವರೆಗೆ ರಾಜ್ಯಾದ್ಯಂತ ಮುಷ್ಕರ ನಡೆಸಿದ ಕಾರಣ ದಿನಾಂಕ:03-10-2024 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಎಲ್ಲಾ ಬೇಡಿಕೆಗಳನ್ನು ಈಡೇರಿಸುವಂತೆ ಭರವಸೆ ನೀಡಿರುತ್ತಾರೆ.

ಅದರಂತೆ ಸದರಿ ದಿನದಿಂದಲೇ ರಾಜ್ಯವ್ಯಾಪಿ ಮುಷ್ಕರವನ್ನು ಹಿಂಪಡೆಯಲಾಗಿರುತ್ತದೆ. ತದನಂತರ ಸರ್ಕಾರವು ಈ ವೃಂದದ ನೌಕರರ ಬೇಡಿಕೆಗಳ ವಿಚಾರವಾಗಿ ಯಾವುದೇ ತೃಪ್ತಿಕರ ಕ್ರಮಗಳನ್ನು ಕೈಗೊಂಡಿರುವುದಿಲ್ಲ ಮತ್ತು ಬೇಡಿಕೆಗಳನ್ನು ಈಡೇರಿಸಿರುವುದಿಲ್ಲ ಬದಲಾಗಿ ಮುಷ್ಕರದ ಪೂರ್ವದ ಅವಧಿಗಿಂತಲೂ ಹೆಚ್ಚಿನ ಕಾರ್ಯದ ಒತ್ತಡ ಉಂಟಾಗಿರುತ್ತದೆ. ಆದ್ದರಿಂದ ಉಲ್ಲೇಖದ ಸಭೆಯಲ್ಲಿ ಮೇಲ್ಕಂಡ ಎಲ್ಲಾ ಕಾರಣಗಳಿಗಾಗಿ ಮುಷ್ಕರದ ಬೇಡಿಕೆಗಳ ಈಡೇರಿಕೆಗಾಗಿ ರಾಜ್ಯವ್ಯಾಪಿ ಅನಿರ್ಧಿಷ್ಟಾವಧಿಗೆ ಎಲ್ಲ ಕೆಲಸಗಳನ್ನು ಸ್ಥಗಿತಗೊಳಿಸಿ ಮುಷ್ಕರ ತೀರ್ಮಾನಿಸಲಾಗಿರುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು ಪ್ರವೀಣ ಬಿರಾದಾರ,ರಮೇಶ, ನಿಂಗಪ್ಪ , ಮಹಾಳಪ್ಪ ,ಲಕ್ಷ್ಮಣ್, ಇಮಾಮ, ಹಾಗೂ ಕಾರ್ಯಾಲದ ಸಿಬ್ಬಂದಿ ಉಪಸ್ಥಿತಿದ್ದರು.

# ಎಸ್ಎಸ್ಎಲ್ಸಿ ಪರೀಕ್ಷೆ-2025: ಮೈಕ್ರೋ ಜೆರಾಕ್ಸ್ ಮಾರಾಟ ನಿರ್ಬಂಧ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.06:ಜಿಲ್ಲೆಯಲ್ಲಿ ಪ್ರಸ್ತಕ ವರ್ಷ ನಡೆಯುವ ಎಸ್ಎಸ್ಎಲ್ಸಿ ವಾರ್ಷಿಕ ಪರೀಕ್ಷೆಯನ್ನು ಮುಕ್ತ, ಪಾರದರ್ಶಕವಾಗಿ ನಡೆಸಲು ಮತ್ತು ಪರೀಕ್ಷಾ ಪಾವಿತ್ರ ??ತೆ ಕಾಪಾಡಲು ಜಿಲ್ಲೆಯಾದ್ಯಂತ ಎಸ್ಎಸ್ಎಲ್ಸಿ ಪರೀಕ್ಷೆಗೆ ಸಂಬಂಧಿಸಿದ ಎಲ್ಲಾ ಕಿರು ಪುಸ್ತಕಗಳು, ಮೈಕ್ರೋಬುಕ್, ಮೈಕ್ರೋ ಜೆರಾಕ್ಸ್ಗಳನ್ನು ಮಾರಾಟ, ಖರೀದಿ ಮತ್ತು ಶಾಲಾ ಆವರಣದಲ್ಲಿ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ ಅವರು ತಿಳಿಸಿದ್ದಾರೆ.

ಈ ಕುರಿತು ಕಲಬುರಗಿಯ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರು ಸುತ್ತೋಲೆ ಹೊರಡಿಸಿರುತ್ತಾರೆ. ಹಾಗಾಗಿ ಜಿಲ್ಲೆಯಲ್ಲಿನ ಎಲ್ಲಾ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಹಾಗೂ ಜೆರಾಕ್ಸ್ ಸೆಂಟರ್‌ಗಳ ಮಾಲೀಕರು ಕಿರು ಪುಸ್ತಕಗಳನ್ನು ಹಾಗೂ ಮೈಕ್ರೋ ಬುಕ್, ಮೈಕ್ರೋ ಜೆರಾಕ್ಸ್ಗಳನ್ನು ಮಾರಾಟ ಮಾಡುವುದಾಗಲೀ, ಖರೀದಿಸುವುದಾಗಲೀ ಅಥವಾ ಬಳಸುವುದಾಗಲೀ ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ.

ಇದಕ್ಕೆ ಸಂಬಂಧಿಸಿದ ಯಾವುದೇ ಕಾನೂನು ಬಾಹಿರವಾಗಿ ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಕಾನೂನಿನಲ್ಲಿನ ಅವಕಾಶ ಬಳಸಿಕೊಂಡು ಇಲಾಖೆಯು ವಿಚಾರಣೆ ನಡೆಸಿ ಇಂತಹ ಪ್ರಕರಣಗಳಲ್ಲಿ ಭಾಗಿಯಾದವರಿಗೆ 3 ರಿಂದ 5 ವರ್ಷ ಜೈಲು, 5 ಲಕ್ಷ ದಂಡ ವಿಧಿಸುವ ಅವಕಾಶವಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಡಾಡಿ ದನಗಳನ್ನು ಮಾಲೀಕರು ಮನೆಯಲ್ಲಿ ಕಟ್ಟಿಕೊಳ್ಳಿ; ಇಲ್ಲದಿದ್ದರೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ.ಫೆ.06:ಕಂಪ್ಲಿಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಬಿಡಾಡಿ ದನಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರ ಪ್ರಾಣ ಹಾನಿ ಹಿನ್ನಲೆಯಲ್ಲಿ ಬಿಡಾಡಿ ದನಗಳ ಮಾಲೀಕರು ತಮ್ಮ ತಮ್ಮ ದನಕರಗಳನ್ನು ತಮ್ಮ ಮನೆಯಲ್ಲಿಯೇ ಕಟ್ಟಿಹಾಕಿಕೊಳ್ಳಬೇಕು. ಇಲ್ಲದಿದ್ದಲ್ಲಿ ಬೀದಿ ದನಗಳನ್ನು ಹಿಡಿದು ಗೋಶಾಲೆಗಳಿಗೆ ಸಾಗಿಸಲು ಕ್ರಮ ವಹಿಸಲಾಗುವುದು ಮತ್ತು ದನಕರುಗಳನ್ನು ಹಿಡಿಯುವವರು ಯಾರಾದರೂ ಇದ್ದಲ್ಲಿ ಪುರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಕಂಪ್ಲಿ ಪುರಸಭೆ ಮುಖ್ಯಾಧಿಕಾರಿ ಕೆ.ದುರುಗಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಧ್ಯಮ ಅಕಾಡೆಮಿಯಿಂದ ಪ್ರಥಮ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಫೆ.06:ಕರ್ನಾಟಕ ಮಾಧ್ಯಮ ಅಕಾಡೆಮಿಯು ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಕರ್ನಾಟಕದ ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನವನ್ನು ಏರ್ಪಡಿಸಿದೆ.

ಈಸ್ಪರ್ಧೆಯಲ್ಲಿಆಯ್ಕೆಯಾಗುವ ಮೊದಲಮೂರುಛಾಯಾಚಿತ್ರಗಳಿಗೆ ಕ್ರಮವಾಗಿ 35,000/–ರೂ., 25,000/– ರೂ. ಹಾಗೂ 15,000/– ರೂ. ನಗದು ಬಹುಮಾನನೀಡಲಾಗುವುದು. ಆಯ್ದಅತ್ಯುತ್ತಮಛಾಯಾಚಿತ್ರಗಳನ್ನು ಹುಬ್ಬಳ್ಳಿ–ಧಾರವಾಡದಲ್ಲಿ ಮಾರ್ಚ್ ತಿಂಗಳಲ್ಲಿ ಅಕಾಡೆಮಿ ವತಿಯಿಂದ ಏರ್ಪಡಿಸಲಾಗುವ ಸುದ್ದಿ ಛಾಯಾಗ್ರಹಣ ಕುರಿತ ಕಾರ್ಯಾಗಾರದ ಸಂದರ್ಭದಲ್ಲಿ ಛಾಯಾಚಿತ್ರ ಪ್ರದರ್ಶನದಲ್ಲಿ ಇರಿಸಲಾಗುವುದು.

ಸ್ಪರ್ಧೆಯ ಷರತ್ತುಗಳು: ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, ದಿನಾಂಕ: 01–01–2024 ರಿಂದ 31–01–2025 ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗುವುದು. ಪ್ರತಿ ಸುದ್ದಿ ಛಾಯಾಚಿತ್ರಗ್ರಾಹಕರು ತಾವೇ ಚಿತ್ರಿಸಿರುವ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸುವುದು.

ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿರುವುದಕ್ಕೆ ಯಾವುದೇ ಭೌಗೋಳಿಕಪರಿಮಿತಿ ಇರುವುದಿಲ್ಲ. ಪ್ರತಿ ಸ್ಪರ್ಧಿಯೂ ಅವರು ಸುದ್ದಿ ಛಾಯಾಚಿತ್ರಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಕರ್ತರಿಗಾಗಿ ನೀಡುವ ಅಕ್ರೆಡಿಯೇಷನ್ ಕಾರ್ಡ್ ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.

ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್‌ಗಳು ಇರಬಾರದು. ಸ್ಪದ–ರ್ಗೆಗೆ ಕಳಿಸುವ ಛಾಯಾಚಿತ್ರಗಳ ಅಂದರೆ ಡಿಜಿಟಲ್ ಇಮೇಜ್‌ಗಳನ್ನು ಜೆಪಿಇಜಿ ಫಾರ್ಮಾಟ್ (JPEG format) ನಲ್ಲಿ ಮಾತ್ರ ಸಲ್ಲಿಸಬೇಕು.

ಪ್ರದರ್ಶನಕ್ಕೆ ಆಯ್ಕೆಯಾಗುವ ಛಾಯಾಚಿತ್ರಗಳನ್ನು 20"ಥ30" ಅಳತೆಯಲ್ಲಿ ಮುದ್ರಣ ಮಾಡಿಸಬೇಕಾಗಿರುವುದರಿಂದ ನೀವು ಕಳಿಸುವ ಇಮೇಜ್‌ಗಳು 20"ಥ 30" ಅಳತೆಯ, 300 ಡಿಪಿಐ(DPI) ನಲ್ಲಿದ್ದು ಕನಿಷ್ಠ 5 JA©(MB) ಗಾತ್ರದಲ್ಲಿರಬೇಕು. ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಸ್ಪರ್ಧೆಗೆ ಸ್ವೀಕರಿಸಲಾಗುವುದಿಲ್ಲ.

ಸ್ಪರ್ಧೆಯಲ್ಲಿ ಭಾಗವಹಿಸುವ ಸುದ್ದಿ ಛಾಯಾಚಿತ್ರಗಳು ಸಹಜವಾಗಿರಬೇಕು. ಚಿತ್ರದಲ್ಲಿನ ಯಾವುದೇ ಭಾಗವನ್ನು ತೆಗೆಯುವುದಾಗಲಿ ಅಥವಾ ಸೇರಿಸುವುದಾಗಲಿ ಮಾಡಿರಬಾರದು.

ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್‌ಸೈಟ್ ನಲ್ಲಿರುವ ನಿಗದಿತ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್‌ಗಳನ್ನು photo.karnatakamediaacademy@gmail.com ಇ–ಮೇಲ್ ವಿಳಾಸಕ್ಕೆ ಫೆ.15 ರಂದು ಸಂಜೆ 5 ಗಂಟೆ ಒಳಗಾಗಿ ಸಲ್ಲಿಸಬೇಕು. ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

ಸ್ಪರ್ಧೆಗೆ ಬಂದಿರುವ ಛಾಯಾಚಿತ್ರಗಳನ್ನು ಪ್ರಶಸ್ತಿಗೆ ಹಾಗೂ ಪ್ರದರ್ಶನಕ್ಕೆ ಆಯ್ಕೆ ಮಾಡಲು ಸುದ್ದಿ ಛಾಯಾಗ್ರಹಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಮೂವರು ತೀರ್ಪುಗಾರರಿದ್ದು ಅವರು ತೆಗೆದುಕೊಂಡ ತೀರ್ಮಾನವೇ ಅಂತಿಮವಾಗಿರುತ್ತದೆ.

ಪ್ರಶಸ್ತಿಗೆ ಆಯ್ಕೆಯಾದ ಮೂರು ಛಾಯಾಚಿತ್ರಗಳಿಗೆ ಪ್ರಥಮ ಬಹುಮಾನ: ರೂ.35,000, ದ್ವಿತೀಯ ಬಹುಮಾನ: ರೂ.25000 ಹಾಗೂ ತೃತೀಯ ಬಹುಮಾನ: ರೂ.15000 ಗಳನ್ನು ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮೊ.9448227768 ಹಾಗೂ 9449245980 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಸಹನಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನರೇಗಾ ಪರಿಣಾಮಕಾರಿ ಅನುಷ್ಟಾನ, ಲಾಡ್ಲಾಪುರ ಗ್ರಾಮ ಪಂಚಾಯತಿಗೆ ಅತ್ಯುತ್ತಮ ಗ್ರಾಮ ಪಂಚಾಯತ್ ಪುರಸ್ಕಾರ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಫೆ.06: ನರೇಗಾ ದಿವಸ್ ದಿನಾಚರಣೆ ಅಂಗವಾಗಿ ಬೆಂಗಳೂರಿನ ವಸಂತ ನಗರದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಸಭಾ ಭವನದಲ್ಲಿ ಬುಧವಾರ ಆಯೋಜಿಸಿದ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ 2023–24ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದಕ್ಕಾಗಿ ಜಿಲ್ಲೆಯ ಚಿತ್ತಾಪೂರ ತಾಲೂಕಿನ ಲಾಡ್ಲಾಪೂರ ಗ್ರಾಮ ಪಂಚಾಯತಿಗೆ ಅತ್ಯುತ್ತಮ ಗ್ರಾಮ ಪಂಚಾಯತ ಪುರಸ್ಕಾರ ಪ್ರದಾನ ಮಾಡಲಾಯಿತು.

ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ಮತ್ತು ಪಿ.ಡಿ.ಓ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ.–ಬಿ.ಟಿ ಸಚಿವ ಪ್ರಿಯಾಂಕ್ ಖರ್ಗೆ, ಗ್ರಾಮೀಣಾಭಿವೃದ್ಧಿ ಆಯುಕ್ತ ಪವನಕುಮಾರ ಮಾಲಪಾಟಿ, ಕಲಬುರಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ ಇದಕ್ಕೆ ಸಾಕ್ಷಿಯಾದರು.

ಇದೇ ಸಂದರ್ಭದಲ್ಲಿ ಅಫಜಲಪೂರ ತಾಲೂಕಿನ ಕರ್ಜಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತೋಟಗಾರಿಕೆ ಇಲಾಖೆಯ ಸಹಕಾರದೊಂದಿಗೆ ನರೇಗಾ ಒಗ್ಗೂಡುವಿಕೆ ಸೌಲಭ್ಯ ಪಡೆದು ಉತ್ತಮವಾಗಿ ದ್ರಾಕ್ಷಿ ಬೆಳೆ ಬೆಳೆದಿದ್ದಕ್ಕಾಗಿ ಪಾರ್ವತಿ ರಾಮಚಂದ್ರ ಅವರಿಗೆ ವಿಶೇಷ ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು.

# ಕ್ಯಾನ್ಸರ್ ಗುಣಪಡಿಸಲಾಗದ ಕಾಯಿಲೆ ಅಲ್ಲ:ಡಾ.ಉಳ್ಳಾಗಡ್ಡಿ




ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಫೆ.6– ಬಾಗಲಕೋಟೆ ಎಜ್ಯುಕೇಶನ್ ಸೊಸೈಟಿ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯ ನಗರದ ಶಾಂತಿ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಸಹಯೋಗದೊಂದಿಗೆ ಬುಧವಾರ ವಿಶ್ವ ಕ್ಯಾನ್ಸರ್ ದಿನ ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ.ಸುರೇಶ ಉಳ್ಳಾಗಡ್ಡಿ, ಕ್ಯಾನ್ಸರ್ ಮನುಷ್ಯನ ದೇಹವನ್ನು ಆವರಿಸಿಕೊಳ್ಳಲು ಆಹಾರ ಕ್ರಮ, ಆನುವಂಶೀಯತೆ, ಕೆಲಸದ ಒತ್ತಡ, ಜೀವನಶೈಲಿ ಕಾರಣವಾಗಿದ್ದು, ಅದು ಬರದಂತೆ ತಡೆಯಲು ನಮ್ಮ ದೈನಂದಿನ ಆಹಾರ ಸೇವನೆಯಲ್ಲಿ ಶಿಸ್ತುಪಾಲನೆ ರೂಢಿಸಿಕೊಂಡು ಮೈಕ್ರೋಪ್ಲಾಸ್ಟಿಕ್ಸ್ ಬಳಕೆ, ತಂಬಾಕು ಸೇವನೆ ಮತ್ತು ಧೂಮ್ರಪಾನ, ಮದ್ಯಪಾನ ನಿಯಂತ್ರಿಸಬೇಕು ಎಂದರು.

ಶಾಂತಿ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಸುರೇಶಗೌಡ ಪಾಟೀಲ ಅತಿಥಿಯಾಗಿ ಮಾತನಾಡಿ, 2025 ರ ವಿಶ್ವ ಕ್ಯಾನ್ಸರ್ ದಿನದ ಧ್ಯೇಯವಾಕ್ಯ ಯುನೈಟೆಡ್ ಬೈ ಯುನಿಕ್ ಎಂಬುದಾಗಿದೆ. ಇದು ಕ್ಯಾನ್ಸರ್ ವಿರುದ್ಧದ ಹೋರಾಟದಲ್ಲಿ ರೋಗಿ–ಕೇಂದ್ರಿತ ಆರೈಕೆಯ ಮಹತ್ವವನ್ನು ಒತ್ತಿ ಹೇಳುತ್ತದೆ ಎಂದು ಹೇಳಿ, ಕ್ಯಾನ್ಸರ್ ಮಾರಕ ರೋಗ ನಿಜ ಆದರೆ ಅದು ಖಂಡಿತ ಗುಣಪಡಿಸಲಾಗದ ಕಾಯಿಲೆಯಲ್ಲ. ಕ್ಯಾನ್ಸರ್ ರೋಗ ಲಕ್ಷಣಗಳ ಬಗ್ಗೆ ತಿಳಿದುಕೊಂಡರೆ ಆರಂಭಿಕ ಹಂತದಲ್ಲಿ ಅದನ್ನು ಗುರುತಿಸಿ ಚಿಕಿತ್ಸೆ ಪಡೆಯಬಹುದು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿ.ಇ.ಎಸ್ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಯು.ಎನ್.ಧಂದರಗಿ ವಹಿಸಿದ್ದರು. ಎನ್.ಎಸ್.ಎಸ್ ಅಧಿಕಾರಿ ದೇವೆಂದ್ರ ಗವಾರಿ ನಿರೂಪಿಸಿದರು. ಉಪನ್ಯಾಸಕಿ ರೇಣುಕಾ ಅಮಲಝರಿ ಸ್ವಾಗತಿಸಿದರು. ಉಪನ್ಯಾಸಕಿ ಅಶ್ವಿನಿ ಸಂಕಣ್ಣವರ ವಂದಿಸಿದರು.

# ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳ ಈಡೇರಿಕೆಗಾಗಿ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ಕರೆ



ಮಲ್ಲಮ್ಮ ನುಡಿ ಶಹಾಪುರ:ಫೆ.6:ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳು ಮತ್ತು ವಿವಿದ ಬೇಡಿಕೆಗಳ ಈಡೇರಿಕೆಗಾಗಿ ದಿನಾಂಕ 10–02–2025 ರಿಂದ 2 ನೇ ಹಂತದ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡುತ್ತಿರುವ ಬಗ್ಗೆ ಶಹಾಪೂರ ತಾಲ್ಲೂಕು ಗ್ರಾಮ ಆಡಳಿತ ಅಧಿಕಾರಿಗಳ ಸಂಘದಿಂದ ಮಾನ್ಯ ತಹಸೀಲ್ದಾರರಾದ ಶ್ರೀ ಉಮಾಕಾಂತ ಹಳ್ಳೆ ಮುಖಾಂತರ ಸನ್ಮಾನ್ಯ ಮುಖ್ಯಮಂತ್ರಿಗಳು ಹಾಗೂ ಮಾನ್ಯ ಕಂದಾಯ ಸಚಿವರಾದ ಸನ್ಮಾನ್ಯ ಶ್ರೀ ಕೃಷ್ಣಭೈರೇಗೌಡ ರವರಿಗೆ ಉಪಾಧ್ಯಕ್ಷರಾದ ಶ್ರೀ ಮಂಜುನಾಥ ಸಿ ನಾಯಕ ರವರ ನೇತ್ರತ್ವದಲ್ಲಿ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ರಮೇಶ್ ರಾಠೋಡ ಪ್ರಧಾನ ಕಾರ್ಯದರ್ಶಿ ಶ್ರೀ ಶಂಕರಗೌಡ ಬಿರಾದಾರ ಕಂದಾಯ ನಿರೀಕ್ಷಕರಾದ ಶ್ರೀ ಮಹೇಂದ್ರಸ್ವಾಮಿ ಶ್ರೀ ಭೀಮರೆಡ್ಡಿ ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಾದ ಹಿರಿಯರಾದ ಶ್ರೀ ದೇವರಾಜ ಪಾಟೀಲ್ ಶ್ರೀ ರಾಜು ಪೂಜಾರಿ, ಸುಧೀಶ ಕುಮಾರ ವಿಜಯಕುಮಾರ ರಾಠೋಡ, ಮಂಜುನಾಥ ಭಜಂತ್ರಿ, ಗುರುಬಸವರಾಜ ,ಸಿದ್ದೇಶ್ ,ಜುಲ್ಫೇಖರ್ ಶ್ರೀ ಮತಿ ಗಾಯತ್ರಿ ಮೋರಗೇರಿ, ರೇಷ್ಮಾ, ಲಕ್ಷ್ಮೀ ಪತ್ತಾರ ಹಾಗೂ ಶಹಾಪೂರ ತಾಲ್ಲೂಕಿನ ಇತರ ಗ್ರಾಮ ಆಡಳಿತ ಅಧಿಕಾರಿಗಳು ಹಾಜರಿದ್ದರು.

# ಉದ್ಯೋಗ ಮೇಳ: ಅಗತ್ಯ ಸಿದ್ಧತೆಗೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು. ಫೆ.06, : ಪ್ರಧಾನಮಂತ್ರಿಗಳ ಮಹತ್ವಾಕಾಂಕ್ಷೆಯ ದೀನದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ಗ್ರಾಮೀಣ ಪ್ರದೇಶದ ಬಡ ಯುವಜನರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಉದ್ಯೋಗ ಕಲ್ಪಿಸುವ ಸಲುವಾಗಿ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾದ ಉದ್ಯೋಗ ಮೇಳದ ಯಶಸ್ವಿಗೆ ಅಧಿಕಾರಿಗಳು ಶ್ರಮಿಸಬೇಕೆಂದು ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ ಅವರು ಹೇಳಿದರು.

ಗುರುವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲಶಕ್ತಿ ಸಭಾಂಗಣದಲ್ಲಿ ಉದ್ಯೋಗ ಮೇಳ ತಯಾರಿಗಾಗಿ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಅಥವಾ ಸರ್ಕಾರೇತರ ಸಂಘ–ಸಂಸ್ಥೆಗಳ ಮೂಲಕ ಮತ್ತು ವಿವಿಧ ಯೋಜನಾ ಅನುಷ್ಠಾನ ಸಂಸ್ಥೆಗಳ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನದಲ್ಲಿ ಮೇಳ ನಡೆಯುತ್ತಿದ್ದು, ಉದ್ಯೋಗ ಮೇಳವನ್ನು ಆಯೋಜಿಸುವ 3 ರಿಂದ 4 ದಿನಗಳ ಮೊದಲು ದಿನ ಪತ್ರಿಕೆಗಳಲ್ಲಿ, ಕೇಬಲ್ ಟಿ.ವಿ ಹಾಗೂ ಸಾಮಾಜಿಕ ಜಾಲ ತಾಣಗಳ ಮೂಲಕ ಉದ್ಯೋಗ ಮೇಳವನ್ನು ಆಯೋಜಿಸುವುದರ ಬಗ್ಗೆ ಅರಿವು ಮೂಡಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಉದ್ಯೋಗ ಮೇಳವನ್ನು ಆಯೋಜಿಸುವ 7 ದಿನಗಳ ಮುಂಚಿತವಾಗಿ ಸುತ್ತಲಿನ ಹಳ್ಳಿಗಳಲ್ಲಿ, ಪಂಚಾಯಿತಿ ಹಾಗೂ ತಾಲೂಕು ಮಟ್ಟದಲ್ಲಿ ಕರಪತ್ರಗಳನ್ನು ಹಂಚುವುದರ ಮೂಲಕ, ಧ್ವನಿವರ್ಧಕ ಬಳಕೆ ಹಾಗು ಗೋಡೆ ಬರಹ ಅಂಟಿಸುವುದರ ಮೂಲಕ ಪ್ರಚಾರ ನಡೆಸಬೇಕು. ಸ್ಥಳೀಯ ಮಟ್ಟದ ಶಾಲಾ–ಕಾಲೇಜುಗಳಿಗೆ ಮಾಹಿತಿ ನೀಡಬೇಕೆಂದರು.

ವ್ಯಾಪಕ ಪ್ರಚಾರದ ಮೂಲಕ ಗ್ರಾಮ ಮಟ್ಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯುವಜನರ ಭಾಗವಹಿಸುವಿಕೆಯನ್ನು ಖಾತ್ರಿ ಪಡಿಸಿಕೊಳ್ಳಬೇಕು. ಯೋಜನಾ ಅನುಷ್ಠಾನ ಸಂಸ್ಥೆಯು ಆಸಕ್ತ ನಿರುದ್ಯೋಗಿ ಯುವಜನರಿಗೆ ಹಾಗೂ ಪೋಷಕರಿಗೆ ಸಮಾಲೋಚನೆ ಮತ್ತು ಮಾರ್ಗದರ್ಶನ ಕೊಟ್ಟು ಕೌಶಲ್ಯ ತರಬೇತಿಗೆ ಸಿದ್ದಗೊಳಿಸಬೇಕು. ಉದ್ಯೋಗ ಮೇಳದ ನಂತರ ಆಸಕ್ತ ನಿರುದ್ಯೋಗಿ ಯುವಜನರಿಗೆ ಯೋಜನಾ ಅನುಷ್ಠಾನ ಸಂಸ್ಥೆಯು ಕೌಶಲ್ಯ ತರಬೇತಿ ನೀಡಿ ಕೈಗಾರಿಕೆ ಅಥವಾ ವಾಣಿಜ್ಯ ಸಂಸ್ಥೆಗಳಲ್ಲಿ ಉದ್ಯೋಗ ದೊರಕಿಸುವಂತಾಗಬೇಕು. ಯುವಜನರ ಒಕ್ಕೂಟಗಳ ಸಹಯೋಗದಲ್ಲಿ ಯುವಜನ ಮೇಳವನ್ನು ಸಂಘಟಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಮಟ್ಟದಲ್ಲಿ ಕನಿಷ್ಠ 800ಕ್ಕೂ ಹೆಚ್ಚಿನ ಜನ ಅಭ್ಯರ್ಥಿಗಳಿಗೆ ಉದ್ಯೋಗವಕಾಶವನ್ನು ಕಡ್ಡಾಯ ಕಲ್ಪಿಸುವ ಗುರಿ ನಿಗದಿಪಡಿಸಲಾಗಿದೆ. ಈ ಮೇಳದ ಎಲ್ಲಾ ಚಟುವಟಿಕೆಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡುವ ಮೂಲಕ ವ್ಯಾಪಕ ಪ್ರಚಾರ ಕಾರ್ಯಗಳನ್ನು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೈಗೊಳ್ಳುವಂತೆ ಅವರು ಸೂಚಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ಅಧಿಕಾರಿ ಬವಸರಾಜ ಯರಕಂಚಿ, ಜಿಲ್ಲಾ ಕೌಶಲಾಭಿವೃದ್ಧಿ ಅಧಿಕಾರಿ ಜಿ.ಯು.ಹುಡೇದ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್ ಸಂಗೇಪಾಗ್, ಎಸ್‌ಬಿಐ ಗ್ರಾಮೀಣ ಸ್ವ–ಯಂ ಸೇವಾ ತರಬೇತಿ ಸಂಸ್ಥೆಯ ನಿರ್ದೇಶಕರಾದ ವಿಜಯಕುಮಾರ್ ಬಡಿಗೇರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ರಾಂಪೂರ ಕೆರೆಯ ಹತ್ತಿರ ವ್ಯಕ್ತಿ ಸಾವು: ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಫೆ.06: ಇಲ್ಲಿನ ಪಶ್ಚಿಮ ಪೊಲೀಸ್ ಠಾಣಾ ಹದ್ದಿನ ರಾಂಪೂರ ಕೆರೆಯ ಹತ್ತಿರ ಫೆ.03ರ ಬೆಳಿಗ್ಗೆ 8.30ರ ಸುಮಾರಿಗೆ ಅಂದಾಜು 45–50ವರ್ಷ ವಯಸ್ಸಿನ ಒಬ್ಬ ಅನಾಮಧೇಯ ಗಂಡಸಿನ ಮೃತದೇಹವು ಪತ್ತೆಯಾಗಿದೆ. ಈ ಮೃತದೇಹವು ರಿಮ್ಸ್ ಆಸ್ಪತ್ರೆಯ ಶವಗಾರ ಕೋಣೆಯಲ್ಲಿಟ್ಟಿದ್ದು, ಈ ಕುರಿತು ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತನ ಚಹರೆ ಪಟ್ಟಿ ವಿವರ: ಸುಮಾರು 45–50ವರ್ಷ, 5.5ಎತ್ತರ, ದುಂಡುಮುಖ, ನೀಲಿ ಬಣ್ಣ ಅರ್ಧ ತೋಳಿನ ಟಿ ಶರ್ಟ್ ಮತ್ತು ನೀಲಿ ಬಣ್ಣದ ಪ್ಯಾಂಟ್ ಬಟ್ಟೆ ಧರಿಸಿದ್ದಾನೆ.

ಈ ಚಹರೆ ಪಟ್ಟಿಯನ್ನು ಹೋಲುವ ರಕ್ತ ಸಂಬಂಧಿಕರು ಯಾರಾದರು ಪತ್ತೆಯಾದರೆ ದೂರವಾಣಿ ಸಂಖ್ಯೆ: 08502–22570, 948080847ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಶ್ಚಿಮ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

# ಭೂ ಖರೀದಿ ಪ್ರಕ್ರಿಯೆ: ತಕರಾರು ಅರ್ಜಿ ಸಲ್ಲಿಕೆಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಫೆ.06: ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದಿಂದ ಜಿಲ್ಲೆಯಲ್ಲಿ 2024–25ನೇ ಸಾಲಿನಲ್ಲಿ ಭೂ ಒಡೆತನ ಯೋಜನೆಯಡಿ ವಿಮುಕ್ತಿ ದೇವದಾಸಿ ಪರಿಶಿಷ್ಟ ಜಾತಿಯ ಭೂ ರಹಿತ ಕೃಷಿ ಕಾರ್ಮಿಕ ಮಹಿಳಾ ಫಲಾಪೇಕ್ಷಿಗಳಿಗೆ ಜಮೀನು ವಿತರಿಸಲು ಪರಿಶಿಷ್ಟ ಜಾತಿ/ಪಂಗಡ ಜನಾಂಗವಲ್ಲದ ಭೂ ಮಾಲೀಕರು ಭೂಮಿ ಮಾರಾಟ ಮಾಡಲು ಒಪ್ಪಿಗೆ ಪತ್ರಗಳನ್ನು ಸಲ್ಲಿಸಿದ್ದು, ಭೂ ಖರೀದಿಗೆ ಸಂಬಂದಪಟ್ಟಂತೆ ಯಾವುದಾದರು ತಕರಾರುಗಳಲ್ಲಿದ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಜಮೀನಿನ ಭೂ ಮಾಲಿಕರ ಮೇಲೆ ಭೂ ಖರೀದಿಗೆ ಸಂಬಂದಪಟ್ಟಂತೆ ಯಾವುದಾದರು ತಂಟೆ ತಕರಾರುಗಳು ಇದ್ದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಫೆ.10ರೊಳಗಾಗಿ ಈ ಕಚೇರಿಗೆ ಮುದ್ದಾಂ ಆಗಿ ಬಂದು ಮಾಹಿತಿ ಸಲ್ಲಿಸಬಹುದಾಗಿದೆ. ನಂತರ ಬಂದ ದೂರು ಅರ್ಜಿಗಳನ್ನು ಪರಿಗಣನೆಗೆ ತೆಗೆದುಕೊಳ್ಳುವುದಿಲ್ಲ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಪ್ರವಾಸ

ಮಲ್ಲಮ್ಮನುಡಿವಾರ್ತೆ ಕಲಬುರಗಿ,ಫೆ.06:ರಾಜ್ಯದ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ವಿಜಯನಗರ ಜಿಂದಾಲ್ ಹೆಲಿಪ್ಯಾಡ್‌ದಿಂದ ವಿಮಾನದ ಮೂಲಕ ಫೆಬ್ರವರಿ 7 ರಂದು ಶುಕ್ರವಾರ ಬೆಳಿಗ್ಗೆ 8.50 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು.

ಅಂದು ಬೆಳಿಗ್ಗೆ 10.45 ಗಂಟೆಗೆ ಕಲಬುರಗಿ ಎಸ್.ಬಿ. ಟೆಂಪಲ್ ರಸ್ತೆಯ ಶ್ರೀ ಖೂಬಾ ಕಲ್ಯಾಣ ಮಂಟಪದಲ್ಲಿ ವಿಜಯವಾಣಿ ಸಹಯೋಗದೊಂದಿಗೆ ಶ್ರೀ ಚನ್ನಬಸವೇಶ್ವರ ಗುರುಕುಲ ವತಿಯಿಂದ ಆಯೋಜಿಸಿರುವ "ಎಜ್ಯುಕೇಶನ್ ಎಕ್ಸ್‌ಪೋ 2025"(ಇಜಣಛಿಚಿಣುಠಟಿ ಇಥಔಠ 2025) ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಶರಣಬಸವೇಶ್ವರ ದೇವಾಲಯ ಆವರಣದಲ್ಲಿ ಶತಾಯುಷಿ ಲಿಂಗೈಕ್ಯಶ್ರೀ ಶಾಂತವೀರ ಶಿವಾಚಾರ್ಯ ಮಹಾಸ್ವಾಮಿಗಳ 43ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣದಿಂದ ವಿಜಯಪುರಕ್ಕೆ ಪ್ರಯಾಣಿಸುವರು.

# ಸಂಪಾದಕರ ಸಮಸ್ಯೆ ಬೇಡಿಕೆ ಈಡೇರಿಸಿಕೊಳ್ಳಲು ಒಂದಾಗೋಣ: ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ



ಮಲ್ಲಮ ನುಡಿ ವಾರ್ತೆ

ಕೋಲಾರ : ಫೆಬ್ರವರಿ 23 ರಂದು ಬೆಂಗಳೂರಿನ ಚಾಮರಾಜಪೇಟೆಯಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ ನ ಸಭಾಂಗಣದಲ್ಲಿ ಸಂಘದ ವಿಶೇಷಸಾಮಾನ್ಯ ಸಭೆಯನ್ನು ಕರೆಯಲಾಗಿದೆ, ಈ ಸಭೆಯಲ್ಲಿ ಸಂಪಾದಕರಸಮಸ್ಯೆಗಳ ಸಾಧಕ ಬಾದಕಗಳನ್ನುಚರ್ಚಿಸಿ,ಸರ್ಕಾರದ ಗಮನಕ್ಕೆ ತರುವ ಮೂಲಕ ಸಮಸ್ಯೆಬಗೆಹರಿಸುವ ನಿಟ್ಟಿನಲ್ಲಿ ಕಾರ್ಯಮಗ್ನರಾಗೋಣ ಎಂದು ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದರಾಜ್ಯಾಧ್ಯಕ್ಷತಿಪ್ಪೇಸ್ವಾಮಿ ಹೇಳಿದರು.

ನಗರದಪತ್ರಕರ್ತರಭವನದಲ್ಲಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಸಭೆಯಲ್ಲಿ ಅವರು ಮಾತನಾಡಿ

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರು ತಾವುಗಳಸಂಘಕ್ಕೆಸದಸ್ಯರಾಗುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕೈಜೋಡಿಸುವಂತೆ ಮನವಿ ಮಾಡಿದರು.

ಒಂದು ವೇಳೆ ಸಂಪಾದಕರ ನಾನಾ ಬೇಡಿಕೆಗಳು ಈಡೇರದ ಪಕ್ಷದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಅನಿರ್ದಿಷ್ಟಾವಧಿ ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಪ್ರತ್ಯೇಕ ಸಚಿವರಿಲ್ಲ, ಈ ಇಲಾಖೆ ಮುಖ್ಯಮಂತ್ರಿಯವರ ಬಳಿ ಇದ್ದು ಅವರನ್ನು ಭೇಟಿ ಮಾಡಲು ಸಾಧ್ಯವಾಗುತ್ತಿಲ್ಲ, ಮುಖ್ಯಮಂತ್ರಿಯವರ ಬಳಿ ಚರ್ಚಿಸಲು ವಿಶೇಷ ಕರ್ತವ್ಯಾಧಿಕಾರಿಯವರಲ್ಲಿ ದಿನಾಂಕ ಮತ್ತು ಸಮಯ ಕೊಡಿಸುವಂತೆ ಕೋರಿ ಮನವಿ ಸಲ್ಲಿಸಿದ್ದೇವೆ. ಸಮಯ ದೊರೆತ ನಂತರ ಪ್ರಾದೇಶಿಕ ಮತ್ತು ಜಿಲ್ಲಾಮಟ್ಟದ ಪತ್ರಿಕೆಗಳ ಸಂಪಾದಕರ ಸಮಸ್ಯೆಗಳ ಬಗ್ಗೆ ಚರ್ಚಿಸಲಾಗುತ್ತದೆ ಎಂದು ತಿಳಿಸಿದರು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಉಪಾಧ್ಯಕ್ಷ ಭೀಮರಾಯ ಹದ್ದಿನಾಳ್ ಮಾತನಾಡಿ,ಸರಕಾರದ ಪತ್ರಿಕಾ ಜಾಹೀರಾತುಗಳನ್ನು ಖಾಸಗಿ ಏಜೆನ್ಸಿಗಳ ಮೂಲಕ ನೀಡುತ್ತಿದ್ದು ತಡವಾಗಿ ಹಣಪಾವತಿ ಮಾಡುತ್ತಿದ್ದು,ಇದರಿಂದ ಪತ್ರಿಕಾ ಸಂಪಾದಕರಿಗೆಸಮಸ್ಯೆಯಾಗುತ್ತಿದೆ. ಜಾಹೀರಾತಿನ ಹಣವನ್ನು ಖಾಸಗಿ ಏಜೆನ್ಸಿಗಳು

ಇಲಾಖೆ ಹಣ ಪಾವತಿಸಿದರೂ ಸಹ ತಡವಾಗಿ ನೀಡುತ್ತಿದ್ದಾರೆ. ಹಾಗಾಗಿ

ರಾಜ್ಯ ಸರ್ಕಾರ ವಾರ್ತಾ ಇಲಾಖೆಯಮೂಲಕಪತ್ರಿಕೆಗಳಿಗೆ ಜಾಹೀರಾತುಗಳನ್ನುನೀಡುವ ಕೆಲಸ ಮಾಡಬೇಕಾಗಿದೆ ಎಂದು ಒತ್ತಾಯಿಸಿದರು.

ಪ್ರಾದೇಶಿಕ ಮತ್ತು ಜಿಲ್ಲಾ ಮಟ್ಟದ ಪತ್ರಿಕೆಗಳ ಉಳಿವಿಗಾಗಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದಿಂದ ಕೊಪ್ಪಳ ಜಿಲ್ಲೆಯಲ್ಲಿ ಕಾರ್ಯಕಾರಿಣಿ ಸಭೆಯನ್ನು ಮಾರ್ಚ್ ತಿಂಗಳಿನಲ್ಲಿ ಹಮ್ಮಿಕೊಳ್ಳಲಾಗಿದೆ. ಎಲ್ಲಾ ಸಂಘಗಳೊಂದಿಗೆ ಸೇರಿ–ಕೊಂಡು ಪ್ರಾದೇಶಿಕ ಮತ್ತು ಜಿಲ್ಲಾ ಮಟ್ಟದ ಪತ್ರಿಕೆಗಳ ಉಳಿವಿಗೆ ಒಟ್ಟಾಗೋಣ ಎಂದರು.

ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್ ಮಾತನಾಡಿ, ಪ್ರಾದೇಶಿಕ ಮತ್ತು ಜಿಲ್ಲಾಮಟ್ಟದ ಪತ್ರಿಕೆಸಂಪಾದಕರಿಗೆಎದುರಾಗುವ ಸಮಸ್ಯೆಗಳನ್ನುಬಗೆಹರಿಸಿಕೊಳ್ಳಲು ಒಗ್ಗಟಿನ ಹೋರಾಟದ ಮೂಲಕ ಬೇಡಿಕೆಗಳನ್ನು ಈಡೇರಿಸಿಕೊಳ್ಳೋಣ ಎಂದರು.

ಮುಂದಿನ ದಿನಗಳಲ್ಲಿ ಸಂಪಾದಕರು ಒಗ್ಗಟ್ಟಿನಿಂದ ಸಭೆಗಳನ್ನುನಡೆಸಿ ಒಮ್ಮತದಿಂದ ನಿರ್ಣಯಗಳನ್ನುತೆಗೆದುಕೊಂಡು ಸಮಸ್ಯೆಗಳನ್ನು ಇತ್ಯರ್ಥಪಡಿಸಿ ಕೊಳ್ಳಬೇಕು ಎಂದರು.

ಟೆಂಡರ್ ಜಾಹೀರಾತುಗಳನ್ನು ವಾರ್ತಾ ಮತ್ತು ಸಾರ್ವಜನಿಕ ಇಲಾಖೆಯಿಂದ ಸುದ್ದಿಯ ರೂಪದಲ್ಲಿ ಕಳುಹಿಸುತ್ತಿದ್ದು, ಪ್ರಾದೇಶಿಕ ಮತ್ತು ಜಿಲ್ಲಾ ಪತ್ರಿ–ಕೆಯ ಸಂಪಾದಕರು ಗಮನ ಹರಿಸಬೇಕಿದೆ, ಸಣ್ಣ ಪತ್ರಿಕೆಗಳ ಮಹತ್ವ ಅಪಾರವಾಗಿದ್ದು, ಶಕ್ತಿ ತುಂಬಬೇಕೆಂದರು..

ಸಂಯುಕ್ತ ವಿಜಯ ಪ್ರಾದೇಶಿಕ ದಿನಪತ್ರಿಕೆಯ ಸಂಪಾದಕ ವಿ.ಮುನಿರಾಜು ಮಾತನಾಡಿ, ಕಳೆದ ಏಳು ತಿಂಗಳಿನಿಂದ ಜಾಹೀರಾತು ಹಣ ಬಾಕಿ ಇದ್ದು, ಈ ಕೂಡಲೇ ಜಾಹೀರಾತಿನ ಹಣವನ್ನು ಬಿಡುಗಡೆಗೊಳಿಸಬೇಕು ಎಂದು ಒತ್ತಾಯಿಸಿದರು. ಗಡಿಭಾಗದ ಪತ್ರಿಕೆಗಳಿಗೆ ಬಾಕಿ ಇರುವ ಜಾಹೀರಾತು ಬಿಡುಗಡೆ ಮಾಡುವಂತೆ ವಾರ್ತಾ ಇಲಾಖೆ ಆಯುಕ್ತರಿಗೆ ಆಗ್ರಹಿಸಿದರು.

ರಾಜ್ಯ ಪತ್ರಿಕೆಗಳಂತೆ ಜಾಹೀರಾತು ಸೇರಿದಂತೆ ಇತರೆ ಅಂಶಗಳನ್ನು ಸಹ ಪ್ರಾದೇಶಿಕ ಮತ್ತು ಜಿಲ್ಲಾ ಮಟ್ಟದ ಪತ್ರಿಕೆಗಳಿಗೂ ಆದ್ಯತೆ ನೀಡಬೇಕು ಎಂದರೆಲ್ಲದೆ, ಸರ್ಕಾರ ಜಾರಿಗೆ ತರಲು ಹೊರಟಿರುವ ಪರಿಷ್ಕೃತ ಹೊಸ ಜಾಹೀರಾತು ನೀತಿಯಲ್ಲಿ ಪತ್ರಿಕೆಗಳಿಗೆ ಮಾರಕವಾಗುವ ಅಂಶಗಳನ್ನು ಸೇರಿಸಿದರೆ ರಾಜ್ಯ ಸರ್ಕಾರದ ವಿರುದ್ಧ ಸಂಘದ ವತಿಯಿಂದ ಪ್ರತಿಭಟನಾ ಹಾದಿ ತುಳಿಯಲು ಹಿಂದೆಮುಂದೆ ಮಾಡಬಾರದು ಎಂದು ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಕಾರ್ಯನಿರತ ಸಂಪಾದಕರ ಸಂಘದ ಪ್ರಧಾನ ಕಾರ್ಯದರ್ಶಿ ಕೃಷ್ಣಮೂರ್ತಿ ಮಾತನಾಡಿ ಇದು ಯಾವುದೇ ಸಂಘಕ್ಕೆ ಪರ್ಯಾಯವಲ್ಲ, ಈಗಾಗಲೇ ರಾಜ್ಯದಲ್ಲಿ ಅನೇಕ ಸಂಘಗಳು ಇದ್ದರು.ಸಣ್ಣಪತ್ರಿಕೆಗಳ ಉಳಿವಿಗಾಗಿ ಹೋರಾಟದ ಮೂಲಕ ನಮ್ಮ ಬೇಡಿಕೆಗಳನ್ನು ಈಡೇರಿಸಿಕೊಳ್ಳೋಣ ಎಂದರು.

ಸಭೆಯಲ್ಲಿ ಸಂಪಾದಕರ ಸಂಘದ ಉಪಾಧ್ಯಕ್ಷ ಮಹಮದ್ ಯೂನುಸ್, ರಾಜ್ಯ ಕಾರ್ಯದರ್ಶಿಗಳಾದ ನರಸಿಂಹರಾಜು ಹೆಚ್,ಬಿ.ದಿನೇಶ್ ಗೌಡಗೆರೆ ,ಎಂ.ಬಿ.ಕೊಡಗಲಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಕೆ.ಎಸ್.ಗಣೇಶ್, ಹೆಚ್.ಎನ್.ಮುರಳೀಧರ, ಪ್ರಧಾನ ಕಾರ್ಯದರ್ಶಿ ಎಸ್. ಕೆ.ಚಂದ್ರಶೇಖರ್ ಸೇರಿದಂತೆ ಸಂಪಾದಕರುಗಳು ಇದ್ದರು.

# ಶರಣ ಸಂಸ್ಕೃತಿ ಉತ್ಸವ ಸಮಾರೋಪ



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ :– ಫೆ 6. ತಾಲೂಕಿನ ಮಂಠಾಳ ಗ್ರಾಮದ ಶ್ರೀ ಗುರುಲಿಂಗೇಶ್ವರ ಚೌಕಿ ಮಠದಲ್ಲಿ ನಡೆದ ಶರಣ ಸಂಸ್ಕೃತಿ ಉತ್ಸವದ ಹಾಗೂ ಪೂಜ್ಯ ಶ್ರೀ. ಅಭಿನವ ಚನ್ನಬಸವ ಮಹಾಸ್ವಾಮಿಜಿಗಳ ಪಟ್ಟಾಧಿಕಾರದ ವಾರ್ಷಿಕೋತ್ಸವ ಉತ್ಸವದ ಸಮಾರೋಪ ಸಮಾರಂಭದಲ್ಲಿ ದಲ್ಲಿ2023–24ನೇ ಸಾಲಿನಲ್ಲಿ ನಿವೃತ್ತ ಹೊಂದಿದ ಇಲ್ಲಿನ ಸರಕಾರಿ ನೌಕರರಾದ ಗುರುರಾಜ ಹಾರಕೂಡೆ.ರವೀಂದ್ರ ಉಪಾಸೆ. ಉಮಕಾಂತ ಮಹಾಜನ. ಚಂದ್ರಕಾಂತ ಹಾರಕೂಡೆ. ಬಲಭೀಮ ಕೈಗಾರಿಕಾ. ವಿಶ್ವನಾಥ ಅಂಬುಲಗೆ. ಇವರೆಲ್ಲರಿಗೂ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಬೆಲೂರಿನ ಪೂಜ್ಯಶ್ರೀ ಪ್ರಭುಕುಮಾರ ಶಿವಾಚಾರ್ಯರು,ಖೇಳಗಿಯ ಪೂಜ್ಯಶ್ರೀ ಶಿವಲಿಂಗೇಶ್ವರ ಮಹಾಸ್ವಾಮಿಗಳು ಮಂಠಾಳದ ಪೂಜ್ಯಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು, ದೇವರ ಹಿಪ್ಪರಗಿಯ ಪೂಜ್ಯಶ್ರೀ ಶಿವಯೋಗೇಶ್ವರಮಹಾಸ್ವಾಮಿಗಳು, ವಿಶೇಷ ಉಪನ್ಯಾಸವನ್ನು ತೆರಿಗೆ ಇಲಾಖೆಯ ಆಯುಕ್ತರಾದ ಡಾ. ಮಹೇಶ್ ಪಾಟೀಲ ಮಾತನಾಡಿ ಶರಣ ಸ್ಮಾರಕಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು. ರಾಷ್ಟ್ರೀಯ ಲಿಂಗಾಯತ ಮಹಾಸಭೆಯ ಅಧ್ಯಕ್ಷರಾದ ಬಸವರಾಜ ಧನ್ನೂರ ಮಾತನಾಡಿದರು.

ಕಲಬುರಗಿಯ ಗುಂಡಣ್ಣ ಡಿಗ್ಗಿ ಹಾಸ್ಯ ಸಂಜೆ ಕಾರ್ಯಕ್ರಮ ನಡೆಸಿಕೊಟ್ಟರು.ದಾಸೋಹದಲ್ಲಿ 15 ದಿನಗಳಿಂದ ಸೇವೆ ಮಾಡಿದ ರಾಚ್ಚಣ್ಣ ಕೋರಾಳೆ,ಮಲ್ಲಪ್ಪ ಬಿ ಕೋಕಾಟೆ,ಸಂಜುಕುಮಾರ ಪಂಚಾಳ ಇವರನ್ನು ಸನ್ಮಾನಿಸಲಾಯಿತು,ಪ್ರಮುಖರಾದ ಶಂಕರರಾವ ಪೋಲಿಸ್ ಪಾಟೀಲ. ಮಹಾದೇವ ಮಾಲಿ ಪಾಟೀಲ. ಶಿವಕುಮಾರ ಶೆಟ್ಟಗಾರ. ಮಲ್ಲಿಕಾರ್ಜುನ ಪೊಲೀಸ್ ಪಾಟೀಲ. ಶಂಭುಲಿಂಗ ರಾಮದಾಸೆ,ಪುಷ್ಪರಾಜ ಹರಕೂಡೆ,ರವೀಂದ್ರ ಶ್ಯಾಯಪ್ಪ, ಮಲ್ಲಿಕಾರ್ಜುನ ಮಹಾಜನ,ಬಾಬುರಾವ ಪೋಲಿಸ್ ಪಾಟೀಲ, ಕಾಶಪ್ಪ ಸಾತಬಾಯಿ,ಮಹಾಪುರಿ ಸೂರ್ಯವಂಶಿ,ಮಹಾದೇವ ಶಂಕರೇಪ್ಪ ಮಾಲಿ ಪಾಟೀಲ, ಶಿವರಾಜ ಪಾರಾ,ಸಿದ್ರಾಮ ಕೆ ಹರಕೂಡೆ, ರಾಜಪ್ಪ ಸಾತಬಾಯಿ,ಅಶೋಕ ಸಂಕೋಳೆ ,ಸೂರ್ಯಕಾಂತ ಹುಗ್ಗೆ ಪಾಟೀಲ,ಪಿಂಟು ಬಿರನಾಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸ್ವಾಗತ ಚಂದ್ರಕಾಂತ ಹಾರಕೂಡೆ. ಪ್ರಸ್ತಾವಿಕ ಕಾಶಪ್ಪ ಚಕಾರೆ . ನಿರೂಪಣೆ ಗುರುರಾಜ ಹಾರಕೂಡೆ. ಆದರ್ಶ ಶ್ಯಾಯಪ್ಪ ವಂದಿಸಿದರು.

# ಎಸ್ಡಿಎಂಸಿ ಅಧ್ಯಕ್ಷರಾಗಿ ಸಪ್ನ ಉಪಾಧ್ಯಕ್ಷರಾಗಿ ಮೌವಿತಾ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ ಫೆ 6. ಪಟ್ಟಣದ ಮಾರ್ಕಂಡೇಶ್ವರ್ ಗಲ್ಲಿಯಲ್ಲಿನ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ನೂತನ ಎಸ್ ಡಿ ಎಂ ಸಿ ಅಧ್ಯಕ್ಷ ಉಪಾಧ್ಯಕ್ಷಆಯ್ಕೆಮಾಡಲಾಯಿತು. ಅಧ್ಯಕ್ಷರಾಗಿ ಸಪ್ನ ಗಂಡ ಶಾಂತಕುಮಾರ,ಉಪಾಧ್ಯಕ್ಷರಾಗಿ ಮೌವಿತಾ ಗಂಡ ಕಲ್ಯಾಣಿ ಆಯ್ಕೆಗೊಂಡರು. ನಂತರ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಅವರು ಮಧ್ಯಾಹ್ನದ ಬಿಸಿಯೂಟದ ಗುಣಮಟ್ಟ ಪರಿಶೀಲಿಸಲು ವಿದ್ಯಾರ್ಥಿಗಳೊಂದಿಗೆ ಊಟ ಸವಿದರು.ಸಂದರ್ಭದಲ್ಲಿ ಪುರಸಭೆ ಪುರಸಭೆ ಸದಸ್ಯೆ ಮಾಲಾಶ್ರೀ ಎಸ್. ಭುತಾಳೆ, ಸಿ.ಆರ್.ಪಿ ರಾಮಚಂದ್ರ,ರಾಜಪ್ಪ ಜಮಾದರ್, ಶಾಲೆಯ ಪ್ರಭಾರಿ ಮುಖ್ಯಶಿಕ್ಷಕಿ ಕಮಲಾ, ಸಹ ಶಿಕ್ಷಕಿಯರಾದ ಭಾಗ್ಯವತಿ, ಸುನಂದಾ, ಪುರಸಭೆ ಸಿಬ್ಬಂದಿಗಳಾದ ಸಂತೋಷ ಬಿರಾದಾರ್, ಚಿದಾನಂದ ಪತ್ರಿ, ಪ್ರಮುಖರಾದ ಶಾಮರಾವ ಭುತ್ತಾಳೆ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಬಸವಕಲ್ಯಾಣ : ತಾಲೂಕಿನ ಮಂಠಾಳ ಗ್ರಾಮದ ಶ್ರೀ ಗುರುಲಿಂಗೇಶ್ವರ ಚೌಕಿ ಮಠದಲ್ಲಿ ನಡೆದ ಶರಣ ಸಂಸ್ಕೃತಿ ಉತ್ಸವ ಕಾರ್ಯಕ್ರಮದಲ್ಲಿ ಇಳಕಲ್ ಪೂಜ್ಯ ಶ್ರೀ ಗುರು ಮಹಾಂತ ಸ್ವಾಮೀಜಿ. ಶಿವಕುಮಾರ ಶೆಟ್ಟಗಾರ ಬರೆದ ಶರಣರ ನೆನೆ ಮನವೆ ಗ್ರಂಥ ಬಿಡುಗಡೆ ಗೊಳಿಸಲಾಯಿತು. ಈ ಸಂದರ್ಭದಲ್ಲಿ ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು. ಪೂಜ್ಯ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು. ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಜಿ. ಮಹಾರಾಷ್ಟ್ರ ಉಮರ್ಗಾದ ಶಾಸಕರಾದ ಪ್ರವೀಣ ಮಹಾಸ್ವಾಮಿಜಿ. ಶಿವಾನಂದ ಹೈಬತಪುರೆ. ಡಿ. ವೈ. ಎಸ್. ಪಿ. ನ್ಯಾಮೆಗೌಡ. ಹಾಗೂ ಪಿ. ಎಸ್. ಐ. ಸುವರ್ಣಾ ಮಲಶೆಟ್ಟಿ. ಮಹಾದೇವ ಜಗನ್ನಾಥ ಪಾಟೀಲ. ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಮಾತೆ ರಮಾಬಾಯಿ ಅಂಬೇಡ್ಕರ್ ರವರ ಜಯಂತಿ ಸರ್ಕಾರದ ವತಿಯಿಂದ ಆಚರಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ:ಫೆ.6:ತ್ಯಾಗ–ಸ್ಫೂರ್ತಿಯ ಸಂಕೇತ ಮಾತೆ ರಮಾಬಾಯಿ ಅಂಬೇಡ್ಕರ್ ರವರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರುವಂತೆ ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯ ಸಿಂಗ್ ರವರಿಗೆ ಮಾನವ ಬಂಧುತ್ವ ವೇದಿಕೆ ಇಲ್ಲಿನ ಘಟಕದ ವತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು. ಮನವಿ ಪತ್ರವನ್ನು ಸ್ವೀಕರಿಸಿದ ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯ ಸಿಂಗ್ ರವರು ಮಾತನಾಡಿ ನಾನು ಕೂಡಲೇ ಮುಖ್ಯಮಂತ್ರಿಗಳಿಗೆ, ಸಮಾಜ ಕಲ್ಯಾಣ ಸಚಿವರಿಗೆ, ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ರವರಿಗೆ ಹಾಗೂ ಸಚಿವರಾದ ರಹೀಂ ಖಾನ್ ರವರಿಗೆ ಭೇಟಿ ಮಾಡಿ ಅವರ ಗಮನಕ್ಕೆ ತಂದು ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ರವರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ರಾಜ್ಯ ಸರ್ಕಾರದ ಮೇಲೆ ಒತ್ತಡ ಹಾಕುತ್ತೇನೆ ಎಂದು ಹೇಳಿ ಭರವಸೆ ನೀಡಿದರು.ಈ ಸಂದರ್ಭದಲ್ಲಿ ಮಾನವ ಬಂಧುತ್ವ ವೇದಿಕೆ ತಾಲೂಕಾ ಸಂಚಾಲಕ ಪಿಂಟು ಕಾಂಬಳೆ, ಉಪಾಧ್ಯಕ್ಷ ಗೌತಮ ಖರ್ಗೆ, ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷ ನಾಗೇಶ ಕಾಂಬಳೆ, ಬಾಬುರಾವ್ ಕಾಂಬಳೆ, ನಿತ್ಯಾನಂದ ಮಂಠಾಳಕರ್, ದಯಾನಂದ ಬೆಲೂರೆ, ರವಿ ಬೆಲೂರೆ, ಬುದ್ಧಾನಂದ ಗಾಯಕವಾಡ, ವೆಂಕಟ್ ಬಿರಾದಾರ, ವಿಶಾಲ ಕಾಂಬಳೆ, ಪ್ರಶಾಂತ ಗಾಯಕವಾಡ, ಅಮರ ಗಾಯಕವಾಡ, ದಯಾನಂದ ಮಧಾಳೆ ಇಲ್ಲಾಳ, ಅವಿನಾಶ್ ಗಾಯಕವಾಡ, ಅರ್ಜುನ ಗಾಯಕವಾಡ, ಶೇಖರ್ ಸೂರ್ಯವಂಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಉಪಾಧ್ಯಕ್ಷರಾಗಿ ಪ್ರಭು ಡಿಗ್ಗೆ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.6: ತಾಲೂಕು ಸರಕಾರಿ ನೌಕರರ ಸಂಘದ ನಾಮನಿರ್ದೇಶಿತ ಉಪಾಧ್ಯಕ್ಷರಾಗಿ ಪ್ರಭು ಡಿಗ್ಗೆ ಅವರನ್ನು ನೇಮಕ ಮಾಡಲಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ತಿಳಿಸಿದ್ದಾರೆ.

ಶಿಕ್ಷಣ ಇಲಾಖೆಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಇವರು ತಮ್ಮ ಕರ್ತವ್ಯದ ಜತೆಗೆ ನೌಕರರ ಸಂಘ ಬಲವರ್ಧನೆಗೆ ಮುಂದಾಗಬೇಕು ಎಂದು ತಿಳಿಸಿದ್ದಾರೆ.

## ನಾಮನಿರ್ದೇಶಕರಾಗಿ ಧನರಾಜ ಬಂಬುಳಗೆ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.6: ತಾಲೂಕು ಸರಕಾರಿ ನೌಕರರ ಸಂಘದ ನಾಮನಿರ್ದೇಶಿತ ಸದಸ್ಯರಾಗಿ ಧನರಾಜ ಬಂಬುಳಗೆ ಅವರನ್ನು ನೇಮಕ ಮಾಡಲಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ತಿಳಿಸಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇವರು ತಮ್ಮ ಕರ್ತವ್ಯದ ಜತೆಗೆ ಸರಕಾರಿ ನೌಕರರ ಸಂಘವನ್ನು ಬಲಪಡಿಸುವಂತೆ ನೇಮಕಾತಿ ಪತ್ರದಲ್ಲಿ ತಿಳಿಸಿದ್ದಾರೆ.

## ಫೆ.೯ ರಂದು ಜಿಲ್ಲಾಮಟ್ಟದ ಸಾವಯುವ ಮತ್ತು ಸಿರಿಧಾನ್ಯ ಮೇಳ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಫೆ.06:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಇಲಾಖೆ ಬೀದರ ಸಹಯೋಗದಲ್ಲಿ ಫೆಬ್ರುವರಿ.9 ರಂದು ಬೆಳಿಗ್ಗೆ. 10 ಗಂಟೆಗೆ ಜಿಲ್ಲಾ ನೆಹರು ಕ್ರೀಡಾಂಗಣ ಬೀದರದಲ್ಲಿ ಜಿಲ್ಲಾ ಮಟ್ಟದ ಸಾವಯುವ ಮತ್ತು ಸಿರಿಧಾನ್ಯ ಮೇಳ–2025 ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಲಿದ್ದಾರೆ.

ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

# ಸರ್ಕಾರಿ ಪ್ರಾಥಮಿಕ ಉರ್ದು ಶಾಲೆಯ ಎಸ್ಡಿಎಂಸಿ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಫೆ 6. ಪಟ್ಟಣದ ದಸ್ತಗಿರಿ ಓಣಿಯಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಉರ್ದು ಶಾಲೆಯ ನೂತನ ಎಸ್ಡಿಎಂಸಿ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರ ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ನಸೀಮಾ ಬೇಗಂ ಗಂಡ ತೈಯಬ್, ಉಪಾಧ್ಯಕ್ಷರಾಗಿ ಫಾತಿಮಾ ಬೇಗಂ ಗಂಡ ತೈಯಬ್ ಸದಸ್ಯರಾಗಿ ರೇಷ್ಮಾ ಮಂಜಲೇಸಾಬ್, ಅಮ್ರೀನ ಹಸನ್, ಕರೀಮಾ ಬೇಗಂ ಯಾಸಿನ್ ಖಾನ್, ಜಹೀರ್ ಅಹ್ಮದ್ ನಜೀರ್ ಅಹ್ಮದ್, ತೌಫಿಕ್ ಹುಸೇನ ಮಹಮ್ಮದ್ ಹುಸೇನ, ಸಲೀಮಾ ಬೇಗಂ ಅಬ್ದುಲ್ ರಹಿಮಾನ್ ಆಯ್ಕೆಗೊಂಡರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ, ಶಾಲೆ ಮುಖ್ಯ ಶಿಕ್ಷಕಿ ಅನೀತಾಬಾಯಿ, ಸಹ ಶಿಕ್ಷಕಿ ಸೈಯದಾ ಅಸ್ತಾನವೀದ್, ಪುರಸಭೆ ಸಿಬ್ಬಂದಿ ಸಂತೋಷ ಬಿರಾದಾರ್

ಉಪಸ್ಥಿತರಿದ್ದರು.

# ತೋಟಗಾರಿಕೆ, ಮುನಿರಾಬಾದ ಡ್ಯಾಂ ಗ್ರಾ.ಪಂ, ಅಳವಂಡಿ ಉತ್ತಮ ಕಾಯಕ ಬಂಧು ಪ್ರಶಸ್ತಿ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.6: ಮಹಾತ್ಮಾ ಗಾಂಧಿನರೇಗಾಯೋಜನೆಯಡಿ 2023–24ನೇ ಸಾಲಿನಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿ,ಉತ್ತಮ ಕಾಯಕ ಬಂಧು ಅಳವಂಡಿ ಗ್ರಾಮ ಪಂಚಾಯತಿಯಶ್ರೀದೇವಿಎಲಿಬಳ್ಳಿ, ನರೇಗಾ ಯೋಜನೆಯಡಿ ಒಗ್ಗೂಡಿಸುವಿಕೆ ತೋಟಗಾರಿಕೆ ಇಲಾಖೆಗೆ ಪ್ರಶಸ್ತಿ ಪ್ರಧಾನ ಸಮಾರಂಭವು ಬೆಂಗಳೂರು ನಗರದ ಡಾ॥ ಬಿ ಆರ್ ಅಂಬೇಡ್ಕರ್ ಭವನದಲ್ಲಿ ದಿನಾಂಕ:05–02–2025ರಂದು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ವಿಧಾನ ಪರಿಷತ್ ಸಭಾಪತಿಗಳಾದ ಶ್ರೀಬಸವರಾಜ ಹೊರಟ್ಟಿ,ಸಚಿವರಾದ ಪ್ರಿಯಾಂಕ್ ಖರ್ಗೆ, ಕಿಯೋನಿಕ್ಸ್ ಅಧ್ಯಕ್ಷರಾದ ಶರತ್ ಬಚ್ಚಗೌಡ, ಶಾಸಕರಾದ ಹರ್ಷಾದ್ ರಿಜ್ವಾನ್, ಪ್ರಧಾನ ಕಾರ್ಯದರ್ಶಿಗಳಾದ ಅಜುಂಮ್ ಫರ್ವೆಜ್,ಉಮಾಮಹಾದೇವನ್ ,ಅಯುಕ್ತರಾದ ಪವನಕುಮಾರ ಮಾಲಪಾಟಿ, ಅರುಂಧತಿ ರವರಿಂದ ಪ್ರಶಸ್ತಿಯನ್ನು ಸ್ವೀಕರಿಸಲಾಯಿತು.

ಅತ್ಯುತ್ತಮಗ್ರಾಮ ಪಂಚಾಯತಿ ಪ್ರಶಸ್ತಿಯನ್ನು ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಅಯೂಬ್ ಖಾನ್



ಪಿಡಿಒ ಮಹೇಶ್ ಸಜ್ಜನ್, ಉಪಾಧ್ಯಕ್ಷರಾದ ಸೌಭಾಗ್ಯ ನಾಗರಾಜ ಮತ್ತು ಸರ್ವ ಸದಸ್ಯರು,ತಾಂತ್ರಿಕ ಸಹಾಯಕ, ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವೀಕರಿಸಿದರು.

ಅಳವಂಡಿ ಗ್ರಾಮ ಪಂಚಾಯತಿಯ ಉತ್ತಮ ಕಾಯಕಬಂಧು ಪ್ರಶಸ್ತಿಯನ್ನು ಕಾಯಕ ಬಂಧು ಶ್ರೀದೇವಿ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪತುರಾದಿ,ಅಧ್ಯಕ್ಷೆ ಶಂಕ್ರಮ ಜೊಗಿನ್, ಪಿಡಿಒ ಕೊಟ್ರಪ್ಪ ಅಂಗಡಿ, ಗ್ರಾಮ ಕಾಯಕ ಮಿತ್ತ ಗೀತಾ ಕಿಲ್ಲೆದ ಸ್ವೀಕರಿಸಿದರು. ಅತ್ಯುತ್ತಮ ಒಗ್ಗೂಡಿಸುವಿಕೆ ತೋಟಗಾರಿಕೆ ಇಲಾಖೆಯ ಪ್ರಶಸ್ತಿಯನ್ನು ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ ವಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಉಕ್ಕುಂದ, ಹಿರಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳ ತಂಡ ಪ್ರಶಸ್ತಿ ಸ್ವೀಕರಿಸಿತು.

ಜಿಲ್ಲಾ ಪಂಚಾಯತಿಯಿಂದ ನಿರ್ಮಿಸಲಾಗಿದ್ದ ಬೂದು ನಿರು ನಿರ್ವಹಣಾ ಕಾಮಗಾರಿ ಅನುಷ್ಠಾನ ಮಾದರಿಯ ಸ್ತಬ್ಧ ಚಿತ್ರವನ್ನು ಸ್ಟಾಲ್ ಅಳವಡಿಸಿರುವದನ್ನು ಇಲಾಖಾ ಸಚಿವರು, ವಿಧಾನಪರಿಷತ್ ಸಭಾಪತಿಗಳ ತಂಡ ವೀಕ್ಷಿಸಿ ಅನುಷ್ಠಾನ ಮಾದರಿಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿತು.

ಕೊಪ್ಪಳ ತಾಲೂಕ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಾಲಚಂದ್ರನ್ , ನರೇಗಾ ಸಹಾಯಕನಿರ್ದೇಶಕಯಂಕಪ್ಪ, ಎಡಿಪಿಸಿ ಮಹಾಂತಸ್ವಾಮಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರ ಸುರೇಶ್,ಕಿರಿಯ ಅಭಿಯಂತರ ವಾಸಣ್ಣ, ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ತಾಂತ್ರಿಕ ಸಂಯೋಜಕರಾದ ಸಂತೋಷ ನಂದಾಪುರ, ವಿಶ್ವನಾಥ,ತಾಂತ್ರಿಕ ಸಹಾಯಕ ಮಲ್ಲಿಕಾರ್ಜುನ,ಗುರುರಾಜ ಹಾಜರಿದ್ದರು.

# ಸಿರಿಧಾನ್ಯಗಳ ಬಳಕೆ ಹೆಚ್ಚಾಗಿ ಮಾಡಬೇಕು




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.06:ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ (ಕೆ. ಎಸ್.ಸಿ.ಎಸ್.ಟಿ)–ಬೆಂಗಳೂರು, ಕೆ.ಎಸ್.ಸಿ.ಎಸ್.ಟಿ ಪ್ರಾದೇಶಿಕ ಕೇಂದ್ರ ಕಲಬುರಗಿ ಮತ್ತು ಜಿಲ್ಲಾ ಕೃಷಿ ತರಬೇತಿ ಕೇಂದ್ರ (ಡಿ.ಎ.ಟಿ.ಸಿ.), ಕೋಟನೂರ ಇವರ ಸಹಯೋಗದಲ್ಲಿ ರೈತ ಮಹಿಳೆಯರಿಗೆ "ಸಿರಿಧಾನ್ಯಗಳ ಮೌಲ್ಯವರ್ಧನೆಹಾಗೂಸಂಸ್ಕರಣೆ" ಕುರಿತು ಬುಧವಾರ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಕಲಬುರಗಿ ಜಾಗೃತಕೋಶದ ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್. ಅವರು ಉದ್ಘಾಟಿಸಿದರು.

ನಂತರ ಅವರು ಮಾತನಾಡಿ, ಆರೋಗ್ಯದ ದೃಷ್ಟಿಯಲ್ಲಿ ಸಿರಿಧಾನ್ಯಗಳ ಪಾತ್ರ ಮಹತ್ವದ್ದಾಗಿದ್ದು, ಆದ್ದರಿಂದ ಸಿರಿಧಾನ್ಯಗಳ ಬಳಕೆಯನ್ನು ಹೆಚ್ಚು ಮಾಡಬೇಕು. ಸಿರಿಧಾನ್ಯಗಳನ್ನು ಕಡಿಮೆ ಖರ್ಚಿನಲ್ಲಿ ರಸಗೊಬ್ಬರ ಮತ್ತು ಕೀಟನಾಶಗಳ ಬಳಕೆ ಇಲ್ಲದೇ ಕಡಿಮೆ ಮಳೆ ಬೀಳುವ ಪ್ರದೇಶಗಳಲ್ಲಿಯೂ ಅಚ್ಚುಕಟ್ಟಾಗಿ ಬೆಳೆಯಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಬೆಂಗಳೂರಿನ ಕೆ.ಎಸ್.ಸಿ.ಎಸ್.ಟಿ. ಯೋಜನಾ ಅಭಿಯಂತರರಾದ ಡಾ.ಸೈಯದ್ ಸಮೀರ್ ಅವರು ಮಾತನಾಡಿ, "ಸಿರಿಧಾನ್ಯಗಳ ಮೌಲ್ಯವರ್ಧನೆ ಹಾಗೂ ಸಂಸ್ಕರಣೆ" ಕುರಿತು ಸಂಕ್ಷಿಪ್ತವಾಗಿ ವಿವರಿಸಿದಲ್ಲದೇ ಈಗಿನ ಹೊಸ ಜೀವನಶೈಲಿಯಲ್ಲಿ ಸಿರಿಧಾನ್ಯಗಳ ಸೇವನೆ, ಆರೋಗ್ಯದ ಲಾಭಗಳು ಮತ್ತು ಸಿರಿಧಾನ್ಯಗಳಲ್ಲಿ ಅಡಗಿರುವ ವಿವಿಧ ಪೋಷಕಾಂಶಗಳನ್ನು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಕೋಟನೂರ ಜಿಲ್ಲಾ ಕೃಷಿ ತರಬೇತಿ ಕೇಂದ್ರ ಸಹಾಯಕ ಕೃಷಿ ನಿರ್ದೇಶಕ ಡಾ. ಅನಿಲ್ ಕುಮಾರ್ ರಾಥೋಡ ಮಾತನಾಡಿದರು. ಡಾ. ಅಂಬರೀಶ ಗಣಚಾರಿ ಮತ್ತು ಸಂತೋಷ್ ಜವಳಿ ಅವರು ತಮ್ಮ ಪರಿಣಿತ ಉಪನ್ಯಾಸಗಳ ಮೂಲಕ ರೈತ ಮಹಿಳೆಯರಿಗೆ ಅವಶ್ಯಕ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಯಾಸ್ಮಿನ್,ಸುಜಾತ ರಾಜನಾಳಕರ ಸೇರಿದಂತೆ ಸಹಾಯಕ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಮಧುಮತಿ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು. ನೀಲಕ್ಕ ಎಂ.ನರಸಲಗಿ ವಂದಿಸಿದರು.

# ಜನರಲ್ಲಿ ಕ್ಯಾನ್ಸರ್ ಕುರಿತು ಅರಿವು

## ಬಹುಮುಖ್ಯ:ಡಿಎಚ್‌ಓ ಡಾ.ಧ್ಯಾನೇಶ್ವರ ನಿರಗೂಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಫೆ.06: ಜನರಲ್ಲಿ ಕ್ಯಾನ್ಸರ್ ಕುರಿತು ಅರಿವು ಬಹುಮುಖ್ಯವಾಗಿದ್ದು ಈ ರೋಗದ ಲಕ್ಷಣಗಳು ಕಂಡುಬಂದಲ್ಲಿ ಸಮಿಪದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಪರೀಕ್ಷಿಸಿಕೊಳ್ಳಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಧ್ಯಾನೇಶ್ವರ ನಿರಗೂಡೆ ತಿಳಿಸಿದರು.

ಅವರು ಇಂದು ನಗರದಲ್ಲಿ ವಿಶ್ವ ಕ್ಯಾನ್ಸರ್ ದಿನಾಚರಣೆ–2025ರ ನಿಮಿತ್ಯ ಜಿಲ್ಲಾ ಎನ್.ಸಿ.ಡಿ. ಕೋಶ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೀದರ ವತಿಯಿಂದ ಜನರಲ್ಲಿ ಕ್ಯಾನ್ಸರ ಕುರಿತು ಅರಿವು ಮೂಡಿಸುವ ಬೃಹತ್ ಅಭಿಯಾನಕ್ಕೆ ಹಸಿರು ಧ್ವಜ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಈ ವರ್ಷದ ಧ್ಯೇಯವಾಕ್ಯ "ವಿಶಿಷ್ಟತೆಯಿಂದ ಏಕತೆ" ಎಂದು ತಿಳಿಸುತ್ತಾ ಪ್ರತಿ ವರ್ಷದಂತೆ ಈ ವರ್ಷವು ವಿಶ್ವ ಕ್ಯಾನ್ಸರ್ ದಿನಾಚರಣೆಯನ್ನು ಜಿಲ್ಲಾದ್ಯಾಂತ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು, ಫೆಬ್ರವರಿ 4 ರಂದು ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ ಕ್ಯಾನ್ಸರ್ ಪೂರ್ವಭಾವಿ ತಪಾಸಣಾ ಶಿಬಿರಗಳನ್ನು, ಅರಿವು ಮೂಡಿಸುವ ಮಾಹಿತಿ, ಶಿಕ್ಷಣ



ಕುರಿತ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿತ್ತು ಹಾಗೂ ಈ ದಿನ ಜಾಗೃತಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಶಂಕ್ರೆಪ್ಪಾ ಬೊಮ್ಮ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕ್ಯಾನ್ಸರ್ ರೋಗಗಳ ಪ್ರಮಾಣವು ಜಗತ್ತಿನಾದ್ಯಾಂತ ಅತಿ ತೀವ್ರವಾಗಿ ಹೆಚ್ಚುತ್ತಿರುವುದರಿಂದ ಜನರಲ್ಲಿ ಭಯದ ಬದಲು ರೋಗದ ಅರಿವು ತುಂಬಾ ಮುಖ್ಯವಾಗಿದ್ದು, ಇದಕ್ಕೆ ಪ್ರಮುಖವಾಗಿ ತಂಬಾಕು ಪದಾರ್ಥಗಳ ಸೇವನೆ, ಅನಾರೋಗ್ಯಕರ ಜೀವನ ಶೈಲಿ, ಅಧಿಕ ತೂಕ ಮತ್ತು ಮಧ್ಯಪಾನ ಸೇವನೆ ಆದಿ ಮುಖ್ಯ ಕಾರಣಗಳಾಗಿದ್ದು. ಪುರುಷರಲ್ಲಿ ಪ್ರಮುಖವಾಗಿ ಬಾಯಿ,ಗಂಟಲು,ಶ್ವಾಸಕೋಶ, ಜಠರ ಮತ್ತು ಅನ್ನನಾಳದ ಕ್ಯಾನ್ಸರಗಳು ಹಾಗೂ ಮಹಿಳೆಯರಲ್ಲಿ ಅಧಿಕವಾಗಿ ಸ್ಥನ ಮತ್ತು ಗರ್ಭಕಂಠವು ಕ್ಯಾನ್ಸರನ ಪ್ರಮುಖ ತಾಣಗಳಾಗಿವೆ, ಜನರು ಆರೋಗ್ಯಕರ ಜೀವನ ಶೈಲಿಯನ್ನು ಅನುಸರಿಸಬೇಕು. ಜೊತೆಗೆ 30 ವರ್ಷ ಮೇಲ್ಪಟ್ಟವರು ಪ್ರತಿ 5 ವರ್ಷಕ್ಕೊಮ್ಮೆ ಪುರುಷರು ಬಾಯಿಕ್ಯಾನ್ಸರ್ ಹಾಗೂ ಮಹಿಳೆಯು ಸ್ತನ ಮತ್ತು ಗರ್ಭ ಕಂಠದ ಕ್ಯಾನ್ಸರ್‌ಗಳ ಪೂರ್ವಭಾವಿ ತಪಾಸಣೆಯನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಮಾಡಿಸಿಕೊಳ್ಳಬೇಕು, ಕ್ಯಾನ್ಸರ್ ರೋಗವನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿದಲ್ಲಿ ಪರಿಣಾಮಕಾರಿ ಚಿಕಿತ್ಸೆಯನ್ನು ನೀಡಬಹುದೆಂದು ತಿಳಿಸಿದರು.

ಈ ಜಾಗೃತಿ ಅಭಿಯಾನವು ಇಂಡಿಯನ್ ಕ್ಯಾನ್ಸರ್ ಸೊಸೈಟಿ(ಕರ್ನಾಟಕ)ಪ್ರಾದೇಶಿಕ ಕಚೇರಿ ಕಲಬುರಗಿ ಹಾಗೂ ಎಲ್ ಮತ್ತು ಟಿ ಟೆಕ್ನಾಲಾಜಿ ಸರ್ವಿಸೆಸ್ ಸಹಯೋಗದೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಬೀದರನಿಂದ ಪ್ರಾರಂಭವಾಗಿ ಜನವಾಡ ರಸ್ತೆ ಮಾರ್ಗವಾಗಿ ಅಂಬೇಟ್ಕರ್ ವೃತ್ತದ ಮೂಲಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಲ್ಲಿ ಮುಕ್ತಾಯಗೊಳಿಸಲಾಯಿತು. ಅಭಿಯಾನದುದ್ದಕ್ಕೂ ಕ್ಯಾನ್ಸರ್ ಕುರಿತು ಅರಿವು ಮೂಡಿಸುವ ಫಲಕಗಳು, ಘೋಷಣೆಗಳು ಹಾಗೂ ಧ್ವನಿವರ್ಧಕಗಳ ಮೂಲಕ ಜನರಿಗೆ ಅರಿವು ಮೂಡಿಸಲಾಯಿತು.

ಈ ಅಭಿಯಾನದಲ್ಲಿ ಇಂಡಿಯನ್ ಕ್ಯಾನ್ಸರ್ ಸೊಸೈಟಿ(ಕರ್ನಾಟಕ)ಪ್ರಾದೇಶಿಕ ಕಚೇರಿ ಕಲಬುರಗಿ ಹಾಗೂ ಎಲ್ ಮತ್ತು ಟಿ ಟೆಕ್ನಾಲಾಜಿ ಸರ್ವಿಸೆಸ್ ಇದರ ಪ್ರಾದೇಶಿಕ ಕಾರ್ಯವ್ಯವಸ್ಥಾಪಕ ಗುರುರಾಜ ಕುಲಕರ್ಣಿ, ಎಸ್.ಬಿ ಪಾಟೀಲ್ ದಂತ ವೈದ್ಯಕೀಯ ಸಂಸ್ಥೆಯ ಪ್ರಾಂಶುಪಾಲರು ಡಾ.ಚಂದ್ರಶೇಖರ ಗೌಡಾ ಪಾಟೀಲ್ ಹಾಗೂ ಸಂಸ್ಥೆಯ ವಿದ್ಯಾರ್ಥಿಗಳು, ಸಿದ್ಧಾರಾಮೇಶ್ವರ ಆಯುರ್ವೇದಿಕ್ ವೈದ್ಯಾಕೀಯ ಕಾಲೇಜ, ಸರಕಾರಿ ನರ್ಸಿಂಗ್ ಕಾಲೇಜ್ ಬ್ರಿಮ್ಸ್ ಬೀದರ, ವಸಂತ ನರ್ಸಿಂಗ್ ಕಾಲೇಜ್ ನೌಬಾದ ಹಾಗೂ ಗುರುನಾನಕ್ ನರ್ಸಿಂಗ್ ಕಾಲೇಜ್ ಸಂಸ್ಥೆಗಳ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳಾದ ಡಾ. ಕಿರಣ ಪಾಟೀಲ್ ಮತ್ತು ಎಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ಡಾ.ಸುಲೋಚನಾ, ಜಿಲ್ಲಾ ಎನ್.ಸಿ.ಡಿ.ಕಾರ್ಯಕ್ರಮ ಸಂಯೋಜಕರು ಡಾ.ವೀರೇಶ ಬಿರಾದರ, ಜಿಲ್ಲಾ ಎಫ್. ಎಲ್.ಸಿ. ಪ್ರವೀಣ, ಜಿಲ್ಲಾ ಸರ್ವೇಕ್ಷಣಾ ಘಟಕದ ಸಿಬ್ಬಂದಿಗಳು ಜೊತೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯ ಸಿಬ್ಬಂದಿ ವರ್ಗದವರು ಈ ಅಭಿಯಾನದಲ್ಲಿ ಪಾಲ್ಗೊಂಡಿದ್ದರು. ಕಾರ್ಯಕ್ರಮವನ್ನು ಸಂಗಮೇಶ ಕಾಂಬ್ಳೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಸಂಚಾಲಿಸಿದರು.

# ವಿದ್ಯೆಯ ಜೊತೆಗೆ ಸಂಸ್ಕಾರ ಮುಖ್ಯ: ಸಂಗೀತಾ ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.6:ವಿದ್ಯಾರ್ಥಿಗಳು ವಿದ್ಯೆ, ಫಲಿತಾಂಶಕ್ಕೆ ಮಹತ್ವ ಕೊಡುವುದರ ಜೊತೆಗೆ ಉತ್ತಮ ಸಂಸ್ಕಾರಮೈಗೂಡಿಸಿಕೊಳ್ಳಬೇಕು' ಎಂದು ಬಾಪು ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಅಧ್ಯಕ್ಷೆ ಸಂಗೀತಾ ಪಾಟೀಲ ಹೇಳಿದರು.

ತಾಲ್ಲೂಕಿನ ಕಣಜಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಎಸ್.ಎಸ್. ಎಲ್.ಸಿ.ಫಲಿತಾಂಶ ಹೆಚ್ಚಳ ಹಾಗೂ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿ, 'ಮಕ್ಕಳು ಜ್ಞಾನವಂತರಾದರೆ ಸಾಲದು, ಗುಣವಂತರೂ ಆಗಬೇಕು. ಅಂದಾಗ ಮಾತ್ರ ಆರೋಗ್ಯಪೂರ್ಣ ಸಮಾಜ ರೂಪಿಸುವ ಸತ್ಪ್ರಜೆಗಳಾಗಲು ಸಾಧ್ಯ' ಎಂದು ತಿಳಿಸಿದರು.

'ಮಕ್ಕಳ ಸರ್ವತೋಮುಖ ವಿಕಾಸಕ್ಕಾಗಿ, ಶಿಕ್ಷಣದ ಹಕ್ಕಿನ ಜೊತೆಗೆ ಹಲವು ಹಕ್ಕುಗಳನ್ನು ನೀಡಲಾಗಿದ್ದು, ಹಕ್ಕು ಮತ್ತು ಅವಕಾಶಗಳನ್ನು ಬಳಸಿಕೊಂಡು ಮಕ್ಕಳು ಮೌಲ್ಯಯುತವಾದ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು' ಎಂದರು.

ಮುಖ್ಯಶಿಕ್ಷಕ ಸುಭಾಷ ಧರ್ಮಣ್ಣಾ ಮಾತನಾಡಿ, 'ಶಿಕ್ಷಕರು ವಿದ್ಯಾರ್ಥಿಗಳ ಶ್ರೇಯಸ್ಸಿಗೆ ಶ್ರಮಿಸಬೇಕು. ಪೋಷಕರು ಸಹ ತಮ್ಮ ಮಕ್ಕಳ ಕಲಿಕೆಗೆ ಪ್ರೋತ್ಸಾಹ ನೀಡಬೇಕು' ಎಂದು ಹೇಳಿದರು. ವಿದ್ಯಾರ್ಥಿಗಳು ಪಠ್ಯ ಕಲಿಕೆಯ ಜೊತೆಗೆ ಪರಿಸರ ಸಂರಕ್ಷಣೆ, ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ತೊಡಗಬೇಕು ಎಂದು ಸಲಹೆ ನೀಡಿದರು. ಪ್ರಮುಖರಾದ ಕಾಶಿನಾಥ ಪಾಟೀಲ ಸೇರಿದಂತೆ ಇತರರು ಹಾಜರಿದ್ದರು.

# ಕನ್ನಡದಲ್ಲಿ ಕುರಾನ್ ಪ್ರವಚನ ನಾಳೆಯಿಂದ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಫೆ.6:ಜಮಾಅತೆ ಇಸ್ಲಾಮಿ ಹಿಂದ್ ವತಿಯಿಂದ ಫೆ. 8 ಮತ್ತು 9ರಂದು ನಗರದ ಲುಂಬಿನಿ ಪಾರ್ಕ್ ಎದುರುಗಡೆ ಇರುವ ಈಡನ್ ಗಾರ್ಡನ್ ಹಾಲ್ ಮೈದಾನದಲ್ಲಿ ಕನ್ನಡದಲ್ಲಿ ಕುರ್‌ಅನ್ ಪ್ರವಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಮಂಗಳೂರಿನ ಮುಹಮ್ಮದ್ ಕುಂಞ ಪ್ರವಚನ ನೀಡಲಿದ್ದಾರೆ ಎಂದು ರಾಜ್ಯ ಸಲಹಾ ಸಮಿತಿ ಸದಸ್ಯ ಲಬೀದ್ ಶಾಫಿ ಹೇಳಿದರು.

ನಗರದಲ್ಲಿನ ಜಿಲ್ಲಾ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಯಾದಗಿರಿಯಲ್ಲಿ ಇದೇ ಮೊದಲ ಬಾರಿಗೆ ದೊಡ್ಡಪ್ರಮಾಣದಲ್ಲಿ ಇಂತಹ ಕಾರ್ಯಕ್ರಮ ನಡೆಸುತ್ತಿದ್ದು, ಸಾನಿಧ್ಯವನ್ನು ಹವಾಮಲ್ಲಿನಾಥ ಮಹಾರಾಜ, ಶಿವಾಚಾರ್ಯ




ರಾಯಚೂರಿನ ಶಿವಾಚಾರ್ಯ ಸ್ವಾಮೀಜಿ, ಗುರುಮಠಕಲ್ ಖಾಸಾ ಮಠದ ಶಾಂತವೀರ ಗುರುಮುರುಘ ರಾಜೇಂದ್ರ ಸ್ವಾಮೀಜಿ, ಹೈದರಾಬಾದ್ ಹಜರತ್ ಅಲ್ ಹಜ್ ಶಾಹ್ ಖಾಜಾ ಬಾವೊದ್ದೀನ್ ನಕ್ಷ್ ಬಂದಿಗುರುಗಳು, ಯಲ್ಹೇರ್ ಮತ್ತು ಅರಕೇರ ಬಿ. ಗುರುಲಿಂಗ ಸ್ವಾಮೀಜಿ. ಹಲ್ ಕಟ್ಟ ಹಜರತ್ ಆಜಾ ಸೈಯದ್ ಅಬು ತುರಬ್ ಖಾದ್ರಿ ಭಾಗವಹಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ, ಶಾಸಕರಾದ ಚೆನ್ನಾರೆಡ್ಡಿ ಪಾಟೀಲ ತುನ್ನೂರು, ರಾಜಾ ವೇಣುಗೋಪಾಲ ನಾಯಕ, ಶರಣಗೌಡ ಕಂದಕೂರ, ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಜಿಲ್ಲಾಧಿ ಕಾರಿ ಡಾ.ಸುಶೀಲಾ ಬಿ., ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯ ನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃತ್ವಿಕ್ ಶಂಕರ್, ಜಮಾಅತೆ ರಾಜ್ಯಾಧ್ಯಕ್ಷ ಮುಹಮ್ಮದ್ ಜಮಾತೆ ಇಸ್ಲಾಮಿ ಹಿಂದ್ ಡಾ.ಬೆಳಗಾಮಿ ಸಾದ್, ರಾಜ್ಯ ಕಾರ್ಯದರ್ಶಿ ಜ.ಯುಸುಫ್ ಕನ್ನಿ ಆಗಮಿಸಲಿದ್ದಾರೆ ಎಂದರು.

ಜಿಲ್ಲಾ ಸಂಚಾಲಕ ಮಿನಾಜುದ್ದೀನ್ ಹುಜರ್ ಮಾತನಾಡಿ, ಮಾನವ ಘನತೆ ಮತ್ತು ಜೀವನದ ಉದ್ದೇಶ ಎಂಬ ವಿಷಯದ ಮೇಲೆ ಕುರ್‌ಆನ್ ಪ್ರವಚನ ಹಮ್ಮಿಕೊಳ್ಳಲಾಗುತ್ತಿದೆ. ಸರ್ವಧರ್ಮಿಯ ಮಹಿಳೆಯರು ಹಾಗೂ ಪುರುಷರು ಹೆಚ್ಚಿನ ಸಂಖ್ಯೆಯಲ್ಲಿ ಎಂದು ಭಾಗವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ , ಗುಲಾಂ ಮಹೆಬೂಬ್, ಅಬ್ದುಲ್ ಮಜೀದ್ ಸಗ್ರಿ, ಜ್ಞಾನೇಶ್ವರ ಸಂದೇನಕರ್ ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.